ಬೆಂಗಳೂರು ಸಂಪುಟ: 16 ಸಂಚಿಕೆ: 43 ಪುಟ: 06 ಸೋಮವಾರ 06-01-2025

Mail:mussanje2010@gmail.com www.mussanjenews.com

ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB)
Executive Editor: L P Babu
Honourary Editor: Venkatesh



ಐಶ್ವರ್ಯಾ-ಆರಾಧ್ಯಾಗೆ ಅಭಿಷೇಕ್ ಭದ್ರತ

ರೀಲ್ ಜಗತ್ತಿನಲ್ಲಿ 'ಕೆಡಿ' ಹವಾ!

'ರೆಟ್ರೋ' ವಿಲನ್ ಖಡಕ್ ಇಲ್ಲ ಪುಟ 6

# ರಾಜ್ಯಕ್ಕೆ ಹೆಚ್ಎಂಪಿ

## ನಗರದಲ್ಲಿನ ಇಬ್ಬರು ಮಕ್ಕಳಲ್ಲಿ ಚೀನಾ ವೈರಸ್ ಪತ್ತೆ; ಮತ್ತೆ ಬಂತಾ ಕೊರೋನಾ ಮಾರಿ?

**ಬೆಂಗಳೂರು:** ಇಡೀ ಜಗತ್ತನ್ನೇ ಕಾಡಿದ್ದ ಕೋವಿಡ್-19 ವೈರಸ್ ಜನಮಾನಸದಿಂದ ದೂರಸರಿಯುವ ಮುನ್ನವೇ ಮತ್ತೆ ಹೆಚ್ಎಂಪಿವಿ ಎಂಬ ಚೀನಾ ವೈರಸ್ ದೇಶಕ್ಕೆ ಕಾಲಿಟ್ಟಿದ್ದು, ಕರ್ನಾಟಕದಲ್ಲೂ ಕೂಡ ಇಬ್ಬರು ಮಕ್ಕಳಲ್ಲಿ ಈ ವೈರಸ್ ಪತ್ತೆಯಾಗಿದೆ.

ಚೀನಾದಲ್ಲಿ ಕಾಣಿಸಿಕೊಂಡು ಕಳೆದ ಮೂರ್‍ನಾಲ್ಕು ದಿನಗಳಿಂದೆಯಷ್ಟೇ ಸುದ್ದಿಯಲ್ಲಿದ್ದ ವೈರಸ್ ಬಹು ವೇಗವಾಗಿ ಹರಡುತ್ತಿದೆ. ವೈರಸ್ ಕರ್ನಾಟಕಕ್ಕೂ ಕೂಡ ಕಾಲಿಟ್ಟಿದ್ದು ಎಂಟು ತಿಂಗಳ ಮಗು ಮತ್ತು 3 ತಿಂಗಳ ಮಗುವಿನಲ್ಲಿ ಕಾಣಿಸಿಕೊಂಡಿದೆ.

ಬೆಂಗಳೂರು ನಗರದಲ್ಲಿ ವೈರಸ್ ಪತ್ತೆಯಾಗಿರುವುದು ದೃಢಪಟ್ಟಿದ್ದು, ಸರ್ಕಾರ ಅಲರ್ಟ್ ಆಗಿದೆ. ಈ ಕುರಿತು ಆರೋಗ್ಯ ಇಲಾಖೆ ಇಂದು ಮಹತ್ವದ ಸಭೆ ನಡೆಸಿ ವೈರಸ್



ಹರಡದಂತೆ ಕ್ರಮ ಕೈಗೊಳ್ಳಲು ಮುಂದಾಗಿದೆ.

ಈ ಸಂಬಂಧ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಉನ್ನತ ಮಟ್ಟದ ಅಧಿಕಾರಿಗಳ ಸಭೆ ಕರೆದಿದ್ದಾರೆ. ಸಭೆಯಲ್ಲಿ ಈ ವೈರಸ್‌ನ ತೀವ್ರತೆ ಮತ್ತು ಅದರಿಂದ ಆಗಬಹುದಾದ ಅನಾಹುತಗಳ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆಯಲಿದ್ದಾರೆ. ಒಂದು ವೇಳೆ ಈ ವೈರಸ್ ಬಹುವೇಗವಾಗಿ ಹರಡುವ ಮುನ್ಸೂಚನೆ ದೊರೆತರೆ ಅದನ್ನು ತಡೆಗಟ್ಟುವ ಸಂಬಂಧ ಮತ್ತು ವೈರಸ್‌ಗೆ ನೀಡಬಹುದಾದ ಚಿಕಿತ್ಸೆ ಸಂಬಂಧ ಅಧಿಕಾರಿಗಳಿಂದ ಮಾಹಿತಿ ಪಡೆದಿದ್ದಾರೆ.

'ಹ್ಯೂಮನ್ ಮೆಟಾಪ್ನ್ಯೂಮೋ (ಎಚ್ಎಂಪಿವಿ) ಎಂಬ ವೈರಸ್ ಕೊರೋನಾ ರೂಪಾಂತರಿ ವೈರಸ್ ಎಂದು ಹೇಳಲಾಗುತ್ತಿದ್ದು, ಇದರ ಗುಣಲಕ್ಷಣಗಳು ಕೊರೋನಾಗಿಂತ ಭಿನ್ನವಾಗಿಲ್ಲ ಎನ್ನಲಾಗುತ್ತಿದೆ.

ತೀವ್ರ ಜ್ವರದಿಂದ ಬಳಲುತ್ತಿದ್ದ ಎಂಟು ತಿಂಗಳ ಮಗುವನ್ನು ನಗರದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಜ್ವರ ಕಡಿಮೆಯಾಗಾದ ಹಿನ್ನೆಲೆಯಲ್ಲಿ ಮಗುವಿನ ಪುಟ 2

## ಎಚ್ಎಂಪಿ ಮಾರ್ಗಸೂಚಿ ಪ್ರಕಟಿಸಿದ ದೆಹಲಿ

ನವದೆಹಲಿ: ಕೊರೊನಾ ವೈರಸ್ ಲಕ್ಷಣಗಳನ್ನೇ ಹೊಂದಿರುವ ಈ ಸೋಂಕು ಈಗಾಗಲೇ ನೆರೆಯ ದೇಶದಲ್ಲಿ ಆಂತಕ ಹೆಚ್ಚಿಸಿದೆ. ಈ ಸಂಬಂಧ ಭಾರತದಲ್ಲೂ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗಿದ್ದು, ದೆಹಲಿ ಆರೋಗ್ಯ ಅಧಿಕಾರಿಗಳು ಸಂಭಾವ್ಯ ಆರೋಗ್ಯ ಸವಾಲುಗಳನ್ನು ಎದುರಿಸಲು ಮಾರ್ಗಸೂಚಿ ಪ್ರಕಟಿಸಿದ್ದಾರೆ.

ಆರೋಗ್ಯ ಸೇವೆಗಳ ಮಹಾನಿರ್ದೇಶಕಿ ಡಾ.ವಂದನಾ ಬಗ್ಗಾ, ಜಿಲ್ಲಾ ಮುಖ್ಯ ವೈದ್ಯಕೀಯ ಅಧಿಕಾರಿಗಳು ಮತ್ತು ಐಡಿಎಸ್ಪಿಯ ರಾಜ್ಯ ಕಾರ್ಯಕ್ರಮಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ನಿರ್ಧರಿಸಿದ್ದಾರೆ.

ಈ ಸಭೆಯಲ್ಲಿ ಮಾಡಲಾದ ಶಿಫಾರಸಿನಂತೆ ಸೌಮ್ಯ ಜ್ವರ, ಕೆಮ್ಮು ಮತ್ತು ಶೀತ, ಉಸಿರಾಟ ಸಮಸ್ಯೆ ಸೇರಿದಂತೆ ಇನ್ಫ್ಲುಯೆಂಜಾ ರೀತಿಯ ಅನಾರೋಗ್ಯ ಮತ್ತು ತೀವ್ರ ಉಸಿರಾಟ ಸೋಂಕುಗಳಲ್ಲಿ ಐಎಚ್ಐಪಿ ಪೋರ್ಟ್ ಮೂಲಕ ವರದಿ ಮಾಡುವಂತೆ ಸೂಚಿಸಲಾಗಿದೆ. ಪುಟ 2



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಧಾನಸೌಧದ ಕಚೇರಿಯಲ್ಲಿ ನಿವೃತ್ತ ಮತ್ತು ಮಾಜಿ ಯೋಧರ ಸಂಘದ ಪದಾಧಿಕಾರಿಗಳ ಜೊತೆ ಸಭೆ ನಡೆಸಿ ಅವರ ಅಹವಾಲು ಮತ್ತು ಬೇಡಿಕೆಗಳನ್ನು ಆಲಿಸಿದರು.

## ಮಕ್ಕಳೊಂದಿಗೆ ದಂಪತಿ ಆತ್ಮಹತ್ಯೆ

ಬೆಂಗಳೂರು: ಇಬ್ಬರು ಮಕ್ಕಳನ್ನು ಕೊಂದು ಬಳಿಕ ದಂಪತಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಆರ್‌ಎಂವಿ 2ನೇ ಹಂತದಲ್ಲಿ ನಡೆದಿದೆ.

ಮೃತರನ್ನು ಅನೂಪ್ (38), ರಾಖಿ (35) ಮತ್ತು ಐದು ಹಾಗೂ 2 ವರ್ಷದ ಇಬ್ಬರು ಮಕ್ಕಳು ಎಂದು ಗುರುತಿಸಲಾಗಿದೆ. ಘಟನಾ ಸ್ಥಳಕ್ಕೆ ಸದಾಶಿವನಗರ ಠಾಣೆ ಪೊಲೀಸರು ಭೇಟಿ ನೀಡಿದ್ದು, ಪ್ರಾಥಮಿಕ ತನಿಖೆಯಲ್ಲಿ ಮಕ್ಕಳಿಬ್ಬರಿಗೂ ವಿಷಪ್ರಾಶನ ಮಾಡಿದ ಬಳಿಕ ದಂಪತಿ ಆತ್ಮಹತ್ಯೆ ಮಾಡಿಕೊಂಡಿರುವುದು ಕಂಡು ಬಂದಿದೆ ಎಂದಿದ್ದಾರೆ. ಉತ್ತರ ಪ್ರದೇಶದ ಅಲಹಾಬಾದ್ ಮೂಲದ ಅನೂಪ್, ಪತ್ನಿ ಹಾಗೂ ಇಬ್ಬರು ಮಕ್ಕಳೊಂದಿಗೆ ಬೆಂಗಳೂರಿನಲ್ಲಿ ವಾಸವಿದ್ದರು. ಖಾಸಗಿ ಕಂಪನಿಯೊಂದರಲ್ಲಿ ಸಾಫ್ಟ್‌ವೇರ್ ಕನ್ಸಲ್ಟೆಂಟ್ ಆಗಿ ಅನೂಪ್ ಕೆಲಸ ಮಾಡುತ್ತಿದ್ದರು. ಆರ್ಥಿಕ ನಷ್ಟದಿಂದ ಬೇಸತ್ತು ದಂಪತಿ ಪುಟ 2

## ಸೋಂಕು ಹರಡದಂತೆ ಸೂಕ್ತ ಕ್ರಮ

**ಬೆಂಗಳೂರು,:** ರಾಜ್ಯದಲ್ಲಿ ಹೆಚ್ ಎಂ ಪಿ ವಿ ವೈರಸ್ ನ ಎರಡು ಪ್ರಕರಣ ಪತ್ತೆಯಾದ ಹಿನ್ನಲೆಯಲ್ಲಿ , ಸೋಂಕು ಹರಡದಂತೆ ಸರ್ಕಾರ ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.



ಅವರು ಇಂದು ವಿಧಾನಸೌಧದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

ಚೈನಾ ದೇಶದಲ್ಲಿ ಹೆಚ್ ಎಂ ಪಿ ವಿ ವೈರಸ್ ಕಾಣಿಸಿಕೊಂಡಿದ್ದು, ಕರ್ನಾಟಕದಲ್ಲಿ ಈ ವೈರಸ್ ಪತ್ತೆಯಾಗಿರುವ ಮಾಹಿತಿ ದೊರೆತಿದೆ. ಆದ್ದರಿಂದ ಈ ವೈರಸ್ ಹರಡದಂತೆ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಲು ಆರೋಗ್ಯ ಇಲಾಖೆಗೆ ಸೂಚನೆ ನೀಡಲಾಗಿದೆ. ಆರೋಗ್ಯ ಸಚಿವರು ಈಗಾಗಲೇ ಸಭೆ ನಡೆಸುತ್ತಿದ್ದು, ವೈರಸ್ ತಡೆಗೆ ಆರೋಗ್ಯ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆಗಳು ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಲಿದೆ ಎಂದರು.

ಸೋಂಕು ತಡೆಯು ಕ್ರಮವಾಗಿ ವಿಮಾನ ನಿಲ್ದಾಣಗಳಲ್ಲಿ ಸ್ಕ್ರೀನಿಂಗ್ ಪುನ: ಪ್ರಾರಂಭಿಸುವ ಬಗ್ಗೆ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿ, ಈ ಬಗ್ಗೆ ಆರೋಗ್ಯ ಸಚಿವರು ಸಭೆ ನಡೆಸುತ್ತಿದ್ದು, ರಾಜ್ಯದಲ್ಲಿ ತೆಗೆದುಕೊಳ್ಳಬಹುದಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ತೀರ್ಮಾನಿಸಲಾಗುವುದು ಎಂದರು.

**ನಕ್ಸಲರು ಶರಣಾಗುವ ಸಾಧ್ಯತೆಯಿದೆ:**

ನಕ್ಸಲರ ಶರಣಾಗತಿಗೆ ಸರ್ಕಾರ ಸಿದ್ಧವಿದೆಯೇ ಎಂಬ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿ, ನಕ್ಸಲರು ಶರಣಾಗಲಿ ಎಂದು ಕರೆ ನೀಡಿದ್ದೇನೆ ಹಾಗೂ ನಕ್ಸಲರ ಮನ:ಪರಿವರ್ತನೆಯಾಗಿ ಶರಣಾಗುವ ಸಾಧ್ಯತೆಯಿದೆ. ಸಮಾಜದ ಮುಖ್ಯವಾಹಿನಿಗೆ ಅವರನ್ನು ಕರೆತರುವ ಪ್ರಕ್ರಿಯೆ ಜಾರಿಯಲ್ಲಿದೆ ಎಂದರು.

ಕೇಂದ್ರ ಸಚಿವ ಹೆಚ್ ಡಿ.ಕುಮಾರಸ್ವಾಮಿಯವರು ರಾಜ್ಯಸರ್ಕಾರದ ಕಮೀಷನ್ ಪ್ರಮಾಣ ಪುಟ 2

## ಸಿಲಿಂಡರ್ ಸ್ಫೋಟ: ಇಬ್ಬರಿಗೆ ಗಾಯ

**ಆನೇಕಲ್:** ಸಿಲಿಂಡರ್ ಸ್ಫೋಟಗೊಂಡು ಇಬ್ಬರಿಗೆ ಗಂಭೀರ ಗಾಯಗಳಾಗಿರುವ ಘಟನೆ ಆನೇಕಲ್ ತಾಳಲೂಖಿನ ಕಿತ್ತಾಗನಹಳ್ಳಿಯಲ್ಲಿ ಇಂದು ನಡೆದಿದೆ, ಕೇರಳ ಮೂಲದ ಸುನೀಲ್ ಜೋಸೆಫ್, ವಿಷ್ಣು ಜಯರಾಜ್ ಎಂಬವರು ಗಾಯಗೊಂಡವರು. ಸದ್ಯ ಗಾಯಾಳುಗಳಿಗೆ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದ್ದು, ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ ಎಂದು ತಿಳಿದುಬಂದಿದೆ. ಸೋಮವಾರ ಬೆಳಗ್ಗೆ ಸಂಭವಿಸ ಸಿಲಿಂಡರ್ ಸ್ಫೋಟದ ತೀವ್ರತೆಗೆ ಮನೆ ಗೋಡೆಗಳು, ಕಿಟಕಿ, ಬಾಗಿಲು ಛಿದ್ರವಾಗಿವೆ. ಅಕ್ಕಪಕ್ಕದ ನಾಲ್ಕೈದು ಮನೆಗಳು, ಕೆಲವು ವಾಹನಗಳಿಗೂ ಹಾನಿಯಾಗಿವೆ ಎಂದು ಹೇಳಲಾಗಿದೆ. ಘಟನೆ ಸಂಬಂಧ ಸೂರ್ಯಸಿಟಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

## ವಿದ್ಯಾರ್ಥಿ ಸಾವು

**ಬೆಂಗಳೂರು:** ಹಾಸ್ಟೆಲ್ ಕಟ್ಟಡದ 3ನೇ ಮಹಡಿಯಿಂದ ಆಕಸ್ಮಿಕವಾಗಿ ಬಿದ್ದು ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ (ಐಐಎಂ) ಸ್ನಾತಕೋತ್ತರ ವಿದ್ಯಾರ್ಥಿಯೋರ್ವ ಸಾವನ್ನಪ್ಪಿರುವ ದಾರುಣ ಘಟನೆ ಬನ್ನೇರುಘಟ್ಟ ರಸ್ತೆಯಲ್ಲಿ ನಡೆದಿದೆ. ಕೈಲಾಶ್‌ಭಾಯ್ ಪಟೇಲ್ (28) ಮೃತಪಟ್ಟ ವಿದ್ಯಾರ್ಥಿ. ಕಳೆದ ಜ.4ರಂದು ನಿಲಯ್ ತನ್ನ ಹುಟ್ಟುಹಬ್ಬವಿದ್ದ ಕಾರಣ ಸ್ನೇಹಿತರೊಂದಿಗೆ ಹೊರಗಡೆ ತೆರಳಿದ್ದ. ನಂತರ ಹಾಸ್ಟೆಲ್‌ನಲ್ಲಿರುವ ಸ್ನೇಹಿತನ ಕೊಠಡಿಯಲ್ಲಿ ನಿಲಯ್ ಹುಟ್ಟುಹಬ್ಬ ಆಚರಿಸಲಾಗಿತ್ತು. ಸ ಆಗತ್ತಿಲ್ಲ. ಪುಟ 2

## ರಾಷ್ಟ್ರಗೀತೆಗೆ ಅವಮಾನ; ಹೊರ ನಡೆದ ರಾಜ್ಯಪಾಲ

ತಮಿಳುನಾಡು: ರಾಷ್ಟ್ರಗೀತೆಗೆ ಅವಮಾನ ಮಾಡಿದ್ದಾರೆಂದು ಆರೋಪಿಸಿ ಭಾಷಣ ಮಾಡದೆ



ರಾಜ್ಯಪಾಲರು ಹೊರ ನಡೆದಿರುವ ಘಟನೆ ಪ್ರಸಕ್ತ ಸಾಲಿನ ವಿಧಾನಸಭೆಯ ಮೊದಲ ವಿಧಾನಸಭೆ ಅಧಿವೇಶನ ಪ್ರಾರಂಭದ ದಿನವಾದ ಇಂದು ನಡೆದಿದೆ.

ನಿಯಮಗಳ ಪ್ರಕಾರ ರಾಜ್ಯಪಾಲ ಆರ್.ಎನ್.ರವಿ ಅವರ ಭಾಷಣದೊಂದಿಗೆ ವಿಧಾನಸಭೆ ಅಧಿವೇಶನ ಆರಂಭ ವಾಗಬೇಕಿತ್ತು. ವಿಧಾನಸಭೆ ಅಧಿವೇಶನದ ಆರಂಭದಲ್ಲಿ ರಾಷ್ಟ್ರಗೀತೆ ಬದಲು ರಾಜ್ಯ ಗೀತೆಯನ್ನು ಹಾಡಲಾಯಿತು ಇದರಿಂದ ಬೇಸರಗೊಂಡ ರಾಜ್ಯಪಾಲರು ವಿಧಾನಸಭೆಯಿಂಂದ ಹೊರನಡೆದಿದ್ದಾರೆ ಎನ್ನಲಾಗಿದೆರಾಜ್ಯಗೀತೆ ಹಾಡಿದ ಬಳಿಕ ಪುಟ 2

## ಭಾರತದಲ್ಲಿಯೇ ಮೊದಲ ಪ್ರಕರಣ ಎಂಬುದು ತಪ್ಪು

**ಬೆಂಗಳೂರು:** ಮಗುವಿಗೆ ಹೆಚ್ಎಂಪಿವಿ ವೈರಸ್ ಸೊಂಕು ತಗುಲಿರುವುದು **ನಿಜ. ಆದರೆ** ಇದನ್ನು ಭಾರತದಲ್ಲಿಯೇ ಮೊದಲ ಪ್ರಕರಣ ಎಂದು ಬಣ್ಣಿಸುವುದು ತಪ್ಪು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಖಚಿತಪಡಿಸಿದ್ದಾರೆ. ಈ ಬಗ್ಗೆ ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, "ಹೆಚ್ಎಂಪಿವಿ ಮೊದಲಿನಿಂದಲೂ ಸಕ್ರಿಯವಾಗಿರುವ ವೈರಸ್ ಮತ್ತು ನಿರ್ದಿಷ್ಟ ಶೇಕಡಾವಾರು ಜನರು ಈ ವೈರಸ್‌ನಿಂದ ಪ್ರಭಾವಿತರಾಗಿದ್ದಾರೆ. ಇದು ಹೊಸದೇನಲ್ಲ. ವೈರಸ್ ಕಂಡುಬಂದ ಮಗುವಿಗೆ ಯಾವುದೇ ಟ್ರಾವೆಲ್ ಹಿಸ್ಟರಿ ಇಲ್ಲ. ಮಗುವಿನ



ಪೋಷಕರು ಸ್ಥಳೀಯ ಜನರಾಗಿದ್ದಾರೆ. ಅವರು ಚೀನಾ ಅಥವಾ ಮಲೇಷ್ಯಾದಿಂದ ಬಂದಿಲ್ಲ" ಎಂದು ಅವರು ಹೇಳಿದರು.

ಚೀನಾದಲ್ಲಿ ಹರಡಿರುವ ವೈರಸ್ ಮತ್ತು ಭಾರತದಲ್ಲಿ ಪತ್ತೆಯಾದ ವೈರಸ್ ನಡುವೆ ಸಂಬಂಧವಿದೆಯೇ ಎಂಬುದನ್ನು ನಿರಾಕರಿಸಿದ ಸಚಿವರು, "ಹೆಚ್ಎಂಪಿವಿಯ ಹೊಸ ರೂಪಾಂತರದಿಂದಾಗಿ ಚೀನಾದಲ್ಲಿ ಏಕಾಏಕಿ ಸೋಂಕು ಕಂಡುಬಂದಿದೆ. ಅದರ ಬಗ್ಗೆ ನಮಗೆ ಇನ್ನೂ ಯಾವುದೇ ವಿವರಗಳಿಲ್ಲ. ಆದರೆ ಹೆಚ್ಎಂಪಿವಿ ಬಹಳ ಹಿಂದಿನಿಂದಲೂ ಇದೆ. ಇದು ಶೀತ, ಕೆಮ್ಮು ಮತ್ತು ಜ್ವರದಂತಹ ಸಾಮಾನ್ಯ ಪುಟ 2

## ಹಿರಿಯ ಸಾಹಿತಿ ನಾ. ಡಿಸೋಜ ಇನ್ನಿಲ್ಲ

**ಶಿವಮೊಗ್ಗ:** ವಯೋಸಹಜ ಕಾಯಿಲೆಗಳಿಂದ ಬಳಲುತ್ತಿದ್ದ ಹಿರಿಯ ಸಾಹಿತಿ ನಾ. ಡಿಸೋಜ (87) ಅವರು ಭಾನುವಾರ ಮಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾಗಿದ್ದಾರೆ.



ಈ ಕುರಿತು ಅವರ ಪುತ್ರ ನವೀನ್ ಡಿಸೋಜ ಅವರು ಸಾಮಾಜಿಕ ಜಾಲತಾಣದ ಮೂಲಕ ತಿಳಿಸಿದ್ದಾರೆ.

ಶಿವಮೊಗ್ಗ ಜಿಲ್ಲೆ ಸಾಗರ ಪಟ್ಟಣದ ನಿವಾಸಿಯಾದ ನಾ. ಡಿಸೋಜ ಅವರು ಕೆಲ ದಿನಗಳಿಂದ ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದರು. ಇವರನ್ನು ಮಂಗಳೂರಿನ ಫಾದರ್ ಮಿಲ್ಲರ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಭಾನುವಾರ ರಾತ್ರಿ ಸುಮಾರು 7:50 ರ ಸುಮಾರಿಗೆ ಚಿಕಿತ್ಸೆ ಫಲಿಸದೇ ಮೃತಪಟ್ಟಿದ್ದಾರೆ. ನಾ. ಡಿಸೋಜ ಅವರ ಪಾರ್ಥಿವ ಶರೀರವನ್ನು ಸೋಮವಾರ ಮಧ್ಯಾಹ್ನ ಸಾಗರಕ್ಕೆ ತಂದು, ಅಲ್ಲಿನ ಗಾಂಧಿ ಮೈದಾನದಲ್ಲಿ ಅಂತಿಮ ಪುಟ 2


## 40% ಆರೋಪಕ್ಕೆ ಕಾಂಗ್ರೆಸ್ ಏನು ದಾಖಲೆ ಕೊಟ್ಟಿದೆ

ಹುಬ್ಬಳ್ಳಿ: ರಾಜ್ಯ ಸರ್ಕಾರದ 60% ಕಮಿಷನ್ ಆರೋಪಕ್ಕೆ ದಾಖಲೆ ಕೊಡಿ ಎನ್ನುವ ಸಿಎಂ ಸಿದ್ಧರಾಮಯ್ಯ ಅವರು ನಮ್ಮ ಆಡಳಿತದಲ್ಲಿ 40 % ಸರಕಾರ ಎಂದರಲ್ಲ ಆವಾಗ ಏನು ದಾಖಲೆ ಕೊಟ್ಟಿದ್ದರು. ಇದುವರೆಗೂ ದಾಖಲೆ ಕೊಟ್ಟಿಲ್ಲ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಹುಬ್ಬಳ್ಳಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸರಕಾರ ಯಾವ ರೀತಿ ನಡೆದುಕೊಳ್ಳತ್ತಿದೆ ಅಂತಾ ಗೊತ್ತು. ಪ್ರತಿಯೊಂದು ಇಲಾಖೆಯಲ್ಲಿ ಭ್ರಷ್ಟಾಚಾರ ತುಂಬಿ ತುಳಕುತ್ತಿದೆ. ಯಾವುದೇ ಅಭಿವೃದ್ಧಿ ಕೆಲಸ ಇಲ್ಲ. ಪ್ರತಿಯೊಂದು ಇಲಾಖೆಯಲ್ಲಿ ಭ್ರಷ್ಟಾಚಾರ ತಾಂಡವ ಆಡುತ್ತಿದೆ. ಯಾವುದೇ ಇಲಾಖೆಯಲ್ಲಿ ಕೆಲ

ಎಲ್ಲ ವರ್ಗದ ಜನರಿಗೆ ಭ್ರಷ್ಟಾಚಾರದ ಬಿಸಿ ಮುಟ್ಟಿದೆ. ಇನ್ನೂ ಏನೂ ಆಗಿಲ್ಲ ಎಂದು ಮುಖ್ಯಮಂತ್ರಿಗಳು ವರ್ತಿಸುತ್ತಿರುವುದು ಭ್ರಷ್ಟಾಚಾರ ಮುಚ್ಚಿ ಹಾಕುವ ಪ್ರಯತ್ನ ಎಂದು ಆರೋಪಿಸಿದರು.

ನಾವು ಗ್ಯಾರಂಟಿ ಜಾರಿ ಮಾಡಿದ್ದೇವೆ ನೀವು ಏನು ಮಾಡಿದ್ದೀರಿ ಎಂಬ ಕಾಂಗ್ರೆಸ್ ಆರೋಪ ಮಾಡಿರುವ ಕುರಿತು ಕೇಳಿದ ಪ್ರಶ್ನೆಗೆ ಯಡಿಯೂರಪ್ಪ ಅವರ ಅವಧಿಯಲ್ಲಿ ರೈತರ ಪಂಪ್ ಸೆಟ್ ಗಳಿಗೆ ಉಚಿತ ವಿದ್ಯುತ್ ಯೋಜನೆ ಜಾರಿ ಮಾಡಿದ್ದೇವೆ. ಹೆಣ್ಣು ಮಗು ಹುಟ್ಟಿದರೆ ಭಾಗ್ಯಲಕ್ಷ್ಮೀ ಯೋಜನೆ ಜಾರಿ ಮಾಡಿದ್ದೇವೆ. ರೈತರ ಮಕ್ಕಳಿಗೆ ವಿದ್ಯಾನಿಧಿ ಯೋಜನೆ ಜಾರಿ ಮಾಡಿದ್ದೇವೆ. ಇವೆಲ್ಲವನ್ನು



ಕಾಂಗ್ರೆಸ್ ಕೊಟ್ಟಿದಿಯಾ. ಆಶಾ, ಅಂಗನವಾಡಿ ಕಾರ್ಯಕರ್ತರಿಯೆ ಸಾಕಷ್ಟು ಸೌಲಭ್ಯ ಮಾಡಿದವು ಇವರೇನು ಮಾಡಿದರು ಒಂದು ರಸ್ತೆ ಸರಿ ಇಲ್ಲ ಎಂದು ಆರೋಪಿಸಿದರು.

ಅಮಿತಾ ಶಾ ಅಂಬೇಡ್ಕರ್ ಕುರಿತು ಹೇಳಿಕೆ ಕುರಿತು ಕಾಂಗ್ರೆಸ್ ಪ್ರತಿಭಟನೆ ವಿಚಾರ ಡಾ.ಅಂಬೇಡ್ಕರ್ ಅವರು ಬದುಕಿದ್ದಾಗ ಕಾಂಗ್ರೆಸ್ ಹೇಗೆ ನಡೆದುಕೊಂಡಿದೆ ಅನ್ನುವುದು ಇವತ್ತಿನ ಯುವ ಜನತೆಗೆ ಬಹಿರಂಗವಾಗಿದೆ. ಸಂಸತ್ತಿನಲ್ಲಿ ಎರಡು ದಿನ ನಡೆದ ಚರ್ಚೆಯಲ್ಲಿ ಕಾಂಗ್ರೆಸ್ ಸಂವಿಧಾನ ವಿರೋಧಿ ಹಾಗೂ ಅಂಬೇಡ್ಕರ್ ವಿರೋಧಿ ಅನ್ನುವುದು ಸ್ಪಷ್ಟವಾಗಿದೆ.

ತಾವು ಮಾಡಿರುವ ಅಪರಾಧವನ್ನು ಮುಚ್ಚಿ ಹಾಕಿಕೊಳ್ಳಲು ಅಮಿತ್ ಶಾ ಅವರ ಹೇಳಿಕೆಯನ್ನು ತಿರುಚುವ ಕೆಲಸ ಮಾಡುತ್ತಿದ್ದಾರೆ. ಅವರಿಗೆ ಅಂಬೇಡ್ಕರ್ ಬಗ್ಗೆ ಗೌರವ ಇದ್ದರೆ, ಮೊದಲು ಅಂಬೇಡ್ಕರ್ ಗೆ ಅವರ ಹಿರಿಯರು ಮಾಡಿರುವ ಅಪಮಾನಕ್ಕೆ ಪ್ರಾಯಶ್ಚಿತ ಮಾಡಿಕೊಳ್ಳಲಿ ಎಂದು ಹೇಳಿದರು.

ಬಸ್ ದರ ಏರಿಕೆ ಜನ ವಿರೋಧಿ ತೀರ್ಮಾನ, ಜನರೇ ಈ ಬಗ್ಗೆ ಆಕ್ರೋಶ ಹೊರಹಾಕುತ್ತಿದ್ದಾರೆ. ಅವರು ಶಕ್ತಿ ಯೋಜನೆ ಮಾಡಿ ಅದಕ್ಕೆ ನೀಡಬೇಕಾದ ಹಣ ಸರಿಯಾಗಿ ನೀಡುತ್ತಿಲ್ಲ. ಆ ಯೋಜನೆಯಿಂದ ಯುವಜನತೆಗೆ, ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದೆ. ಹೆಚ್ಚಿನ ಬಸ್ ಗಳನ್ನೂ ನೀಡುತ್ತಿಲ್ಲ. ನಾನು ಸಿಎಂ ಆಗಿದ್ದಾಗ ಘೋಷಣೆ ಮಾಡಿರುವ ಬಸ್ ಗಳೆ ಈಗ ಬರುತ್ತಿವೆ. ಸಾಲ ಅವರ ಕಾಲದಿಂದಲೂ ಇದೆ. ಕೊವಿಡ್ ಸಂದರ್ಭದಲ್ಲಿ ತೊಂದರೆ ಆದಾಗ ಯಡಿಯೂರಪ್ಪ ಅವರು ಸಹಾಯ ಮಾಡಿದ್ದರು, ನಮ್ಮ ಕಾಲದಲ್ಲಿ ಯಾವುದೇ ಹೊರೆಯಾಗದಂತೆ ನೋಡಿಕೊಂಡಿದ್ದೇವು. ಇವರು ಡಿಸೆಲ್ ದುಡ್ಡು ಕಟ್ಟಲು ಆಗದ ಪರಿಸ್ಥಿತಿಗೆ ತಂದಿದ್ದಾರೆ.

ಅವರು ಗ್ಯಾರೆಂಟಿ ಯೋಜನೆಗಳಿಗೆ ಸರಿಯಾಗಿ ಸಂಪನ್ಮೂಲ ಕ್ರೋಢಿಕರಣ ಮಾಡಲಾಗದೆಪುಟ 2

## ಶಿಂಧೆಗೆ ಕೊಲೆ ಬೆದರಿಕೆ; ಬಂಧನ

**ಥಾಣೆ:** ಮಹಾರಾಷ್ಟ್ರದ ಉಪ ಮುಖ್ಯಮಂತ್ರಿ ಏಕನಾಥ್ ಶಿಂಧೆ ಅವರಿಗೆ ಬೆದರಿಕೆ ಹಾಕಿದ 26 ವರ್ಷದ ಯುವಕನ ವಿರುದ್ಧ ಪೊಲೀಸರು ಎಫ್‌ಐಆರ್ ದಾಖಲಿಸಿ, ಬಂಧಿಸಿದ್ದಾರೆ. ಥಾಣೆ ನಗರದ ವರ್ಲಿ ಪಂಡದ ನಿವಾಸಿ ಹಿತೇಶ್ ಧೇಂಡೆ ಬೆದರಿಕೆ ಹಾಕಿದ ಆರೋಪಿ ಎಂದು ಶ್ರೀ ನಗರ ಪೊಲೀಸ್ ಠಾಣೆಯ ಹಿರಿಯ ಇನ್ಸ್‌ಪೆಕ್ಟರ್ ಗುಲ್ಜಾರಿಲ್ಲ್ ಫಧ್ಧೆರೆ ಮಾಹಿತಿ ನೀಡಿದ್ದಾರೆ. ಸಾಮಾಜಿಕ ಮಾಧ್ಯಮದ ಪೋಸ್ಟ್‌ನಲ್ಲಿ ಉಪ ಮುಖ್ಯಮಂತ್ರಿ ವಿರುದ್ಧ ಅವಹೇಳನಕಾರಿ ಪದ ಬಳಸಿ ಕೊಲ್ಲುವುದಾಗಿ ಬೆದರಿಕೆ ಹಾಕಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ ಶಿಂಧೆ ನೇತೃತ್ವದ ಶಿವಸೇನಾ ಕಾರ್ಯಕರ್ತರು ನೀಡಿದ ದೂರಿನ ಆಧಾರದ ಮೇಲೆ ಪೊಲೀಸರು ಭಾರತೀಯ ನ್ಯಾಯ ಸಂಹಿತಾ ಸೆಕ್ಷನ್‌ಗಳಾದ 133, 352, 351(1) (ಬೆದರಿಕೆ) ಮತ್ತು 356 (2) (ಮಾನನಷ್ಟ) ಪ್ರಕರಣ ದಾಖಲಿಸಿದ್ದು, ತನಿಖೆ ಆರಂಭಿಸಿದ್ದಾರೆ.

# ನಾಳೆ ಮೈಸೂರು ಬಂದ್‌ಗೆ ಕರೆ

**ಮೈಸೂರು:** ಸಂವಿಧಾನ ಶಿಲ್ಪಿ ಡಾ.ಬಿ.ಆರ್ ಅಂಬೇಡ್ಕರ್ ಬಗ್ಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿಕೆ ಖಂಡಿಸಿ ಡಾ. ಬಿ.ಆರ್ ಅಂಬೇಡ್ಕರ್ ಅಭಿಮಾನಿಗಳ ಹೋರಾಟ ಸಮಿತಿಯಿಂದ ನಾಳೆ ಮೈಸೂರು ಬಂದ್‌ಗೆ ಕರೆ ನೀಡಲಾಗಿದ್ದು ವಿವಿಧ ಸಂಘಟನೆಗಳು ಬೆಂಬಲ ಸೂಚಿಸಿವೆ.

ನಾಳಿನ ಮೈಸೂರು ಬಂದ್ ಗೆ ಪ್ರಗತಿಪರ ಸಂಘಟನೆ, ಅಂಬೇಡ್ಕರ್ ಸಂಘ, ಪೌರ ಕಾರ್ಮಿಕರ ಸಂಘಗಳು ಬೆಂಬಲ ಸೂಚಿಸಿದ್ದು, ನಾಳೆ ಮೈಸೂರಿನಲ್ಲಿ ಕರ್ತವ್ಯಕ್ಕೆ ಹಾಜರಾಗದಿರಲು ಪೌರ ಕಾರ್ಮಿಕರು ನಿರ್ಧಾರ ಮಾಡಿದ್ದಾರೆ ಎನ್ನಲಾಗಿದೆ. ಇನ್ನು ಮೈಸೂರಿನ ಟೌನ್ ಹಾಲ್ ಮುಂಭಾಗ ವೇದಿಕೆ ನಿರ್ಮಾಣ ಮಾಡಲಾಗಿದ್ದು ಮೈಸೂರು ಬಂದ್ ಗೆ ಬೆಂಬಲ ಕೋರಿ ಸಂಘಟನೆ ಮುಖಂಡರು ಕರ ಪತ್ರ ಹಂಚುತ್ತಿದ್ದಾರೆ.

ಮೈಸೂರು ಬಂದ್‌ಗೆ ಕರ್ನಾಟಕ ರಾಜ್ಯ ರೈತ ಸಂಘ ಬಡಗಲಪುರ ನಾಗೇಂದ್ರ ಬಣ ಬೆಂಬಲ ಸೂಚಿಸಿ ಪತ್ರ ಬರೆದಿದೆ. ಇನ್ನು ಬಂದ್ ಗೆ ಮೈಸೂರು ಹೋಟೆಲ್ ಮಾಲೀಕರ ಸಂಘದಿಂದ ನೈತಿಕ ಬೆಂಬಲ ನೀಡಿದೆ. ಹೋಟೆಲ್ ಮುಚ್ಚದೆ ಬಂದ್‌ಗೆ ನೈತಿಕ ಬೆಂಬಲ ನೀಡಲಾಗುತ್ತದೆ ಎಂದು ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ ನಾರಾಯಣ್ ಗೌಡ ಮಾಹಿತಿ ನೀಡಿದ್ದಾರೆ.ನಮಗೆ ಬಾಬಾಸಾಹೇಬ್ ಡಾ ಬಿ.ಆರ್. ಅಂಬೇಡ್ಕರ್ ಅವರ ಬಗ್ಗೆ ಅಪಾರ ಗೌರವ ಇದೆ.

ನಮ್ಮದು ಆತಿಥ್ಯದ ಉದ್ಯಮ ಅಗತ್ಯ ಸೇವೆಗಳಡಿಯಲ್ಲಿ ಬರುತ್ತದೆ. ವಿವಿಧ ರಾಜ್ಯಗಳಿಂದ ಆಗಮಿಸಿದ ಪ್ರವಾಸಿಗರಿಗೆ, ಆಸ್ಪತ್ರೆಯ ರೋಗಿಗಳಿಗೆ ಊಟೋಪಚಾರ, ಕುಡಿಯುವ ನೀರು ಅತ್ಯಂತ ಅಗತ್ಯವಾಗಿರುತ್ತದೆ . ಸೇವೆ ನೀಡುವವರಿಗೆ ಸರ್ಕಾರ ಬೆಂಬಲವಾಗಿ ನಿಲ್ಲಬೇಕು. ಬಂದ್ ದಿನ ಕಪ್ಪು ಪಟ್ಟಿ ಧರಿಸಿ ಬಂದ್ ಗೆ ಬೆಂಬಲ ನೀಡುತ್ತೇವೆ. ಪ್ರತಿಭಟನೆಯಲ್ಲಿ ಹೋಟೆಲ್ ಮಾಲೀಕರು ಭಾಗಿಯಾಗುತ್ತಾರೆ. ಆದರೆ ಹೋಟೆಲ್ ಬಂದ್ ಮಾಡುವುದಿಲ್ಲ ಎಂದು ತಿಳಿಸಿದ್ದಾರೆ.

**ಬಂದ್ ಗೆ ಕೆ. ಎಸ್ ಶಿವರಾಮ್ ಬೆಂಬಲ.**

ನಾಳಿನ ಮೈಸೂರು ಬಂದ್ ಗೆ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾಗೃತಿ ವೇದಿಕೆ ರಾಜ್ಯಾಧ್ಯಕ್ಷ ಕೆ ಎಸ್ ಶಿವರಾಮ್ ಬೆಂಬಲ ನೀಡಿದ್ದಾರೆ.

ಈ ಕುರಿತು ಮಾತನಾಡಿರುವ ಕೆ.ಎಸ್ ಶಿವರಾಮ್, ಪ್ರಧಾನಿ ನರೇಂದ್ರ ಮೋದಿ ಅವರು ಅಮಿತ್ ಶಾ ರಾಜೀನಾಮೆ ಪಡೆಯಬೇಕು. ಈ ನಿಟ್ಟಿನಲ್ಲಿ ನಾಳೆ ಮೈಸೂರು ಬಂದ್ ಮೂಲಕ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸುತ್ತೇವೆ. ಈಗಾಗಲೇ ಹಲವಾರು ಸಂಘಟನೆ ಮುಖಂಡರನ್ನ ಭೇಟಿ ಮಾಡಿದ್ದೇವೆ. ಹೋಟೆಲ್ ಮಾಲೀಕರ ಸಂಘ, ಕನ್ನಡಪರ ಸಂಘಟನೆ, ರೈತ ಸಂಘಟನೆ ಸಾರ್ವಜನಿಕರನ್ನು ಕೂಡ ಮನವಿ ಮಾಡಿದ್ದೇವೆ. ಪ್ರಗತಿಪರರ ಸಂಘಟನೆಗಳು ಕೂಡ ಬೆಂಬಲ ಸೂಚಿಸಿವೆ.

ನಾಳಿನ ಬಂದ್ ಶಾಂತಿಯುತವಾಗಿ ಇರುತ್ತದೆ. ಮೈಸೂರಿನ ಜನತೆ ಕೂಡ ಈ ಬಂದ್ ಗೆ ಬೆಂಬಲ ನೀಡಬೇಕು. ಬಂದ್ ವಿಚಾರಕ್ಕೆ ಒಂದಷ್ಟು ತಂಡಗಳನ್ನ ಮಾಡಿಕೊಳ್ಳಲಾಗಿದೆ. ಮೈಸೂರು ನಗರದ ಹಲವು ಕಡೆ ಪ್ರತಿಭಟನೆ ಮಾಡಲಾಗುತ್ತದೆ ಎಂದು ತಿಳಿಸಿದರು.

## ಪಿಎಫ್‌ಐಗೆ ಹಣ ಪೂರೈಸುತ್ತಿದ್ದ ಆರೋಪಿ ಎನ್‌ಐಎ ಬಲೆಗೆ

**ಬೆಂಗಳೂರು:** ದೇಶದಲ್ಲಿ ನಿಷೇಧಿತ ಪಿಎಫ್‌ಐ ಸಂಘಟನೆಯ ಉಗ್ರ ಕೃತ್ಯಗಳಿಗೆ ದುಬೈನಿಂದ ಹಣ ಸಂಗ್ರಹಿಸಿ ಕರ್ನಾಟಕ ಹಾಗೂ ಕೇರಳದ ಕಾರ್ಯಕರ್ತರ ಮೂಲಕ ಬಿಹಾರಕ್ಕೆ ತಲುಪಿಸುತ್ತಿದ್ದ ಆರೋಪಿಯನ್ನು ಎನ್‌ಐಎ ಅಧಿಕಾರಿಗಳು ಬಂಧಿಸಿದ್ದಾರೆ.

ಬಿಹಾರದ ಪೂರ್ವ ಚಂಪಾರಣ್ ಜಿಲ್ಲೆಯ ಮೊಹಮ್ಮದ್ ಸಜ್ಜಾದ್ ಆಲಂ ಬಂಧಿತ ಆರೋಪಿ.

ದೆಹಲಿಯ ಇಂದಿರಾಗಾಂಧಿ ಅಂತಾ ರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿಳಿಯುತ್ತಿದ್ದಂತೆ ಬಂಧಿಸಲಾಗಿದೆ. ದೇಶ ವಿರೋಧಿ ಚಟುವಟಿಕೆಗಳಲ್ಲಿ ತೊಡಗಿದ್ದ ಪಿಎಫ್‌ಐ ಕಾರ್ಯಕರ್ತರ ವಿರುದ್ಧ 2022ರ ಜುಲೈನಲ್ಲಿ ಬಿಹಾರದ ಫುಲ್ವಾರಿ ಷರೀಫ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಬಳಿಕ ಪ್ರಕರಣದ ತನಿಖೆಯನ್ನು ಎನ್‌ಐಎ ಕೈಗೆತ್ತಿಕೊಂಡಿತ್ತು. ಆರೋಪಿಗಳು ಪಿಎಫ್‌ಐ ಸಂಘಟನೆಯ ಮೂಲಕ ಜನರ ನಡುವೆ ಧರ್ಮ, ಮತೀಯ ದ್ವೇಷ ಮೂಡಿಸುತ್ತಿದ್ದಾರೆ. ಆ ಮೂಲಕ ದೇಶದ ಶಾಂತಿ ಮತ್ತು ಸೌಹಾರ್ದತೆಗೆ ಧಕ್ಕೆಯುಂಟು ಮಾಡುತ್ತಿದ್ದಾರೆ ಎಂಬುದು ಎನ್‌ಐಎ ತನಿಖೆ ವೇಳೆ ಬಹಿರಂಗವಾಗಿತ್ತು. ಪ್ರಕರಣದಲ್ಲಿ ಇದುವರೆಗೂ 17 ಆರೋಪಿಗಳನ್ನು ಬಂಧಿಸಲಾಗಿತ್ತು. ಮೊಹಮ್ಮದ್ ಸಜ್ಜಾದ್‌ನನ್ನು 18ನೇ ಆರೋಪಿಯಾಗಿ ಬಂಧಿಸಲಾಗಿದೆ ಎಂದು ಎನ್‌ಐಎ ತಿಳಿಸಿದೆ.

# ನೌಕರರಿಗೆ ಚಿಕಿತ್ಸೆ ನೀಡುವಲ್ಲಿ ಉದಾಸೀನ ಮಾಡಕೂಡದು

**ಬೆಂಗಳೂರು:** ನಮ್ಮ ಸಾರಿಗೆ ನೌಕರರು ಮತ್ತು ಕುಟುಂಬದವರನ್ನು ಯಾವುದೇ ಕಾರಣಕ್ಕೂ ನಿರ್ಲಕ್ಷ್ಯದಿಂದ ಕಾಣಬಾರದು. ಚಿಕಿತ್ಸೆ ನೀಡುವಲ್ಲಿ ಉದಾಸೀನ ಮಾಡಕೂಡದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಖಾಸಗಿ ಆಸ್ಪತ್ರೆಗಳಿಗೆ ಸಿಎಂ ಸ್ಪಷ್ಟ ಸೂಚನೆ ನೀಡಿದರು.

ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ನೌಕರರು ಮತ್ತು ಸಿಬ್ಬಂದಿಗೆ ನಗದು ರಹಿತ ಆರೋಗ್ಯ ಸವಲತ್ತು ಯೋಜನೆಯನ್ನು ಉದ್ಘಾಟಿಸಿ ಅವರುಮಾತನಾಡಿದರು.

ಸಾರಿಗೆ ನೌಕರರು ತಮ್ಮ ದುಡಿಮೆಯ ಮೂಲಕ ಸಂಸ್ಥೆಯ ಮತ್ತು ನಿಗಮದ ಆದಾಯ ಹೆಚ್ಚಿಸುತ್ತಿದ್ದಾರೆ. ಇವರ ಆರೋಗ್ಯ ಸರ್ಕಾರದ ಮತ್ತು ಸಂಸ್ಥೆ ಹಾಗೂ ನಿಗಮದಜವಾಬ್ದಾರಿ ಆಗಿದೆ. ಈ ಕಾರಣಕ್ಕೇ ಖಾಸಗಿ ಆಸ್ಪತ್ರೆಗಳ ಜೊತೆಗೂ ಒಡಂಬಡಿಕೆ ಮಾಡಿಕೊಂಡಿದ್ದೇವೆ ಎಂದರು.

275 ಖಾಸಗಿ ಆಸ್ಪತ್ರೆಗಳ ಜೊತೆಗೆ ಒಡಂಬಡಿಕೆ ಆಗಿದೆ. ಈ



ಪ್ರಮಾಣ ಇನ್ನೂ ಹೆಚ್ಚಲಿದೆ. ಸಿಬ್ಬಂದಿ ಕರ್ತವ್ಯನಿರತ ಊರಿನಲ್ಲೇ ಚಿಕಿತ್ಸೆ ಪಡೆಯಬಹುದು. ನೌಕರರ ಕುಟುಂಬದವರು ಅವರು ನೆಲೆಸಿರುವ ಊರಿನಲ್ಲೇ ನಗದು ರಹಿತವಾಗಿ ಚಿಕಿತ್ಸೆ ಪಡೆಯಬಹುದಾದ ಅತ್ಯಂತ ಸುಲಲಿತ ಯೋಜನೆ ಇದಾಗಿದೆ. ನಮ್ಮ ನೌಕರರು ಮತ್ತು ಕುಟುಂಬದವರು ಇದರ ಸದುಪಯೋಗ ಪಡಿಸಿಕೊಳ್ಳಿ ಎಂದು ಕರೆ ನೀಡಿದರು.

ಸಮಾಜದಲ್ಲಿ ಲಿಂಗ ತಾರತಮ್ಯ ಇರುವುದರಿಂದ ಮಹಿಳೆಯರ ಆರ್ಥಿಕ ಸಾಮರ್ಥ್ಯ ಹೆಚ್ಚಿಸಲು ಶಕ್ತಿ ಮತ್ತು ಇತರೆ ಯೋಜನೆಗಳ ಮೂಲಕ ಮಹಿಳೆಯರಿಗೆ ಅನುಕೂಲ ಮತ್ತು ಶಕ್ತಿ ಹೆಚ್ಚಿಸಿದ್ದೇವೆ ಎಂದರು.

ಶಕ್ತಿ ಯೋಜನೆ ಪರಿಣಾಮ ಧಾರ್ಮಿಕ ಸ್ಥಳಗಳು ಮತ್ತು ಪ್ರವಾಸೋದ್ಯಮ ಸಂಸ್ಥೆಗಳಿಗೆ ಭಕ್ತರ ಮತ್ತು ಪ್ರವಾಸಿಗರ ಸಂಖ್ಯೆ ಹೆಚ್ಚಾಗಿದೆ. ಈ ಬಗ್ಗೆ ಧರ್ಮಸ್ಥಳದ ಧರ್ಮಾಧಿಕಾರಿಗಳೂ ನನಗೂ ಪತ್ರ ಬರೆದಿದ್ದಾರೆ ಎಂದು ಉಲ್ಲೇಖಿಸಿದರು.



ಮೈಸೂರು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಕಾವೇರಿ ನಿವಾಸದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಚರ್ಚಿಸಿದರು. ಮೈಸೂರು ಉಸ್ತುವಾರಿ ಸಚಿವ ಹೆಚ್.ಸಿ.ಮಹದೇವಪ್ಪ ಉಪಸ್ಥಿತರಿದ್ದರು.

## ಹೆಚ್‌ಡಿಕೆ ಸೋಲಿನ ಹತಾಶೆಯಲ್ಲಿದ್ದಾರೆ, ಹಿಟ್ ಅಂಡ್ ರನ್ ಬೇಡ

**ಬೆಂಗಳೂರು:** "ಕುಮಾರಸ್ವಾಮಿ ತಮ್ಮ ಮಗನ ಸೋಲಿನ ಹತಾಶೆಯಲ್ಲಿದ್ದಾರೆ. ಭ್ರಷ್ಟಾಚಾರದ ಬಗ್ಗೆ ಸಾಕ್ಷಿ ಇದ್ದರೆ ಕೊಡಲಿ" ಎಂದು ಸಚಿವ ಎಂ. ಬಿ. ಪಾಟೀಲ್ ಎಂದು ಹೇಳಿದರು.

ಸದಾಶಿವನಗರ ನಿವಾಸದ ಬಳಿ ಇಂದು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರದ ವಿರುದ್ಧ ಕೇಂದ್ರ ಸಚಿವ ಕುಮಾರಸ್ವಾಮಿ 60% ಕಮಿಷನ್ ಆರೋಪ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, "ಕುಮಾರಸ್ವಾಮಿಯವರಿಗೆ ಮೊನ್ನೆ ನಡೆದ ಚುನಾವಣೆಯಲ್ಲಿ ಹಿನ್ನಡೆಯಾಗಿದೆ. ಅವರಿಗೆ, ಅವರ ಪಕ್ಷದ ಅಸ್ತಿತ್ವಕ್ಕೆ ಧಕ್ಕೆಯಾಗಿದ್ದು, ಹತಾಶೆ ಶುರುವಾಗಿದೆ. ಭ್ರಷ್ಟಾಚಾರದ ಬಗ್ಗೆ ಸಾಕ್ಷಿ ಇದ್ದರೆ ಕೊಡಲಿ. ಸಂಕ್ರಾಂತಿ ಬಳಿಕ ಅವರ ಪಕ್ಷದಲ್ಲಿ ಎಷ್ಟು ಜನ ಶಾಸಕರು ಉಳಿಯುತ್ತಾರೆ, ನೋಡೋಣ. ಆರೋಪದ ಬಗ್ಗೆ ಸಾಕ್ಷಿಗಳಿದ್ದರೆ ಕೊಡಲಿ. ಹಿಂದೆ ಕೆಂಪಣ್ಣ ದೂರು ನೀಡಿದ್ದರು. ಅದಕ್ಕೆ ನಾವು ಆರೋಪ ಮಾಡಿದ್ದೇವೆ. ಇವರ ಆರೋಪಕ್ಕೆ ಸಾಕ್ಷಿ ಕೊಡಲಿ. ಕುಮಾರಸ್ವಾಮಿ ಅವರು ತಮ್ಮ ಪುತ್ರ ನಿಖಿಲ್ ಕುಮಾರಸ್ವಾಮಿಯ ಸೋಲಿನ ಹತಾಶೆಯಲ್ಲಿದ್ದಾರೆ. ನಿಖಿಲ್ ಬಗ್ಗೆ ನನಗೆ ಸಹಾನುಭೂತಿ ಇದೆ" ಎಂದರು.

ಉಕ್ಕು ಕಾರ್ಖಾನೆ ಸಂಬಂಧ ರಾಜ್ಯ ಸರ್ಕಾರದಿಂದ ಬೇಡಿಕೆ ಬಂದಿಲ್ಲ ಎಂಬ ಕುಮಾರಸ್ವಾಮಿ ಆರೋಪ ವಿಚಾರವಾಗಿ ಪ್ರತಿಕ್ರಿಯಿಸುತ್ತ, "ಕೇಂದ್ರಕ್ಕೆ ನಾವು ಪತ್ರ ಬರೆದಿದ್ದೇವೆ. ಸೆಮಿಕಂಡೆಕ್ಟರ್‌ಗೆ ಅವಕಾಶ ಕೊಡಿ ಅಂತ. ಎಲ್ಲಾ ಕಂಪನಿಗಳನ್ನು ಗುಜರಾತ್‌ಗೆ ಕರೆದುಕೊಳ್ಳುತ್ತಿದ್ದಾರೆ. ಎಲ್ಲವೂ ಗುಜರಾತ್‌ಗೆ ಹೋಗುತ್ತಿವೆ. ಅವರು ಇನ್ಸೆಂಟೀವ್ ಜಾಸ್ತಿ ಕೊಡುತ್ತಾರೆ ಅಂತ ಹೀಗಾಗುತ್ತಿದೆ. ನಮ್ಮಲ್ಲಿ ಜಿಂದಾಲ್ ಸೇರಿ ಹಲವು ಕಂಪನಿಗಳಿವೆ" ಎಂದರು.

ಹಿಟ್‌ಅಂಡ್ ರನ್ ಸರಿಯಲ್ಲ: ಸರ್ಕಾರದ ನಡೆಯ ಬಗ್ಗೆ ಗುತ್ತಿಗೆದಾರರ ಅಸಮಾಧಾನ ವಿಚಾರವಾಗಿ ಮಾತನಾಡಿ, "ಯಾವ ಗುತ್ತಿಗೆದಾರರು ಅಸಮಾಧಾನರಾಗಿದ್ದಾರೆ. ಅಂತವರ ಲೀಸ್ಟ್ ಕೊಡಲಿ. ನಾವು ಕ್ರಮ ಜರುಗಿಸುತ್ತೇವೆ. ಸುಮ್ಮನೆ ಹಿಟ್ ಅಂಡ್ ರನ್ ಸರಿಯಲ್ಲ. ಸಚಿವ ಪ್ರಿಯಾಂಕ್ ಖರ್ಗೆ ವಿಚಾರದಲ್ಲೂ ಏನು ಮಾಡಿದ್ರು?.

ಅವರು ಕಾಂಟ್ರಾಕ್ಟರ್ ಅಲ್ವೋ ಗೊತ್ತಿಲ್ಲ. ನಮ್ಮ ಸರ್ಕಾರದಲ್ಲಿ ಅಂತದ್ದೇನಿಲ್ಲ" ಎಂದು ಹೇಳಿದರು.

ಮುಂದಿನ ಸಂಪುಟ ಸಭೆಯಲ್ಲಿ ಜಾತಿ ಗಣತಿ ವರದಿ ಮಂಡನೆ ವಿಚಾರವಾಗಿ ಪ್ರತಿಕ್ರಿಯಿಸಿ, "ಚರ್ಚೆ ಬಂದಾಗ ನೋಡೋಣ. ಕ್ಯಾಬಿನೆಟ್‌ನಲ್ಲಿ ವಿಷಯ ಬರಲಿ. ವಿಷಯ ನೋಡದೇ



ಮಾತನಾಡುವುದು ಮೂರ್ಖತನ ಆಗುತ್ತದೆ. ವರದಿ ನೋಡಿದ ಮೇಲೆ ನಾನು ಮಾತಾಡುತ್ತೇನೆ" ಎಂದು ತಿಳಿಸಿದರು.

ಹಣಕಾಸು ವಿಚಾರದಲ್ಲಿ ನಮ್ಮ ಸಿಎಂ ಪರ್ಫೆಕ್ಟ್: ಗ್ಯಾರಂಟಿ ಯೋಜನೆಗಳಿಂದ ಅಭಿವೃದ್ಧಿ ಕುಂಠಿತ ಎಂಬ ಶಾಸಕರ ಆರೋಪವಾಗಿ ಪ್ರತಿಕ್ರಿಯಿಸಿ, "ಅಭಿವೃದ್ಧಿಗೆ ಹಣದ ಕೊರತೆಯಿಲ್ಲ. ಅಭಿವೃದ್ಧಿಗೂ ಇದೆ, ಗ್ಯಾರಂಟಿಗೂ ಇದೆ. ನೀರಾವರಿಗೆ ಹಣ ಕೇಳುತ್ತಾರೆ. ಹಿಂದಿನ ಸರ್ಕಾರ ಬೇಕಾಬಿಟ್ಟಿ ಸಾಲ ಮಾಡಿದೆ. ಆ ಸರ್ಕಾರ ಆರ್ಥಿಕ ಶಿಸ್ತನ್ನು ಮೀರಿ ಹೋಗಿತ್ತು. 70 ಸಾವಿರ ಕೋಟಿ ರೂ. ಸಾಲ ಮಾಡಿತ್ತು. ಅವರು ಮಾಡಿರುವುದು ಎಕ್ಸಸ್ ಬಿಲ್ ಉಳಿದಿದೆ.

ಲೋಕೋಪಯೋಗಿ, ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ಬಾಕಿ ಬಿಲ್‌ಗಳಿವೆ. ಅವರು ಹಣ ಪೆಂಡಿಂಗ್ ಇಟ್ಟು ಹೋದರು. ನಮ್ಮ ಸಿಎಂ ಹಣಕಾಸು ವಿಚಾರದಲ್ಲಿ ಪರ್ಫೆಕ್ಟ್. ಹಣ ಹೊಂದಿಸುವುದು ಗೊತ್ತಿದೆ. ಎಲ್ಲ ಸರಿಪಡಿಸಿಕೊಂಡು ಹೋಗುತ್ತೇನೆ ಅಂದಿದ್ದಾರೆ. ಈಗ ಅದನ್ನು ಮಾಡುತ್ತಿದ್ದಾರೆ" ಎಂದು ಸಚಿವ ಎಂ ಬಿ ಪಾಟೀಲ್ ಹೇಳಿದರು.

## ಮೊದಲ ಪುಟದಿಂದ

### ರಾಜ್ಯಕ್ಕೆ ಹೆಚ್‌ಎಂಪಿ

ರಕ್ತ ಪರೀಕ್ಷೆ ನಡೆಸಿದಾಗ ಎಚ್‌ಎಂಪಿವಿ ಸೋಂಕು ತಗುಲಿರುವುದು ದೃಢಪಟ್ಟಿದೆ. ಯಾವುದೇ ಟ್ರಾವೆಲ್ ಹಿಸ್ಟರಿ ಇಲ್ಲದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಮಗುವಿನಲ್ಲಿ ಎಚ್‌ಎಂಪಿವಿ ಪತ್ತೆಯಾಗಿರುವುದು ಕುತೂಹಲಕಾರಿ ವಿಷಯವಾಗಿದೆ. ಎಂಟು ತಿಂಗಳ ಮಗುವಿನಲ್ಲಿ ಎಚ್‌ಎಂಪಿವಿ ಸೋಂಕು ಕಾಣಿಸಿಕೊಂಡಿರುವುದರಿಂದ ಎಚ್ಚೆತ್ತುಕೊಂಡಿರುವ ಆರೋಗ್ಯ ಇಲಾಖೆ ರಾಜ್ಯದ ಇತರ ಭಾಗಗಳಲ್ಲಿ ಯಾರಿಗಾದರೂ ಎಚ್‌ಎಂಪಿವಿ ಸೋಂಕು ತಗುಲಿದೆಯೇ ಎಂಬ ಬಗ್ಗೆ ಮಾಹಿತಿ ಕಲೆ ಹಾಕಲು ಮುಂದಾಗಿದೆ.

ಸೋಂಕು ಪತ್ತೆಯಾಗಿರುವ ಮಗುವಿನ ರಕ್ತದ ಪರೀಕ್ಷೆ ನಡೆಸಲು ತೀರ್ಮಾನಿಸಿದ್ದು, ಮಗುವಿನ ರಕ್ತದ ಮಾದರಿಯನ್ನು ಎನ್‌ಯೂ ಪರೀಕ್ಷೆಗೆ ರವಾನಿಸಲಾಗಿದೆ. ವರದಿ ಬಂದ ನಂತರ ಮುಂದಿನ ಕ್ರಮ ಕೈಗೊಳ್ಳಲು ತೀರ್ಮಾನಿಸಲಾಗಿದೆ.

ಚಳಿಗಾಲದಲ್ಲಿ ವೈರಸ್ ಸೋಂಕು ಸಾಮಾನ್ಯ. ಕೆಮು ಮತ್ತು ಶೀತ ಜ್ವರ ಬಂದವರು ಇತರರಿಂದ ಅಂತರ ಕಾಯ್ದುಕೊಳ್ಳುವುದು ಸೂಕ್ತಅವರು ಇತರ ಜನರೊಂದಿಗೆ ಸಂಪರ್ಕಕ್ಕೆ ಬರುವುದನ್ನು ತಪ್ಪಿಸಬೇಕು. ಹಾಗೂ ಕೂಡಲೆ ತಜ್ಞ ವೈದ್ಯರನ್ನು ಭೇಟಿಯಾಗಿ ಸೂಕ್ತ ಚಿಕಿತ್ಸೆ ಪಡೆದುಕೊಳ್ಳಬೇಕು ಎಂದು ಆರೋಗ್ಯ ಇಲಾಖೆ ಅಧಿಕಾರಿಗಳು ಮನವಿ ಮಾಡಿಕೊಂಡಿದ್ದಾರೆ. ಅದರಲ್ಲೂ ಪೋಷಕರು ಚಿಕ್ಕ ಮಕ್ಕಳ ಆರೋಗ್ಯದ ಬಗ್ಗೆ ಎಚ್ಚರ ವಹಿಸಬೇಕು. ಜ್ವರ ಕಾಣಿಸಿಕೊಂಡ ಕೂಡಲೇ ಆಸ್ಪತ್ರೆಗೆ ಕರೆದೊಯ್ಯಬೇಕು ಎಂದು ಅಧಿಕಾರಿಗಳು ಮನವಿ ಮಾಡಿಕೊಂಡಿದ್ದಾರೆ. ರಾಜ್ಯದ ಯಾವುದೇ ಭಾಗದಲ್ಲಿ ಯಾರೇ ಆಗಲಿ ಜ್ವರ ಮತ್ತಿತರ ಸೋಂಕಿನಿಂದ ಚಿಕಿತ್ಸೆ ಪಡೆಯಲು ಬಂದರೆ ಅವರ ರಕ್ತದ ಮಾದರಿ ಪಡೆದು ಪರೀಕ್ಷೆ ನಡೆಸುವಂತೆಯೂ ಇಲಾಖೆ ಎಲ್ಲಾ ಆಸ್ಪತ್ರೆಗಳಿಗೆ ಕಟ್ಟುನಿಟ್ಟಿನ ಸೂಚನೆ ರವಾನಿಸಿದೆ ಮಾತ್ರವಲ್ಲ, ಸರ್ಕಾರಿ ಅಥವಾ ಖಾಸಗಿ ಆಸ್ಪತ್ರೆಗಳಲ್ಲಿ ವೈರಸ್ ಪತ್ತೆಯಾದ ಬಗ್ಗೆ ಎಲ್ಲಾ ಡಿಹೆಚ್‌ಓಗಳಿಂದ ಆರೋಗ್ಯ ಇಲಾಖೆ ಮಾಹಿತಿ ಕೇಳಿದೆ. ಒಂದು ವೇಳೆ ಯಾರಿಗಾದರೂ ಸೋಂಕು ಲಕ್ಷಣಗಳು ಕಂಡು ಬಂದರೆ ಅವರ ಟ್ರಾವೆಲ್ ಹಿಸ್ಟರಿ ಪತ್ತೆ ಹಚ್ಚುವಂತೆ ಸೂಚನೆ ನೀಡಿದೆ. ಯಾವುದೇ ಸೋಂಕಿನ ಲಕ್ಷಣಗಳು ಕಂಡುಬಂದರೆ ಕಣ್ಣು, ಮೂಗು ಹಾಗೂ ಬಾಯಿ ಮುಟ್ಟಿಕೊಳ್ಳಬಾರದು, ಸೋಂಕಿತರು ಬಳಸುವ ವಸ್ತುಗಳನ್ನು ಬೇರೆಯವರು ಬಳಸಬಾರದು. ಸಾರ್ವಜನಿಕ ಸ್ಥಳಗಳಲ್ಲಿ ಉಗುಳುವುದು ಬೇಡ , ತಕ್ಷಣ ತಜ್ಞ ವೈದ್ಯರನ್ನು ಭೇಟಿಯಾಗಿ ಔಷಧಿ ಸೇವಿಸುವುದು ಸೂಕ್ತ ಎಂದು ಸಾರ್ವಜನಿಕರಿಗೆ ಮನವಿ ಮಾಡಿಕೊಳ್ಳಲಾಗಿದೆ.

**ಏನಿದು ಹೆಚ್‌ಎಂಪಿವಿ ವೈರಸ್? ಹೇಗೆ ಹರಡುತ್ತೆ?:** ಹ್ಯೂಮನ್ ಮೆಟಾನ್ಯೂಮೋ ವೈರಸ್ ಎಂಬುದು ಉಸಿರಾಟಕ್ಕೆ ಸಂಬಂಧಿಸಿದ ವೈರಸ್. ಹೆಚ್ಚಿನ ಜನರಲ್ಲಿ ಕಡಿಮೆ ತೀವ್ರತೆಯ (ಶೀತ ತರಹದ ಲಕ್ಷಣ) ರೋಗಲಕ್ಷಣಗಳು ಕಂಡುಬರುತ್ತವೆ. ಅಲ್ಲದೆ ಮಕ್ಕಳು, ವೃದ್ಧರು ಮತ್ತು ರೋಗನಿರೋಧಕ ಶಕ್ತಿ ಕಡಿಮೆ ಇರುವವರಲ್ಲಿ ಬ್ರಾಂಕೈಟಿಸ್ ಮತ್ತು ನ್ಯುಮೋನಿಯಾದಂತಹ ತೀವ್ರ ಲಕ್ಷಣಗಳು ಕಾಣಿಸುತ್ತವೆ. ಜ್ವರ, ಕೆಮ್ಮು, ಮೂಗು ಕಟ್ಟುವಿಕೆ, ಉಸಿರಾಟದ ಸಮಸ್ಯೆಯಾಗುವುದು, ಸೋಂಕಿನ ಕ್ಲಿನಿಕಲ್ ರೋಗಲಕ್ಷಣಗಳು ಹೆಚ್ಚಾಗುತ್ತವೆ, ಬ್ರಾಂಕೈಟಿಸ್ ಅಥವಾ ನ್ಯುಮೋನಿಯಾದಂತಹ ಸಮಸ್ಯೆ ಈ ರೋಗದ ಲಕ್ಷಣಗಳಾಗಿವೆ. .ಸೋಂಕಿನ ತೀವ್ರತೆ 2ರಿಂದ 6 ದಿನಗಳವರೆಗೆ ಇರುತ್ತದೆ. ಸೋಂಕಿಗೆ ಒಳಗಾದವರಲ್ಲಿ ಮೂರರಿಂದ ಆರು ದಿನಗಳ ಬಳಿಕ ಈ ವೈರಸ್‌ನ ರೋಗಲಕ್ಷಣಗಳು ಕಂಡುಬರುತ್ತವೆ.

### ಮಾರ್ಗಸೂಚಿ ಪ್ರಕಟಿಸಿದ ದೆಹಲಿ

ಸೋಂಕು ಕಂಡುಬಂದಲ್ಲಿ ಕಡ್ಡಾಯ ಐಸೋಲೇಷನ್: ಶಂಕಿತ ಸೋಂಕು ಕಂಡುಬಂದಲ್ಲಿ ಆ ಪ್ರಕರಣದಲ್ಲಿ ಕಟ್ಟುನಿಟ್ಟಿನ ಐಸೋಲೇಷನ್ ಮಾರ್ಗಸೂಚಿ ಮತ್ತು ಮುನ್ನೆಚ್ಚರಿಕಾ ಕ್ರಮಗಳ ಪಾಲನೆ ಕಡ್ಡಾಯವಾಗಿದೆ. ಆಸ್ಪತ್ರೆಗಳು ಎಸ್‌ಎಆರ್‌ಐ (ಶ್ವಾಸಕೋಶ ಸಂಬಂಧಿ ಸೋಂಕು) ಕುರಿತು ಸರಿಯಾದ ದಾಖಲೀಕರಣ ಮತ್ತು ಪ್ರಯೋಗಾಲಯದಲ್ಲಿ ದೃಢಪಟ್ಟ ಇನ್ಫುಯೆಂಜಾ ಪ್ರಕರಣಗಳನ್ನು ಸರಿಯಾಗಿ ನಿರ್ವಹಣೆ ಮಾಡುವುದನ್ನು ಖಾತ್ರಿ ಮಾಡಬೇಕಿದೆ. ಹಾಗೆಯೇ ಪ್ಯಾರಸಿಟಮಾಲ್, ಆ್ಯಂಟಿಹಿಸತಮೈನಸ್, ಬ್ರೊಂಕೊಂಡಿಲಟೋರ್ಸ್ ಹಾಗೂ ಕೆಮ್ಮಿನ ಸಿರಪ್‌ಗಳು ಲಭ್ಯವಿರುವಂತೆ ನೋಡಿಕೊಳ್ಳಬೇಕಿದೆ.

### ಮಕ್ಕಳೊಂದಿಗೆ ದಂಪತಿ ಆತ್ಮಹತ್ಯೆ

ಆತ್ಮಹತ್ಯೆಗೆ ನಿರ್ಧರಿಸಿರಬಹುದು ಎಂದು ಶಂಕಿಸಲಾಗಿದೆ. ಸದ್ಯ ಘಟನಾ ಸ್ಥಳದಲ್ಲಿ ಸದಾಶಿವನಗರ ಠಾಣೆ ಪೊಲೀಸರು ಪರಿಶೀಲನೆ ನಡೆಸುತ್ತಿದ್ದು, ಮತ್ತಷ್ಟು ಮಾಹಿತಿ ನಿರೀಕ್ಷಿಸಲಾಗಿದೆ. ಮೃತರ ಕುಟುಂಬಸ್ಥರಿಗೆ ಮಾಹಿತಿ ನೀಡಲಾಗಿದ್ದು, ಸಂಜೆ ವೇಳೆಗೆ ಅವರು ಬೆಂಗಳೂರಿಗೆ ಬರುವ ನಿರೀಕ್ಷೆಯಿದೆ ಎಂದು ಬೆಂಗಳೂರು ಕೇಂದ್ರ ವಿಭಾಗದ ಡಿಸಿಪಿ ಶೇಖರ್ ಹೆಚ್.ಟಿ. ಮಾಹಿತಿ ನೀಡಿದ್ದಾರೆ.

### ಸೋಂಕು ಹರಡದಂತೆ ಸೂಕ್ತ ಕ್ರಮ

ಶೇ. 60ಕ್ಕೆ ತಲುಪಿದೆ ಎಂದು ಹೇಳಿಕೆ ನೀಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಹಿಂದಿನ ಬಸವರಾಜ ಬೊಮ್ಮಾಯಿ ಅವರ ಸರ್ಕಾರದಅವಧಿಯಲ್ಲಿ ಕಮೀಷನ್ ಆರೋಪವನ್ನು ಗುತ್ತಿಗೆದಾರ ಸಂಘದ ಅಧ್ಯಕ್ಷರು ಕೆಂಪಯ್ಯನವರು ಮಾಡಿದ್ದರು. ಬಿಜೆಪಿಯವರು ಕಮೀಷನ್ ತೆಗೆದುಕೊಂಡಿರುವುದಾಗಿ ಕೆಂಪಯ್ಯನವರು ಆರೋಪಿಸಿದ್ದಾಗಿ ತಿಳಿಸಿದರು.

### ವಿದ್ಯಾರ್ಥಿ ಸಾವು

ಜನಸಾಮಾನ್ಯರು, ಗುತ್ತಿಗೆದಾರರು, ನಿನ್ನೆ ಬೆಳಗ್ಗೆ ಹಾಸ್ಟೆಲ್ ಭದ್ರತಾ ಸಿಬ್ಬಂದಿಗಮನಿಸಿದಾಗ ಘಟನೆ ಬೆಳಕಿಗೆ ಬಂದಿದೆ ಎಂದು ಡಿಸಿಪಿ ಸಾರಾ ಫಾತಿಮಾ ತಿಳಿಸಿದ್ದಾರೆ.

ಕ್ಯಾಂಪಸ್ ಆವರಣದ ಹಾಸ್ಟೆಲ್‌ನ ಬೇರೆ ಬ್ಲಾಕ್‌ನಲ್ಲಿರುವ ಸ್ನೇಹಿತರ ಕೋಣೆಯಲ್ಲಿ ಹುಟ್ಟುಹಬ್ಬ ಆಚರಿಸಲು ನಿಲಯ್ ತೆರಳಿದ್ದ. ರಾತ್ರಿ 11.30ರ ಸುಮಾರಿಗೆ ಸ್ನೇಹಿತನ ಕೊಠಡಿಯಿಂದ ಹೊರಟು 'ಎಫ್' ಬ್ಲಾಕ್‌ನಲ್ಲಿರುವ ತನ್ನ ಕೋಣೆಗೆ ವಾಪಸಾಗುವಾಗ ಘಟನೆ ಸಂಭವಿಸಿದೆ ಎಂಬುದು ಪೊಲೀಸರ ಪ್ರಾಥಮಿಕ ತನಿಖೆಯಿಂದ ದೃಢಪಟ್ಟಿದೆ. ಹಾಸ್ಟೆಲ್‌ನ ಸಿಸಿಟಿವಿ ದೃಶ್ಯಾವಳಿಗಳನ್ನು ಪೊಲೀಸರು ಪರಿಶೀಲಿಸುತ್ತಿದ್ದಾರೆ. ಮೈಕೋ ಲೇಔಟ್ ಪೊಲೀಸ್ ಠಾಣೆಯಲ್ಲಿ ಅಸಹಜ ಸಾವು ಪ್ರಕರಣ ದಾಖಲಾಗಿದೆ. ನಿಲಯ್ ಸಾವಿನ ಕುರಿತು ಸ್ಪಷ್ಟನೆ ನೀಡುವಂತೆ ಅಖಿಲ ಭಾರತ ಒಬಿಸಿ ವಿದ್ಯಾರ್ಥಿಗಳ ಸಂಘ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್‌ಗೆ ಒತ್ತಾಯಿಸಿದೆ.

### ಹೊರ ನಡೆದ ರಾಜ್ಯಪಾಲ

ರಾಷ್ಟ್ರಗೀತೆ ಹಾಡುವಂತೆ ಒತ್ತಡ ಕೇಳಿ ಬಂದಿತ್ತು. ಆದರೆ ಅವರ ಬೇಡಿಕೆಯನ್ನು ಗಂಭೀರವಾಗಿ ತೆಗೆದುಕೊಳ್ಳದ ಕಾರಣ ಬೇಸರಗೊಂಡ ರಾಜ್ಯಪಾಲರು ಭಾಷಣವನ್ನೂ ಮಾಡದೆ ಸದನದಿಂದ ಹೊರ ನಡೆದಿದ್ದಾರೆ.

'ತಮಿಳುನಾಡು ವಿಧಾನಸಭೆಯಲ್ಲಿ ಮತ್ತೊಮ್ಮೆ ಭಾರತದ ಸಂವಿಧಾನ ಮತ್ತು ರಾಷ್ಟ್ರಗೀತೆಗೆ ಅವಮಾನ ಮಾಡಲಾಗಿದೆ. ಸಂವಿಧಾನದಲ್ಲಿ ಮೊದಲ ಮೂಲಭೂತ ಕರ್ತವ್ಯವೆಂದರೆ ರಾಷ್ಟ್ರಗೀತೆಗೆ ಗೌರವ ಕೊಡುವುದು ಎಂದು ಹೇಳಲಾಗಿದೆ.

ಎಲ್ಲಾ ರಾಜ್ಯಗಳ ವಿಧಾನಸಭಾ ಅಧಿವೇಶನದ ಆರಂಭದಲ್ಲಿ ಮತ್ತು ಕೊನೆಯಲ್ಲಿ ರಾಷ್ಟ್ರಗೀತೆಯನ್ನು ಹಾಡಲಾಗುತ್ತದೆ. ಇಂದು ರಾಜ್ಯಪಾಲರು ಸದನಕ್ಕೆ ಆಗಮಿಸಿದಾಗ ಕೇವಲ ರಾಜ್ಯಗೀತೆ ಮಾತ್ರ ಹಾಡಲಾಯಿತು. ರಾಷ್ಟ್ರಗೀತೆ ಹಾಡುವ ಬಗ್ಗೆ ರಾಜ್ಯಪಾಲರು ಮಾಡಿರುವ ಮನವಿಯನ್ನು ಮುಖ್ಯಮಂತ್ರಿ ಎಂಕೆ ಸ್ಟಾಲಿನ್ ಮತ್ತು ಸದನದ ಸ್ಪೀಕರ್ ತಿರಸ್ಕರಿಸಿದರು. ಭಾರತದ ಸಂವಿಧಾನಕ್ಕೆ ಮಾಡಿದ ಅವಮಾನದ ಭಾಗವಾಗದೆ ರಾಜ್ಯಪಾಲರು ತೀವ್ರ ಅಸಮಾಧಾನ ವ್ಯಕ್ತಪಡಿಸಿ ಸದನದಿಂದ ನಿರ್ಗಮಿಸಿದರು.

ಆಡಳಿತಾರೂಢ ಡಿಎಂಕೆ ಮತ್ತು ಕಾಂಗ್ರೆಸ್ ನಾಯಕರು ರಾಜ್ಯಪಾಲರು ಈ ರೀತಿ ಸದನದಿಂದ ನಿರ್ಗಮಿಸುತ್ತಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದರು. ರಾಜ್ಯಪಾಲರ ನಿರ್ಗಮನದ ನಂತರ, ಎಐಎಡಿಎಂಕೆ ಅಣ್ಣಾ ವಿಶ್ವವಿದ್ಯಾಲಯದ ವಿದ್ಯಾರ್ಥಿನಿ ಲೈಂಗಿಕ ಕಿರುಕುಳದ ವಿರುದ್ಧ ಪ್ರತಿಭಟನೆಯನ್ನು ಪ್ರಾರಂಭಿಸಿತು. ಪ್ರತಿಭಟನಾ ನಿರತ ಶಾಸಕರನ್ನು ಹೊರಹಾಕುವಂತೆ ಸ್ಪೀಕರ್ ಮಾರ್ಷಲ್‌ಗಳಿಗೆ ಆದೇಶಿಸಿದರು.

### ಮೊದಲ ಪ್ರಕರಣ ಎಂಬುದು ತಪ್ಪು

ಲಕ್ಷಣಗಳನ್ನು ಉಂಟುಮಾಡುತ್ತದೆ. ಇದು ಸೀಮಿತ ಸಮಯದ ವೈರಸ್ ಆಗಿದ್ದು, ಸ್ವಲ್ಪ ದಿನಗಳಲ್ಲೇ ಕಡಿಮೆ ಆಗುತ್ತದೆ" ಎಂದು ಸಚಿವ ದಿನೇಶ್ ಗುಂಡೂರಾವ್ ಮಾಹಿತಿ ನೀಡಿದರು.

### ಏನು ದಾಖಲೆ ಕೊಟ್ಟಿದೆ

ಜನರ ಮೇಲೆ ತೆರಿಗೆ ಭಾರ ಹಾಕುತ್ತಿದ್ದಾರೆ. ಕೇವಲ ಸಾರಿಗೆ ದರ ಹೆಚ್ಚಳವಲ್ಲ, ನೀರಿನ ದರ ಹೆಚ್ಚಳ, ವಿದ್ಯುತ್ ದರ ಹೆಚ್ಚಳ, ಹಾಲಿನ ದರ ಈಗಾಗಲೇ ಹೆಚ್ಚಳ ಮಾಡಿದ್ದಾರೆ, ಮತ್ತೆ ಮಾಡಲು ತೀರ್ಮಾನ ಮಾಡಿದ್ದಾರೆ. ಸ್ಟ್ಯಾಂಪ್ ಡ್ಯೂಟಿ, ಮೋಟರ್ ವೆಹಿಕಲ್ ತೆರಿಗೆ, ಪೆಟ್ರೋಲ್ ಡಿಸೇಲ್ ತೆರಿಗೆ ಹೆಚ್ಚಳ ಮಾಡಿದ್ದಾರೆ. ಜನಸಾಮಾನ್ಯರು ಬಳಸುವ ಜಲ್ಲಿಕಲ್ಲಿನ ಮೇಲೆ ತೆರಿಗೆ, ಪಶ್ಚಿಮ ಘಟ್ಟದಿಂದ ಬರುವ ನೀರಿನ ಮೇಲೆ ತೆರಿಗೆ ಹಾಕಲು ಯೋಚನೆ ಮಾಡಿದ್ದಾರೆ. ಗಾಳಿಗೆ ತೆರಿಗೆ ಹಾಕುವ ದಿನಗಳು ದೂರ ಇಲ್ಲ. ಇದೊಂದು ದುರಾಡಳಿತ, ಆರ್ಥಿಕ ನಿರ್ವಹಣೆಯಲ್ಲಿ ವಿಫಲವಾಗಿರುವ ಅಭಿವೃದ್ಧಿ ಶೂನ್ಯವಾಗಿರುವ ಪ್ರತಿಫಲದಿಂದ ತೆರಿಗೆಗಳ ಭಾರ ಕರ್ನಾಟಕದ ಜನರ ಮೇಲೆ ಹಾಕುತ್ತಿದ್ದಾರೆ ಎಂದು ಆರೋಪಿಸಿದರು.

ಬಸ್ ದರ ಏರಿಕೆಗೂ ರೈಲ್ವೆ ದರ ಏರಿಕೆಗೂ ಹೋಲಿಕೆ ಮಾಡಿರುವ ಕುರಿತು ಕೇಳಿದ ಪ್ರಶ್ನೆಗೆ ರೈಲ್ವೆಗೂ ಬಸ್ ದರ ಹೆಚ್ಚಳಕ್ಕೂ ಹೋಲಿಕೆ ಮಾಡಿ ವಿತಂಡವಾದ ಮಾಡುವುದು ಸರಿಯಲ್ಲ. ಮುಖ್ಯಮಂತ್ರಿಗಳು ನಮ್ಮ ರಾಜ್ಯದ ಸಮಸ್ಯೆ ಬಗ್ಗೆ ಮಾತನಾಡಲಿ. ರಾಜ್ಯದಲ್ಲಿ ರಸ್ತೆ ಗುಂಡಿಗಳು ಬಿದ್ದಿವೆ. ಚಂದ್ರನ ಮೇಲೂ ಗುಂಡಿಗಳಿವೆ ಎಂದರೆ ಹೇಗೆ ಎಂದು ಪ್ರಶ್ನಿಸಿದರು.ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಕೇಳಿ ಬಂದಿರುವ ಆರೋಪದ ಕುರಿತು ಸೂಕ್ತ ತನಿಖೆಯಾಗಲಿ ಎಂದು ಇದೇ ವೇಳೆ ಆಗ್ರಹಿಸಿದರು.

### ನಾ. ಡಿಸೋಜ ಇನ್ನಿಲ್ಲ

ದರ್ಶನಕ್ಕೆ ವ್ಯವಸ್ಥೆ ಕಲ್ಪಿಸಲಾಗುತ್ತದೆ. ಜನವರಿ 7 ರಂದು ಅಂತ್ಯಕ್ರಿಯೆ ನಡೆಸಲು ನಿರ್ಧರಿಸಲಾಗಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ನಾ. ಡಿಸೋಜ ಅವರು ಪತ್ನಿ, ಇಬ್ಬರು ಪುತ್ರರು, ಓರ್ವ ಪುತ್ರಿಯನ್ನು ಅಗಲಿದ್ದಾರೆ.

ಸುಮಾರು ಐದು ದಶಕಗಳಿಂದಲೂ ಕನ್ನಡ ಸಾಹಿತ್ಯದ ಎಲ್ಲಾ ಪ್ರಕಾರಗಳಲ್ಲಿಯೂ ಕೃಷಿ ಮಾಡಿದ್ದ ಇವರು ಲೋಕೋಪಯೋಗಿ ಇಲಾಖೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದರು. ಇವರ ಪೂರ್ಣ ಹೆಸರು ನಾರ್ಬರ್ಟ್ ಡಿಸೋಜ. ಶಿವಮೊಗ್ಗ ಜಿಲ್ಲೆ ಸಾಗರದಲ್ಲಿ 1937 ರ ಜೂನ್ 6 ರಂದು ಜನಿಸಿದ್ದರು.

ಕಾದಂಬರಿ ರಚನೆ: ಪರಿಸರ ಕಾಳಜಿಯುಳ್ಳ ಸಾಹಿತಿಯಾಗಿದ್ದರು. ಕನ್ನಡ ಸಾಹಿತ್ಯ ಲೋಕದಲ್ಲಿ ಮಕ್ಕಳ ಸಾಹಿತ್ಯ ಒಳಗೊಂಡಂತೆ ಎಲ್ಲಾ ಸಾಹಿತ್ಯ ಪ್ರಾಕಾರಗಳಲ್ಲೂ ಕೃಷಿ ನಡೆಸಿದ್ದಾರೆ. ಮೊದಲು ಇವರು ಪ್ರಪಂಚ ಪತ್ರಿಕೆಗೆ ಕಥೆಗಳನ್ನು ಬರೆಯುತ್ತಿದ್ದರು. ಡಿಸೋಜ ಅವರು 1964 ರಲ್ಲಿ ತಮ್ಮ ಮೊದಲ ಕಾದಂಬರಿ 'ಬಂಜೆ ಬೆಂಕಿ' ಪ್ರಕಟಿಸಿದರು. ನಂತರ ಮಂಜಿನ ಕಾನು, ಈ ನೆಲ ಈಜಲ, ಕೆಂಪು ತ್ರಿಕೋನ, ನೆಲೆ, ಮಾನವ – ಹೀಗೆ ಸುಮಾರು 75 ಕಾದಂಬರಿಗಳನ್ನು ಬರೆದಿದ್ದಾರೆ. 6 ಚಾರಿತ್ರಿಕ ಕಾದಂಬರಿ, 25 ಮಕ್ಕಳ ಕಾದಂಬರಿ, 9 ಕಥಾ ಸಂಕಲನ, ಸಮಗ್ರ ಕಥೆಗಳ ಎರಡು ಸಂಪುಟಗಳು, ಸುಮಾರು 550 ಕಥೆಗಳು, ಹಲವು ನಾಟಕಗಳು, ರೇಡಿಯೋ ನಾಟಕಗಳು, ಅನೇಕ ಪತ್ರಿಕಾ ಲೇಖನಗಳನ್ನು ಬರೆದಿದ್ದಾರೆ. ಪರಿಸರ ನಾಶ, ಕ್ರೈಸ್ತ ಜನಾಂಗದ ಹಿನ್ನೆಲೆ, ಭ್ರಷ್ಟಾಚಾರದ ವಸ್ತು, ಹಿಂದುಳಿದ ಬುಡಕಟ್ಟು ಜನಾಂಗದ ಚಿತ್ರಣ.. ಹೀಗೆ ಹತ್ತು ಹಲವು ವಿಷಯಗಳನ್ನೊಳಗೊಂಡ ಅವರ ಕಾದಂಬರಿಗಳು ಹೆಚ್ಚು ಜನಪ್ರಿಯವಾಗಿವೆ.

ಚಲನಚಿತ್ರವಾದ ಕಾದಂಬರಿಗಳು: ದ್ವೀಪ, ಮುಳುಗಡೆ, ಕಾಡಿನ ಬೆಂಕಿ, ಬಳುವಳಿ, ಬೆಟ್ಟದ ಪುರದ ದಿಟ್ಟ ಮಕ್ಕಳು, ಆಂತರ್ಯ ಕಾದಂಬರಿಗಳು ಚಲನಚಿತ್ರವಾಗಿವೆ. ಇದರಲ್ಲಿ ಗಿರೀಶ್ ಕಾಸರವಳ್ಳಿ ಅವರ ನಿರ್ದೇಶನದ ದ್ವೀಪ ರಾಷ್ಟ್ರೀಯ ಪ್ರಶಸ್ತಿ ಗಳಿಸಿದೆ. ಭಾರತದ ಖ್ಯಾತ ನಟಿ ಸೌಂದರ್ಯ ಅವರು ಈ ಚಿತ್ರದಲ್ಲಿ ನಟಿಸಿ ರಾಷ್ಟ್ರೀಯ ಉತ್ತಮ ನಟಿ ಪ್ರಶಸ್ತಿ ಪಡೆದುಕೊಂಡಿದ್ದರು.

ಅಜ್ಞಾತ, ಒಂದು ಜಲಪಾತದ ಸುತ್ತ, ಕೈತಾನ್ ಗಾಂಧಿಯ ಸ್ವಾತಂತ್ರ್ಯ ಹೋರಾಟ, ಜೀವಕಳೆ, ಪ್ರೀತಿಯೊಂದೆ ಸಾಲದೇ?, ಬಂಜೆ ಬೆಂಕಿ, ಪ್ರಜ್ಞಾಬಲಿ, ನೆಲೆ, ನಡುವೆ ನಿಂತ ಜನ, ಗಾಂಧಿ ಬಂದರು, ಒಡ್ಡು, ಮಾನವ, ಮುಳುಗಡೆ, ವಿಷಾನಿಲ ಇನ್ನೂ ಅನೇಕ ಕಾದಂಬರಿಗಳನ್ನೊಳಗೊಂಡತೆ ಮಕ್ಕಳ ಸಾಹಿತ್ಯವನ್ನೂ ನಾ.ಡಿಸೋಜ ರಚಿಸಿದ್ದಾರೆ.

**ಪ್ರಶಸ್ತಿಗಳು:** ಕೇಂದ್ರ ಸಾಹಿತ್ಯ ಅಕಾಡಮಿಯ ಬಾಲ ಸಾಹಿತ್ಯ ಪುರಸ್ಕಾರ, ಕರ್ನಾಟಕ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಗುಲ್ವಾಡಿ ವೆಂಕಟರಾವ ಪ್ರಶಸ್ತಿ, ಪುತ್ತೂರು ನಿರಂಜನ ಸಾಹಿತ್ಯ ಪ್ರಶಸ್ತಿ ವರ್ಧಮಾನ ಪ್ರಶಸ್ತಿ, ಮಾಸ್ತಿ ಪ್ರಶಸ್ತಿ, ಕುವೆಂಪು ವಿಶ್ವವಿದ್ಯಾಲಯ ಗೌರವ ಡಾಕ್ಟರೇಟ್, ಆಳ್ವಾಸ್ ನುಡಿಸಿರಿ ಪ್ರಶಸ್ತಿ, ನವದೆಹಲಿ ಕಳಾ ಪ್ರಶಸ್ತಿ ಸೇರಿ ಇನ್ನೂ ಅನೇಕ ಪುರಸ್ಕಾರಗಳಿಗೆ ಇವರು ಭಾಜನರಾಗಿದ್ದರು. 80 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷ ಗೌರವ: 2014 ರಲ್ಲಿ ಮಡಕೇರಿಯಲ್ಲಿ ನಡೆದ 80 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿ ಇವರು ಆಯ್ಕೆ ಆಗಿದ್ದರು.

**ಹೋರಾಟಕ್ಕೂ ಸೈ:** ನಾ.ಡಿಸೋಜರವರು ಸಾಹಿತ್ಯ ಅಷ್ಟೇ ಅಲ್ಲದೆ, ಪರಿಸರ ಹೋರಾಟದಲ್ಲೂ ತಮ್ಮನ್ನು ತೊಡಗಿಸಿಕೊಂಡಿದ್ದರು. ಸಾಗರ ತಾಲೂಕಿನ ಇಕ್ಕೇರಿಯಲ್ಲಿ ಗಣಿಗಾರಿಕೆ ವಿರುದ್ಧ ಹೋರಾಟ, ಶರಾವತಿ ನದಿಯ ಅಂಬುತೀರ್ಥದಿಂದ ಅರಬ್ಬಿ ಸಮುದ್ರದವರೆಗಿನ ನಡೆ, ತಾಳಗುಪ್ಪ ಬ್ರಾಡ್ಗೇಜ್ ಹೋರಾಟದಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದರು.

ಲೋಕೋಪಯೋಗಿ ಇಲಾಖೆಯಲ್ಲಿದ್ದ ಇವರು ಹೆಚ್ಚಾಗಿ ಲಿಂಗನಮಕ್ಕಿ ಅಣೆಕಟ್ಟೆ ನಿರ್ಮಾಣದ ವೇಳೆ ಸೇವೆ ಸಲ್ಲಿಸಿದ ಪರಿಣಾಮದಿಂದಲೇ ಇವರಿಗೆ ಶರಾವತಿ ಮುಳುಗಡೆ ಪ್ರದೇಶದ ಜನರ ಸಮಸ್ಯೆ ಹೆಚ್ಚಾಗಿ ತಿಳಿದಿತ್ತು. ಇದೇ ಕಾರಣದಿಂದ ಇವರು ದ್ವೀಪ, ಮುಳುಗಡೆ ಸೇರಿದಂತೆ ಅನೇಕ ಕಾದಂಬರಿ ಬರೆಯಲು ಸಾಧ್ಯವಾಯಿತು. ಇವರ ಮುಳುಗಡೆ ಊರಿಗೆ ಬಂದವರು ಎಂಬ ಮಕ್ಕಳ ಕಾದಂಬರಿಗೆ ಕೇಂದ್ರ ಸಾಹಿತ್ಯ ಅಕಾಡಮಿಯ 'ಬಾಲ ಸಾಹಿತ್ಯ ಪುರಸ್ಕಾರ' ಸಂದಿದೆ.

# ನಮ್ಮ ಮಣ್ಣಿನ ಮಕ್ಕಳನ್ನು ಗುರುತಿಸುವಲ್ಲಿ ವಿಫಲರಾಗಿದ್ದೇವೆ: ಬೊಮ್ಮಾಯಿ

**ಧಾರವಾಡ:** ನಮ್ಮ ಮಣ್ಣಿನ ಮಕ್ಕಳನ್ನು ಗುರುತಿಸಲು ನಾವು ವಿಫಲರಾಗಿದ್ದೇವೆ. ಧಾರವಾಡದ ಅಂತಸತ್ವ ಆತ್ಮೀಯತೆ, ಪ್ರೀತಿ, ವಿಶ್ವಾಸ. ಅಂತಕರಣ ಎಲ್ಲವನ್ನೂ ಮುಂದಿನ ಪೀಳಿಗೆಗೆ ಬಿಟ್ಟು ಹೋಗುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅಭಿಪ್ರಾಯ ಪಟ್ಟರು.

ಅವರು ಇಂದು ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘದಲ್ಲಿ ದಿ. ಶ್ರೀ ಚನ್ನವೀರೌಡ ಅಣ್ಣಾ ಶಿದ್ರಾಮಗೌಡ ಪಾಟೀಲ್ ಸಂಸ್ಕರಣೆ ದತ್ತಿ ಕಾರ್ಯಕ್ರಮದಲ್ಲಿ ಪ್ರೊ. ಮಲ್ಲಿಕಾರ್ಜುನ ಪಾಟೀಲ್ ಬರೆದಿರುವ ಸೈದಾಪುರ ಸಿ.ಎಸ್.ಪಾಟೀಲ ಜೀವನ ಮತ್ತು ಸಾಧನೆ ಪುಸ್ತಕ ಬಿಡುಗಡೆ ಮಾಡಿ ಮಾತನಾಡಿದರು. ನೂರಾರು ವರ್ಷಗಳಿಂದ ಜಗತ್ತಿಗೆ ಮಹಾಪುರುಷರನ್ನು ಕೊಟ್ಟ ಈ ಮಣ್ಣಿನ ಗುಣ, ಕೇವಲ ಧಾರವಾಡದಲ್ಲಿ ಹುಟ್ಟಿದವರಷ್ಟೇ ಅಲ್ಲ, ಮಹಾರಾಷ್ಟ್ರ, ಗೋವಾದಿಂದ ಬಂದು ಇಲ್ಲಿ ವಿದ್ಯಾರ್ಜನೆ ಪಡೆದು ಉನ್ನತ ಹುದ್ದೆ ಪಡೆದವರು ಅನೇಕರು ಇದ್ದಾರೆ. ನನಗೆ ಧಾರವಾಡದಲ್ಲಿ ಸ್ನೇಹಿತರು ಅತಿ ಹೆಚ್ಚಿದ್ದಾರೆ ಎಂದರು.

ನಮ್ಮೆಲ್ಲರ ಹಿರಿಯರು ಸಿ.ಎಸ್. ಪಾಟೀಲರು ಆ ಕಾಲದಲ್ಲಿ ಅದ್ಭುತ ಸಾಧನೆ ಮಾಡಿದರು. ನಾವೆಲ್ಲ 21 ನೇ ಶತಮಾನ ಜ್ಞಾನದ ಶತಮಾನ ಅಂತ ಹೇಳುತ್ತೇವೆ. ಆದರೆ. ಪಾಟೀಲರು 20 ನೇ ಶತಮಾನದಲ್ಲಿ ಶಿಕ್ಷಣದ ಮಹತ್ವ ತಿಳಿದು ವಿದ್ಯಾರ್ಜನೆ ಮಾಡುತ್ತೇನೆ ಎಂದು ಛಲದಿಂದ ಶಿಕ್ಷಣ ಪಡೆದಿದ್ದರು. ಅವತ್ತು ಇಂಜನೀಯರಿಂಗ್ ಮಾಡುತ್ತೇನೆ ಎಂದು ಮಾಡಿರುವುದು ಅವರ ದೂರದೃಷ್ಟಿಯ ಪ್ರತೀಕ, ಈ ದೇಶ ಈ ನಾಡು ಜಗತ್ತಿನಲ್ಲಿ ಅಮೂಲಾಗ್ರವಾಗಿರುವಂತಹ ಮೂಲಭೂತ ಬದಲಾವಣೆ ಮಾಡುವಂತಹದ್ದು ದೇಶ ಅಥವಾ ಸಂಸ್ಥೆಗಳಲ್ಲಾ, ವ್ಯಕ್ತಿಗಳು ಬದಲಾವಣೆ ಮಾಡಿದ್ದಾರೆ. ಬುದ್ಧ, ಬಸವ, ಕ್ರಿಸ್ತ, ಪೈಗಂಬರ್ ಬದಲಾವಣೆ ತಂದವರು, ವ್ಯಕ್ತಿಯಲ್ಲಿ ಗುರಿ, ಗುರಿ ಮುಟ್ಟುವ ದಾರಿ ಸಾಧನೆಯ ಶಕ್ತಿ ಎಲ್ಲವೂ ಕೇಂದ್ರಿಕೃತವಾದ ಮನಸ್ಸಿನಿಂದ ಮಾಡಲು ಸಾಧ್ಯ. ಜಗತ್ತಿನಲ್ಲಿ ಮಹಾ ಕ್ರಾಂತಿಗಳಾಗಿವೆ. ಫ್ರೆಂಚ್ ಕಾಂತಿ, ರಷ್ಯನ ಕ್ರಾಂತಿ, ಚೀನಾ ಕಾಂತಿ, ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ನಮ್ಮಲ್ಲಿ ಏಕಾಗ್ರತೆ ಇತ್ತು. ಸ್ವಾತಂತ್ರ ಬಂದ ಮೇಲೆ ಏಕಾಗತೆ ಹೋಗಿ ಎರಡು ದೇಶವಾಗಿ ಒಡೆಯಿತು. ಬದಲಾವಣೆಯನ್ನು ಹೇಗೆ ನಿರ್ವಹಿಸಬೇಕು, ಬದಲಾವಣೆ ನಂತರ ಏನು ಎನ್ನುವ ಚಿಂತನೆ ಆಗಬೇಕು. ಬುದ್ಧ, ಬಸವ, ಕ್ರಿಸ್ತ, ತಮ್ಮ ಚಿಂತನೆಯನ್ನು



ಎಂದೂ ಬದಲಾಯಿಸಲಿಲ್ಲ. ನಾನು ಇದನ್ನು ಯಾಕೆ ಹೇಳುತ್ತಿದ್ದೇನೆ ಎಂದರೆ. ನಾವು ದೂರದ ಬಗ್ಗೆ ಮಾತನಾಡುತ್ತೇವೆ. ಆದರೆ, ಈ ನೆಲದ ಮಣ್ಣಿನ ಮಕ್ಕಳ ಬಗ್ಗೆ ನಾವು ಮಾತನಾಡುವುದಿಲ್ಲ. ಪಕ್ಕದ ರಾಜ್ಯದ ಹೊರಾಟಗಳು ದೊಡ್ಡದಾಗಿ ಕಾಣಿಸುತ್ತವೆ. ಚನ್ನವೀರಗೌಡರು ಮಾಡಿರುವ ಸಾಧನೆ ಕರ್ನಾಟಕದ ಅಗ್ರಮಾನ್ಯ ಸಾಧನೆಯಾಗಿದೆ. ಎಂ. ವಿಶ್ವೇಶ್ವರಯ್ಯ ಅವರು ಸಾಧನೆ ಮಾಡಿದ್ದಾರೆ. ಅದು ಎಲ್ಲರಿಗೂ ಗೊತ್ತಾಗಿದೆ. ಆದರೆ, ಚನ್ನವೀರಗೌಡರ ಸಾಧನೆ ಹೊರ ಬಂದಿಲ್ಲ ಎಂದು ಹೇಳಿದರು.

ವಿದ್ಯಾವರ್ಧಕ ಸಂಘ, ಕೇವಲ ಭಾಷೆ, ಸಂಸ್ಕೃತಿಗೆ ಸಂಬಂಧಿಸಿದ ಸಂಘ ಅಲ್ಲ, ನಮ್ಮ ನಾಡು, ನುಡಿ ಜಲ ಹಾಗೂ ಬದುಕಿನ ಎಲ್ಲ ವಿಷಯಗಳಿಗೆ ಮಾರ್ಗದರ್ಶನ ಮಾಡುವ ಸ್ಥಾನದಲ್ಲಿದೆ. ಕರ್ನಾಟಕ ಏಕೀಕರಣ ಪ್ರಾರಂಭವಾಗಿರುವುದು ಇಲ್ಲಿಯೇ ಅದರಗುಂಚಿಯ ಶಂಕರಗೌಡರು, ಉಪವಾಸ ಮಾಡಿ ಲಾಠಿ ಚಾರ್ಜ್ ಆಗದಿದ್ದರೆ ಕರ್ನಾಟಕ ಏಕೀಕರಣ ಆಗುತ್ತಿರಲಿಲ್ಲ. ಯಶಸ್ಸಿಗೆ ಬಹಳ ಜನ ಅಪ್ಪಂದಿರು ಇರುತ್ತಾರೆ. ಅದ್ಭುತವಾದ ನಾಡು ನಮ್ಮದು, ವಿಜಯನಗರ ಸಾಮಾಜ್ಯ ಆಳಿದ ನಾಡಿದು, ಶ್ರೇಷ್ಠ ಆಡಳಿತಗಾರರು, ಸಾಹಿತಿಗಳು ಆಳಿದ ನಾಡಿದು, ಇಡೀ ಜಗತ್ತಿನಲ್ಲಿಯೇ ನಾವು ವಿಶಿಷ್ಟ ಸ್ಥಾನ ಪಡೆಯಬಹುದು. ಹನ್ನೊಂದನೆ ಶತಮಾನದ ಆರನೇ ವಿಕ್ರಮಾಧಿತ್ಯನ ಆಡಳಿತದ ಕುರಿತು ಒಬ್ಬರು ಬರೆದಿದ್ದಾರೆ. ಆಳುವುದು ಬೇರೆ ಆಡಳಿತ ಮಾಡುವುದು ಬೇರೆ ಎಂದು ಹೇಳುತ್ತಾರೆ. ಅಭಿವೃದ್ಧಿ ಇಲಾಖೆ ಕಂದಾಯ ಇಲಾಖೆ, ಮಿಲಿಟರಿಯಲ್ಲಿ ಕೆಲಸ ಮಾಡಿದರೆ ದಂಡನಾಯಕ ಆಗಬಹುದು ಎಂದು ಹೇಳಿದ್ದಾರೆ ಎಂದರು.

ಲಿಂಗಾಯತ ಸಂಸ್ಥೆಯನ್ನು ಕಟ್ಟಿದವರು ಎಲ್ಲರೂ ವಿದ್ಯಾವಂತರಾಗಿರಲಿಲ್ಲ. ಅವರ ಮಕ್ಕಳು ವಿದ್ಯಾವಂತರಾಗುತ್ತಾರೆ ಎಂಬ ಉದ್ದೇಶದಿಂದ ಕಟ್ಟಿದರು. ಲಿಂಗಾಯತ ಸಂಸ್ಥೆ, ಮುರುಗಾ ಮಠ ಈ " ಭಾಗದಲ್ಲಿ ಇರದಿದ್ದರೆ ನಾವೆಲ್ಲ ವಿದ್ಯಾವಂತರಾಗಲು ಸಾಧ್ಯವಿರಲಿಲ್ಲ. ಚನ್ನವೀರಗೌಡರ ಬಗ್ಗೆ ಬಂದಿರುವ ಈ ಪುಸ್ತಕ ಸಮಯೋಚಿತವಾಗಿದೆ. ಸಿ.ಎಸ್. ಪಾಟೀಲ್ ಅವರು ಇಂದಿನ ವ್ಯವಸ್ಥೆಗೆ ಅಪವಾದ, ಅಂದರೆ ಅವರ ಘನತೆ ಕಡಿಮೆಯಾಗಲಿಲ್ಲ. ವ್ಯವಸ್ಥೆ ಅಷ್ಟು ಅಧೋಗತಿಗೆ ಹೋಗಿದೆ. ಅವರು ಅಷ್ಟೊಂದು ಪ್ರಾಮಾಣಿಕ, ವ್ಯಕ್ತಿ, ಅವರು ಪವರ್ ಪೊಲಿಟಿಕ್ಸ್ ಮಾಡಿದ್ದರೆ ಎಲ್ಲಿಯೋ ಹೋಗುತ್ತಿದ್ದರು. ಆದರೆ, ಅವರು ಸೈದಾಪುರ ಗೌಡರಾಗಿಯೇ ಉಳಿದಿದ್ದಾರೆ. ಅವರು ಯಾವುದಕ್ಕೂ ಹೊಂದಾಣಿಕೆ ಮಾಡಿಕೊಳ್ಳದ ವ್ಯಕ್ತಿ. ಅವರು ಹೋರಾಟವನ್ನು ಹುಡುಕಿಕೊಂಡು ಹೋಗುವವರು. ಬಹಳ ಸ್ನೇಹ ಜೀವಿ, ಜೀವಕ್ಕೆ ಜೀವ ಕೊಡುವವರು, ಹಗಲು ರಾತ್ರಿ ಎನ್ನದೇ ಎಲ್ಲರ ಜೊತೆಗೆ ನಿಲ್ಲುತ್ತಿದ್ದರು.

ಒಂದು ಶಿಸ್ತು, ಪರಂಪರೆಯಿಂದ, ಹಿರಿಯ ಸಾಧನೆಯ ಪ್ರೇರಣೆಯಿಂದ ಬಂದಿದ್ದರಿಂದ ಸೈದಾಪುರ ಗೌಡರು ಏನು ಗಳಿಸಿದ್ದರೊ, ಅವರ ಮರಿಮೊಮ್ಮಗ ಅದನ್ನು ಉಳಿಸಿಕೊಂಡು ಹೊರಟಿದ್ದಾರೆ. ವಿದ್ಯಾವರ್ಧಕ ಸಂಘ ಏನೇ ಹೋರಾಟ ರೂಪಿಸಿದರೂ, ನಾನು ನಿಮ್ಮ ಜೊತೆಗೆ ಇರುತ್ತೇನೆ. ಧಾರವಾಡದ ಅಂತಸತ್ವ ಆತ್ಮೀಯತೆ. ಪ್ರೀತಿ, ವಿಶ್ವಾಸ, ಅಂತಕರಣ ಎಲ್ಲವನ್ನೂ ಮುಂದಿನ ಪೀಳಿಗೆಗೆ ಬಿಟ್ಟು ಹೋಗುವ ಜವಾಬ್ದಾರಿ ನಮ್ಮೆಲ್ಲರದ್ದಿದೆ. ಸಿ.ಎಸ್. ಪಾಟೀಲರು ಕೆಸರಿನಲ್ಲಿ ಅರಳಿದ ಕಮಲ ಇದ್ದ ಹಾಗೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕರಾದ ವಿ.ಐ. ಪಾಟೀಲ್, ವಿದ್ಯಾವರ್ಧಕ ಸಂಘದ ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ ಸೇರಿದಂತೆ ಅನೇಕ ಗಣ್ಯರು ಹಾಜರಿದ್ದರು.

# ಜೆಡಿಎಸ್ ರಾಜ್ಯಾಧ್ಯಕ್ಷ ಹುದ್ದೆಗೆ ನಾನು ಆಸೆ ಪಟ್ಟಿಲ್ಲ: ನಿಖಿಲ್



**ರಾಯಚೂರು:** ರಾಜ್ಯಾಧ್ಯಕ್ಷ ಸ್ಥಾನ ಹಾಗೂ ಇತರ ಯಾವುದೇ ಹುದ್ದೆಗಾಗಿ ಹಪಾಹಪಿಸುತ್ತಿಲ್ಲ. ಪಕ್ಷದ ರಾಜ್ಯಾಧ್ಯಕ್ಷನಾಗಬೇಕೆನ್ನುವ ಬಯಕೆ ನನಗಿಲ್ಲ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ತಿಳಿಸಿದರು

ರಾಯಚೂರು ಜಿಲ್ಲೆಯ ಜೆಡಿಎಸ್ ಪ್ರಾಥಮಿಕ ಸದಸ್ಯತ್ವ ನೊಂದಣಿ ಮತ್ತು ಮಾಜಿ ಸಚಿವರಾದ ಶ್ರೀ ವೆಂಕಟರಾವ್ ನಾಡಗೌಡ ಅವರ ಹುಟ್ಟುಹಬ್ಬದ ಸಮಾರಂಭ ಕಾರ್ಯಕ್ರಮಕ್ಕೂ ಮುನ್ನ ನಿಖಿಲ್ ಕುಮಾರಸ್ವಾಮಿ ಅವರು ಮಾಧ್ಯಮಗಳ ಜತೆ ಮಾತನಾಡಿದರು.

ಜೆಡಿಎಸ್ ರಾಜ್ಯಾಧ್ಯಕ್ಷ ಬದಲಾವಣೆ ಪಕ್ಷದ ವೇದಿಕೆಯಲ್ಲಿ ಯಾವುದೇ ಚರ್ಚೆಯಾಗಿಲ್ಲ. ಕುಮಾರಣ್ಣ ಅವರು ಕೇಂದ್ರ ಸಚಿವರಾಗಿ ಪಕ್ಷದ ಅಧ್ಯಕ್ಷರಾಗಿದ್ದಾರೆ. ಜೆಡಿಎಸ್ ರಾಜ್ಯಾಧ್ಯಕ್ಷ ಸ್ಥಾನ ಬದಲಾವಣೆ ಮಾಡುವಂತಿದ್ದರೆ ಪಕ್ಷದಲ್ಲಿ ಹಿರಿಯರು, ಅನುಭವಿಗಳು ಇದ್ದಾರೆ. ಅವರಿಗೆ ಆದ್ಯತೆ ನೀಡಲಾಗುತ್ತದೆ. ಈಗ ಈ ವಿಷಯ ಅಪ್ರಸ್ತುತ ಎಂದರು.

ಜೆಡಿಎಸ್ ಪಕ್ಷ ಎನ್‌ಡಿಎ ಅಂಗವಾಗಿರುವದರಿಂದ ಮುಂಬರುವ ತಾಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್ ಚುನಾವಣೆಗಳು ಹೊಂದಾಣಿಕೆಯೊಂದಿಗೆ ಸ್ಪರ್ಧಿಸಲಾಗುವುದು. ವಿವಿಧ ಕ್ಷೇತ್ರಗಳಲ್ಲಿರುವ ಗೊಂದಲಗಳನ್ನು ರಾಜ್ಯ ನಾಯಕರು ಚರ್ಚೆ ಮಾಡಿ ಪರಿಹಾರ ಕಂಡುಕೊಳ್ಳಲಿದ್ದಾರೆ. ಮುಂದಿನ ದಿನಗಳಲ್ಲಿ ರಾಜ್ಯದ ಜನತೆ ಕಾಂಗ್ರೆಸ್ ತಿರಸ್ಕಾರ ಮಾಡುವ ಕಾಲ ದೂರವಿಲ್ಲ ಎಂದರು ತಿಳಿಸಿದರು.

ಕಾಂಗ್ರೆಸ್ ಆಡಳಿತ ವಿರುದ್ಧ ಜನತೆ ಬೇಸತ್ತಿದ್ದಾರೆ ರಾಜ್ಯದಲ್ಲಿ ಕಾಂಗ್ರೆಸ್ ಭ್ರಷ್ಟ ಆಡಳಿತ ನಡೆಸುತ್ತಿದ್ದು, ಮುಡಾ ಹಗರಣ, ಭೋವಿ ನಿಗಮ, ವಾಲ್ಮೀಕಿ ಅಭಿವೃದ್ಧಿ ನಿಗಮ ಭ್ರಷ್ಟಾಚಾರ, ಹಾಲಿನ ದರ, ಬಸ್ ದರ ಏರಿಕೆ ಖಂಡಿಸಿ ಬಿಜೆಪಿಯೊಂದಿಗೆ ಜೊತೆಗೂಡಿ ರಾಜ್ಯದ ಜನತೆಯ ಪರ ಧ್ವನಿ ಎತ್ತುವ ಕೆಲಸ ಜೆಡಿಎಸ್ ಮಾಡುತ್ತಿದೆ. ಕಾಂಗ್ರೆಸ್ ಆಡಳಿತ ವಿರುದ್ಧ ಜನತೆ ಬೇಸತ್ತಿದ್ದಾರೆ ಎಂದು ಆರೋಪಿಸಿದರು.

ಯುವ ಘಟಕದ ರಾಜ್ಯಾಧ್ಯಕ್ಷನಾಗಿ ರಾಜ್ಯಾದಾದ್ಯಂತ ಪಕ್ಷ ಸಂಘಟನೆಗೆ ಶ್ರಮಿಸುತ್ತಿದ್ದೇನೆ. ಈಗಾಗಲೇ ಏಳು ಜಿಲ್ಲೆಗಳಲ್ಲಿ ಪ್ರವಾಸ ಮಾಡಿದ್ದೇನೆ.

ರಾಯಚೂರಿಗೂ ಬರಬೇಕಿತ್ತು. ಆದರೆ ಉಪಚುನಾವಣೆ ಹಿನ್ನಲೆಯಲ್ಲಿ ಸಾಧ್ಯವಾಗಿರಲಿಲ್ಲ. ಮೈಸೂರು ಪ್ರಾಂತ್ಯದ ಜೆಡಿಎಸ್‌ಗೆ ರಾಜಕೀಯ ಶಕ್ತಿ ತುಂಬಿದೆ. ಈ ಭಾಗದಲ್ಲಿ ಜೆಡಿಎಸ್ ಪಕ್ಷಕ್ಕೆ ಉತ್ತಮ ಒಲವಿದೆ. ಮುಂದಿನ ದಿನಗಳಲ್ಲಿ ಹಿರಿಯರ ಅನುಭವನಗಳನ್ನು ಪಡೆದು ಪಕ್ಷ ಸಂಘಟನೆಗೆ ದುಡಿಯುವೆ ಎಂದರು.

ಚನ್ನಪಟ್ಟಣ ಉಪಚುನಾವಣೆಯಲ್ಲಿ ನನ್ನ ಸೋಲಿಗೆ ನಾನಾ ಕಾರಣಗಳಿವೆ. ಮೂರು ದಿನ ಮುಂಚೆಯೇ ಗೃಹಲಕ್ಷ್ಮೀ ಯೋಜನೆಯ ಮೂರು ತಿಂಗಳ ಹಣ ಚುನಾವಣೆ ಎರಡು ದಿನಗಳು ಇರುವ ಮುನ್ನ ಮಹಿಳೆಯರ ಖಾತೆಗೆ ಹಾಕಿದರು.

ರಾಜ್ಯ ಸರಕಾರ ಅಧಿಕಾರ ದುರುಪಯೋಗ ಮಾಡಿಕೊಂಡು ಮತ ಪಡೆದುಕೊಂಡಿರುವುದು ನಾಚಿಕೆಗೇಡು. ಜೆಡಿಎಸ್ ಬಲಿಷ್ಠವಾಗಿದ್ದಾಗ ಮನೆಯವರು ನಿಂತುಕೊಂಡು ಚುನಾವಣೆ ಎದುರಿಸುತ್ತಾರೆ.

ಸೋಲಿನ ಭೀತಿಯಿದ್ದರೆ ಕಾರ್ಯಕರ್ತರನ್ನು ಬಲಿ ಕೊಡುತ್ತಾರೆ ಎನ್ನುವ ವಿರೋಧಿಗಳ ಆರೋಪ ಸುಳ್ಳಾಗಿಸಲು ನಾನು ಸ್ಪರ್ಧೆ ಮಾಡಬೇಕಾಯಿತು ಎಂದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ವೆಂಕಟರಾವ ನಾಡಗೌಡ, ದೇವದುರ್ಗಾ ಶಾಸಕಿ ಜಿ.ಕರೆಮ್ಮ ನಾಯಕ, ಮಾನ್ವಿ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ, ರಾಯಚೂರು ಜಿಲ್ಲಾಧ್ಯಕ್ಷ ಎಂ.ವಿರುಪಾಕ್ಷಿ, ಕೊಪ್ಪಳ ಜಿಲ್ಲಾಧ್ಯಕ್ಷ ಸಿ.ವಿ.ಚಂದ್ರಶೇಖರ, ಮುಖಂಡರಾದ ಮಹಾಂತೇಶ ಪಾಟೀಲ್ ಅತ್ತನೂರು, ಶಿವಶಂಕರ ವಕೀಲ, ಬಸವರಾಜ ನಾಡಗೌಡ, ಚಂದ್ರಭೂಪಾಲ ನಾಡಗೌಡ ಸೇರಿದಂತೆ ಅನೇಕರು ಇದ್ದರು



ಜಾತ್ಯತೀತ ಜನತಾದಳದ ಹಿರಿಯ ಮುಖಂಡ ಪುಟ್ಟಸ್ವಾಮಿಯವರು ನಿಧನರಾದ ಹಿನ್ನೆಲೆಯಲ್ಲಿ ಯುವ ಜನತಾದಳ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರ ಧರ್ಮಪತ್ನಿ ರೇವತಿ ನಿಖಿಲ್ ಕುಮಾರಸ್ವಾಮಿ ಅವರು ಚನ್ನಪಟ್ಟಣ ತಾಲ್ಲೂಕಿನ ಕಾಂಡಕನಹಳ್ಳಿ ಗ್ರಾಮದಲ್ಲಿ ಅವರ ಮನೆಗೆ ಭೇಟಿ ನೀಡಿ ಅಂತಿಮ ದರ್ಶನ ಪಡೆದರು. ನಂತರ ಕುಟುಂಬ ಸದಸ್ಯರಿಗೆ ಸಾಂತ್ವನ ಹೇಳಿದರು.

# ಬಿಜೆಪಿ ಹೆಚ್ಚು ಸದಸ್ಯತ್ವ ಹೊಂದಿರುವ ಪಕ್ಷ

**ಬೆಂಗಳೂರು:** ದೇಶಕ್ಕೆ ಭಾರತೀಯ ಜನತಾ ಪಾರ್ಟಿ ಅನಿವಾರ್ಯ ಪ್ರಧಾನಿ ನರೇಂದ್ರ ಮೋದಿಯವರು ದೇಶದ ಪ್ರಗತಿಗಾಗಿ ಹಲವಾರು ಯೋಜನೆಗಳನ್ನು ರೂಪಿಸಿ ದೇಶವನ್ನು ಉನ್ನತ ಮಟ್ಟಕ್ಕೆ ತೆಗೆದುಕೊಂಡು ಹೋಗುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಸಂಸದೆ ಹಾಗೂ ಕೇಂದ್ರ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಹೇಳಿದ್ದಾರೆ.

ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ನಾಗಪುರ ಶಾಸಕರ ಕಚೇರಿಯಲ್ಲಿ ಇಂದು ಕ್ಷೇತ್ರದಲ್ಲಿ ಬಿಜೆಪಿ ಸದಸ್ಯತ್ವ ನೊಂದಣಿ ಮಾಡಿದ ಕಾರ್ಯಕರ್ತರಿಗೆ ಅಭಿನಂದನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಬಿಜೆಪಿ ಸದಸ್ಯತ್ವ ನೋಂದಣಿಯಲ್ಲಿ ಕಳೆದ ಮೂರು ವರ್ಷದಲ್ಲಿ ಹೆಚ್ಚು ಸದಸ್ಯತ್ವ ನೋಂದಣಿಯಾಗಿದೆ ಪ್ರಥಮಬಾರಿಗೆ ಒಂದು ರೂಪಾಯಿಂದ ಈಗ 5 ರೂಪಾಯಿ ಶುಲ್ಕ ಹೊರಗೆ ನೊಂದಣಿ ಮಾಡಲಾಗುತ್ತಿದೆ 12 ಕೋಟಿ ಸದಸ್ಯ ರನ್ನು ಹೊಂದಿರುವ ದೇಶದಲ್ಲಿ ಅತಿ ದೊಡ್ಡ ಪಾರ್ಟಿ ಅದು ಭಾರತೀಯ ಜನತಾ ಪಾರ್ಟಿ ಎಂದು ಸಂತಸ ಹಂಚಿಕೊಂಡರು.

ರಾಮ ಮಂದಿರ ನಿರ್ಮಾಣದ ಹೆಸರಿನಲ್ಲಿ ಲಕ್ಷಾಂತರ ಜನ ಬಲಿದಾನವಾಯಿತು ನರೇಂದ್ರ ಮೋದಿಯವರು ಪ್ರಧಾನಿಯಾದ ನಂತರ ಒಂದು ತೊಟ್ಟು ರಕ್ತ ಹರಿಯದಂತೆ ಸಂಕಲ್ಪ ಮಾಡಿ ಸುಪ್ರೀಂ ಕೋರ್ಟ್ ತೀರ್ಪಿನಂತೆ ರಾಮ ಮಂದಿರ ನಿರ್ಮಿಸಲಾಯಿತು. ದೇಶದ



ವಿಚಾರ ಬಂದಾಗ ಆಚಾರ ವಿಚಾರ ಸಂಸ್ಕೃತಿ ಸಂಪ್ರದಾಯ ಇದೆ ಎಂದರೆ ಅದು ಭಾರತೀಯ ಜನತಾ ಪಾರ್ಟಿ. ಇಸ್ರೋ ಸಂಸ್ಥೆ ತಂತ್ರಜ್ಞಾನವನ್ನು ವಿಶ್ವಮಟ್ಟಕ್ಕೆ ಹೇರಿಸಿದ ಹಿರಿಮೆ ನಮ್ಮ ಪಾರ್ಟಿಯದ್ದು ಸಾಮಗ್ರಿಗಳನ್ನು ರಫ್ತು ಮಾಡುವಲ್ಲಿಯೂ ನಮ್ಮ ದೇಶ ಮುನ್ನಡೆಯಲ್ಲಿದೆ ಎಂದರು.

ಮಹಾಲಕ್ಷ್ಮಿ ವಿಧಾನಸಭಾ ಕ್ಷೇತ್ರದಲ್ಲಿ ನಮ್ಮ ಪಕ್ಷದ 4,750 ಸಕ್ರೀಯ ಸದಸ್ಯರಿದ್ದು 78,000 ಕ್ಕೂ ಹೆಚ್ಚು ಸದಸ್ಯತ್ವ ಮಾಡಿರುವುದು ಹೆಮ್ಮೆಯ ವಿಷಯ, ಗೋಪಾಲಣ್ಣರವರು ನಮ್ಮ ಪಕ್ಷಕ್ಕೆ ಒಂದು ಶಕ್ತಿ ಯಾಗಿ ಕೆಲಸ ಮಾಡುತ್ತಿದ್ದಾರೆ ಜನಪ್ರತಿನಿಧಿಯಾಗಿ ಪ್ರತಿದಿನವೂ ಕ್ಷೇತ್ರದ ಒಂದಲ್ಲ ಒಂದು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುತ್ತಾರೆ ಜನತೆಗೆ ಅವರ ಶಕ್ತಿ ಮೀರಿ ಸವಲತ್ತುಗಳನ್ನು ನೀಡಿ ಹಗಲಿರುಳು ಕಷ್ಟ ಸುಖಗಳಿಗೆ ಸ್ಪಂದಿಸುತ್ತಿರುವ ಏಕೈಕ ವ್ಯಕ್ತಿ ಎಂದರೆ ಶಾಸಕರಾದ ಗೋಪಾಲಣ್ಣನವರು ಎಂದು ಶ್ಲಾಘಿಸಿದರು ಸದಸ್ಯತ್ವ ಮಾಡಿದ ಕಾರ್ಯಕರ್ತರಿಗೆ ನನ್ನ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸುತ್ತೇನೆ ಎಂದು ಸಂಸದರು ತಿಳಿಸಿದರು.

ಶಾಸಕ ಗೋಪಾಲಯ್ಯನವರು ಮಾತನಾಡಿ, ಸದಸ್ಯತ್ವ ಮಾಡಿದ ಕಾರ್ಯಕರ್ತರಿಗೆ ನನ್ನ ತುಂಬು ಹೃದಯದ ಅಭಿನಂದನೆಯನ್ನು ಸಲ್ಲಿಸುತ್ತೇನೆ ಬೂತ್ ಮಟ್ಟದ ಮುಖಂಡರುಗಳು ಹೆಚ್ಚಿನ ಶ್ರಮದಿಂದ ಮನೆ ಮನೆಗೆ ತೆರಳಿ, ಸದಸ್ಯತ್ವವನ್ನು ಮಾಡಿಸಿದ್ದೀರಿ ಅದರಲ್ಲಿ ನನ್ನ ಒತ್ತಡವು ಇತ್ತು ಅವರವರ ವಾರ್ಡ್ಗಳಲ್ಲಿ ಹೆಚ್ಚಿನ ಶ್ರಮವಹಿಸಿದ್ದೀರಿ ನಿಮಗೆ ಕೃತಜ್ಞತೆಯನ್ನು ಸಲ್ಲಿಸುತ್ತೇನೆ ಕೊರೋನಾ ಸಂದರ್ಭದಲ್ಲಿ ಸನ್ಮಾನ್ಯ ನರೇಂದ್ರ ಮೋದಿಯವರು ಒಂದು ಕರೆಯನ್ನು ಕೊಟ್ಟರು ಅದು ಕ್ಷಯರೋಗ ದೇಶದಲ್ಲಿ ಮುಕ್ತಿಗೊಳಿಸಬೇಕು ಎಂದು ಅದರಂತೆ ನಾನು ನಮ್ಮ ಕ್ಷೇತ್ರದ ಕ್ಷಯ ರೋಗಿಗಳನ್ನು ಗುರುತಿಸಿ ಔಷಧಿ ಪೌಷ್ಟಿಕ ಕಿಟ್ ಗಳನ್ನು ಪ್ರತಿ ತಿಂಗಳು ಕೊಡುತ್ತಿದ್ದೇನೆ ನಮ್ಮ ಕ್ಷೇತ್ರದಲ್ಲಿ ಇಲ್ಲಿಯವರೆಗೂ 730 ರೋಗಿಗಳು ಸಂಪೂರ್ಣ ಗುಣಮುಖರಾಗಿದ್ದಾರೆ ಈ ಕಾರ್ಯವನ್ನು ಮೆಚ್ಚಿ ರಾಜ್ಯಪಾಲರು ಸನ್ಮಾನ ಮಾಡಿದರು ಈ ಕೆಲಸ ಮಹಾಲಕ್ಷ್ಮಿ ಲೇಔಟ್ ಒಂದೇ ಕ್ಷೇತ್ರದಲ್ಲಿ ನಡೆಯುತ್ತಿದೆ, ಇದನ್ನು ಎಲ್ಲಾ ಕ್ಷೇತ್ರದ ಜನಪ್ರಗತಿ ನಿಧಿ ಗಳು ನಡೆಸಬೇಕು ಎಂಬುದೇ ನನ್ನ ಆಶಯ ನಮ್ಮ ಕ್ಷೇತ್ರದ ಡಯಾಲಿಸಿಸ್ ಸೆಂಟರ್ ನಲ್ಲಿ ಇಲ್ಲಿಯವರೆಗೂ 40,000 ಜನರಿಗೆ ಡಯಾಲಿಸಿಸ್ ಆಗಿದೆ ಈ ಎಲ್ಲಾ ಕೆಲಸಗಳನ್ನು ನಾನು ವೋಟಿಗಾಗಿ ಮಾಡುತ್ತಿಲ್ಲ ನಮ್ಮ ಕ್ಷೇತ್ರದ ಜನತೆ ಮೇಲಿರುವ ಅಭಿಮಾನದಿಂದ ಮಾಡುತ್ತಿದ್ದೇನೆ ಎಂದರು.

ಸಮಾರಂಭದಲ್ಲಿ ಮಾಜಿ ಶಾಸಕರುಗಳಾದ ಲಕ್ಷ್ಮಿ ನಾರಾಯಣ್ ,ನೆ ಲ ನರೇಂದ್ರಬಾಬು ಕ್ಷೇತ್ರದ ಅಧ್ಯಕ್ಷ ರಾಘವೇಂದ್ರ ಶೆಟ್ಟಿ ಪಾಲಿಕೆ ಮಾಜಿ ಉಪ ಮಹಾಪೌರರಾದ ಹೇಮಲತಾ ಗೋಪಾಲಯ್ಯ, ಎಸ್ ಹರೀಶ್ ಉತ್ತರ ಜಿಲ್ಲಾ ಘಟಕದ ಬಿಜೆಪಿ ಉಪಾಧ್ಯಕ್ಷ ಜಯರಾಮಯ್ಯ ಪಾಲಿಕೆ ಮಾಜಿ ಸದಸ್ಯರುಗಳಾದ ರಾಜೇಂದ್ರ ಕುಮಾರ್, ಮಹಾದೇವ್, ಪದ್ಮಾವತಿ ಶ್ರೀನಿವಾಸ್, ನಾಗರತ್ನ ಸೇರಿದಂತೆ ನೂರಾರು ಮುಖಂಡರುಗಳು ಪಾಲ್ಗೊಂಡಿದ್ದರು

# ಯಶಸ್ವಿನಿ ಯೋಜನೆ: ಜ.31 ಕೊನೆಯ ದಿನಾಂಕ

**ಬೆಂಗಳೂರು:** ಕರ್ನಾಟಕ ಪತ್ರಕರ್ತರ ಸಹಕಾರ ಸಂಘದಲ್ಲಿ ಯಶಸ್ವಿನಿ ಯೋಜನೆ ನವೀಕರಿಸಲಾಗುತ್ತಿದೆ. ಹೊಸ ಸೇರ್ಪಡೆಗೂ ಅವಕಾಶವಿದೆ. ಯೋಜನೆಗೆ ಒಳಪಡುವ ಸದಸ್ಯರು ಸಂಘಕ್ಕೆ ಭೇಟಿ ನೀಡಿ ತಮ್ಮ ಹೆಸರು ಮತ್ತು ವಿವರವನ್ನು ನಿರ್ದಿಷ್ಟ ಅರ್ಜಿ ನಮೂನೆಯಲ್ಲಿ ಭರ್ತಿ ಮಾಡಬೇಕು ಎಂದು ಪ್ರಭಾರ ಕಾರ್ಯದರ್ಶಿ ಕೆಂಪರಾಜು ಅವರು ತಿಳಿಸಿದ್ದಾರೆ.

ಯಶಸ್ವಿನಿ ಯೋಜನೆಗೆ ಹೆಸರನ್ನು ಸೇರಿಸಲು ಇಚ್ಛಿಸುವವರು ಕುಟುಂಬದ ಎಲ್ಲ ಸದಸ್ಯರ ಭಾವಚಿತ್ರ ಮತ್ತು ಆಧಾರ್ ಕಾರ್ಡ್ ಪ್ರತಿ ಕಡ್ಡಾಯ. ಪಡಿತರ ಕಾರ್ಡ್ ಇದ್ದರೆ ಅದರ ಜೆರಾಕ್ಸ್ ಪ್ರತಿಯನ್ನು ನೀಡಬೇಕು.

ಸರ್ಕಾರದ ಈ ಯೋಜನೆಗೆ ಹೆಸರು ಸೇರಿಸಲು ಒಂದು ಕುಟುಂಬಕ್ಕೆ ನಗರ ಸಹಕಾರಿಗಳಿಗೆ 1000 ರೂ. ನಿಗದಿಪಡಿಸಿದೆ. ಅದರ ಪ್ರಕಾರ ನಾಲ್ವರು ಸದಸ್ಯರು ನೋಂದಾಯಿಸಬಹುದು. ಕುಟುಂಬದಲ್ಲಿ ಒಬ್ಬ ಸದಸ್ಯ ಇದ್ದರೂ ಸಾವಿರ ರೂಪಾಯಿಯನ್ನು ಪಾವತಿಸಬೇಕು ಎಂದು ತಿಳಿಸಿದ್ದಾರೆ.

ಇದು ವಂತಿಗೆ ಎಂದು ಸರ್ಕಾರ ತನ್ನ ಕಾರ್ಯಾದೇಶದಲ್ಲಿ ಸೂಚಿಸಿದೆ. ನಾಲ್ವರು ಸದಸ್ಯರಿಗಿಂತ ಹೆಚ್ಚುವರಿ ಸದಸ್ಯರನ್ನು ಸೇರಿಸಲು ಬಯಸಿದರೆ ತಲಾ ಒಬ್ಬರಿಗೆ 200 ರೂಪಾಯಿ ಹೆಚ್ಚುವರಿ ಪಾವತಿಸಬೇಕು. ಇದನ್ನು ಸರ್ಕಾರಕ್ಕೆ ಸಂದಾಯ ಮಾಡಲಾಗುತ್ತದೆ ಎಂದು ಅವರು ಹೇಳಿದ್ದಾರೆ. ನೋಂದಾಯಿಸಿಕೊಳ್ಳಲು ಜ.31, 2025 ಕೊನೆ ದಿನವಾಗಿದ್ದು ಆಸಕ್ತ ಸದಸ್ಯರು ಕೂಡಲೇ ಸಂಘಕ್ಕೆ ಬಂದು ನವೀಕರಣ ಮತ್ತು ಹೊಸದಾಗಿ ಸೇರ್ಪಡೆ ಮಾಡಿಕೊಳ್ಳಲು ವಿನಂತಿಸಲಾಗಿದೆ.


ಹೆಚ್ಚಿನ ವಿವರಕ್ಕೆ ಲಗತ್ತಿಸಿರುವ 'ಯಶಸ್ವಿನಿ ಯೋಜನೆಯ ಷರತ್ತು ನಿಬಂಧನೆಗಳ' ಪ್ರತಿಯನ್ನು ಪರಿಶೀಲಿಸಬಹುದು. ಅಗತ್ಯ ಮಾಹಿತಿಗೆ ಸಂಘವನ್ನು ಮೊಬೈಲ್ ಸಂಖ್ಯೆ: 94804 16505 ಸಂಪರ್ಕಿಸಬಹುದಾಗಿದೆ.



ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ಕಮಲಾನಗರದಲ್ಲಿ ಭಾನುವಾರ ಇಮ್ಮಡಿ ಪುಲಕೇಶಿ ಕನ್ನಡ ಚಾಲುಕ್ಯ ಸಂಘ ಟ್ರಸ್ಟ್ ವತಿಯಿಂದ ಶ್ರೀ ಬಂಡೆ ಮಹಾಕಾಳಿ ದೇವಿಯ ಉತ್ಸವ ಹಾಗೂ ಕನ್ನಡ ರಾಜ್ಯೋತ್ಸವ ಸಮಾರಂಭವನ್ನು ಏರ್ಪಡಿಸಲಾಗಿತ್ತು .ಇದೇ ಸಂದರ್ಭದಲ್ಲಿ ಶ್ರೀ ಬಂಡೆ ಮಹಾಕಾಳಿ ದೇವಿಯ ಜಂಬೂಸವಾರಿಯನ್ನು ಸ್ಥಳೀಯ ಶಾಸಕರಾದ ಕೆ ಗೋಪಾಲಯ್ಯನವರು ಪುಷ್ಪಾರ್ಚನೆ ಮಾಡುವ ಮೂಲಕ ಉದ್ಘಾಟಿಸಿದರು. ಈ ಕಾರ್ಯಕ್ರಮದಲ್ಲಿ ಮಾಜಿ ಬಿಬಿಎಂಪಿ ಸದಸ್ಯೆ ಪದ್ಮಾವತಿ ಶ್ರೀನಿವಾಸ್ ಬಿಜೆಪಿ ಮುಖಂಡರಾದ ಬಿಡಿ ಶ್ರೀನಿವಾಸ್, ಪುರುಷೋತ್ತಮ್, ಇಮ್ಮಡಿ ಪುಲಕೇಶಿ ಕನ್ನಡ ಚಾಲುಕ್ಯ ಟ್ರಸ್ಟ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು

# ಬಿಜೆಪಿಗೆ ಹೋರಾಟ ಬಿಟ್ಟರೆನೂ ಗೊತ್ತಿಲ್ಲ: ಸಚಿವ ಶಿವಾನಂದ

**ಹಾವೇರಿ:** ಬಿಜೆಪಿಯವರಿಗೆ ಹೋರಾಟ ಮಾಡುವುದು ಬಿಟ್ಟು ಬೇರೆ ಏನು ಗೊತ್ತಿದೆ. ಒಂದು ಸಲವಾದರೂ ಅವರು ಅಭಿವೃದ್ಧಿ ಬಗ್ಗೆ ಮಾತನಾಡುತ್ತಾರಾ ಎಂದು ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ್ ಪ್ರಶ್ನಿಸಿದ್ದಾರೆ.



ಹಾವೇರಿಯಲ್ಲಿ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿ, ಮಾತನಾಡಿದ ಅವರು, ಇದೇ ವೇಳೆ ಬಸ್ ದರ ಏರಿಕೆ ಸಮರ್ಥನೆ ಮಾಡಿಕೊಂಡರು. ನೆರೆ ರಾಜ್ಯ ಆಂಧ್ರದಲ್ಲಿ ಅಧಿಕ ದರವಿದೆ. ತಮಿಳುನಾಡಿನಲ್ಲೂ ನಮಗಿಂತ ಹೆಚ್ಚಿದೆ. ನಮ್ಮದೇ ಕಡಿಮೆ ಇದೆ ಎಂದರು.

ಮಹಿಳೆಯರಿಗೆ ಉಚಿತ ನೀಡಿ ಪುರುಷ ಪ್ರಯಾಣಿಕರಿಂದ ಅಧಿಕ ಹಣ ಪಡೆಯುವುದು ಎಷ್ಟು ಸರಿ ಎನ್ನುವ ಪ್ರಶ್ನೆಗೆ ಉತ್ತರಿಸಿದ ಅವರು, ಶಕ್ತಿ ಯೋಜನೆಯಲ್ಲಿ ಬಡವರನ್ನ ಓಡಾಡಿಸ್ತಿದ್ದೇವೆ ಅಂದರೆ ಶ್ರೀಮಂತರು ದುಡ್ಡುಕೊಟ್ಟು ಓಡಾಡುತ್ತಾರೆ. ಕೊನೆ ಪಕ್ಷ ನೋ ಪ್ರಾಫಿಟ್ ನೋ ಲಾಸ್‌ನಲ್ಲಿ ಆದರೂ ಉಳಿಸಬೇಕು ಅನ್ನೋ ಉದ್ದೇಶ ಅಷ್ಟೆ ಎಂದರು.

ಹೆಣ್ಣುಮಕ್ಕಳಿಗೆ ,ಬಡವರಿಗೆ ಏನು ಕೊಡಬೇಕೋ ಅದನ್ನ ಮ್ಯಾಕ್ಸಿಮಮ್ ಕೊಟ್ಟಿದ್ದೇವೆ. ದುಡಿಯುವ ಗಂಡು ಮಕ್ಕಳಿಗೆ 15% ಭಾರ ಆಗಬಹುದು ನಾನು ಇಲ್ಲ ಅಂತ ಹೇಳಲ್ಲ. ಪ್ರತಿ ನಿತ್ಯ ಓಡಾಡ್ತಿರೋದು ಹೆಣ್ಣು ಮಕ್ಕಳೇ ಇದ್ದಾರೆ. ಗಂಡುಮಕ್ಕಳು ಓಡಾಡಲ್ಲ, ನೀವು ಉಲ್ಟಾ ಹೇಳ್ತಿದ್ದೀರಿ ಎಂದು ನಗೆ ಬೀರಿದರು. ಇದೇ ವೇಳೆ ಸಿ.ಟಿ.ರವಿ ಕೇಸ್‌ನಲ್ಲಿ ಸಿಐಡಿಗೆ ಸ್ಥಳ ಮಹಜರ್ ಮಾಡಲು ಸದ್ಯ ಅವಕಾಶ ನೀಡುವುದಿಲ್ಲ ಎಂಬ ವಿಧಾನಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ಕ್ರಮದ ಬಗ್ಗೆ ಪ್ರತಿಕ್ರಿಯೆ ನೀಡುವುದಿಲ್ಲ ಎಂದರು.

ಆ ಘಟನೆ ನಡೆದಾಗ ನಾನು ಸದನದಲ್ಲೇ ಇರಲಿಲ್ಲ. ಹಾವೇರಿ ನಗರದ ಅಭಿವೃದ್ಧಿಗೆ ನಗರೋತ್ಥಾನದಲ್ಲಿ ಸಾಕಷ್ಟು ಹಣ ಬಿಡುಗಡೆಯಾಗಿದೆ. ಹಾವೇರಿ ನಗರಕ್ಕೆ ಬೇಕಾದ ಮೂಲಭೂತ ಸೌಲಭ್ಯಗಳು ಎಲ್ಲವೂ ಸೃಷ್ಟಿಯಾಗುತ್ತವೆ. ಹಾವೇರಿ ನಗರದ ಜನರ ಕುಡಿಯುವ ನೀರಿನ ಭವಣೆ ತಪ್ಪಲಿದೆ ಎಂದರು.

ಭವಿಷ್ಯದಲ್ಲಿ ಹಾವೇರಿ ನಗರಕ್ಕೆ ನೀರು ಕೊರತೆಯಾದರೆ ಅದಕ್ಕೆ ಪ್ರತ್ಯೇಕ ಯೋಜನೆ ರೂಪಿಸಲಾಗಿದೆ. ಈಜುಕೊಳ ಸೇರಿದಂತೆ ಜಿಲ್ಲಾ ಕ್ರೀಡಾಂಗಣದ ನಿರ್ವಹಣೆಗಾಗಿ ವಿಶೇಷ ಗಮನ ನೀಡಲಾಗುವುದು ಎಂದರು.

ಹಾವೇರಿ ಜಿಲ್ಲೆಯ ವರದಾ ನದಿಯ ಬಹುತೇಕ ಬ್ಯಾರೇಜ್‌ಗಳಿಗೆ ಕ್ರಸ್ಟಗೇಟ್ ಹಾಕಲಾಗಿದೆ. ಆದರೆ ಅವುಗಳಲ್ಲಿ ನೀರು ಪೋಲಾಗುತ್ತಿದೆ ಎಂಬ ಆರೋಪ ಸುಳ್ಳು. ಈ ಬಗ್ಗೆ ಇನ್ನೊಮ್ಮೆ ಪರಿಶೀಲನೆ ಕೈಗೊಳ್ಳುತ್ತೇನೆ. ನೀರು ಪೋಲಾಗುತ್ತಿದ್ದರೆ ಅಧಿಕಾರಿಗಳ ಮೇಲೆ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವುದಾಗಿ ಹೇಳಿದರು.

# ಸಿಮೆಂಟ್ ರಸ್ತೆಗಳ ನಿರ್ಮಾಣಕ್ಕೆ ಮನವಿ



**ಶಿಡ್ಲಘಟ್ಟ:** ನಗರದಲ್ಲಿ ಸಾಕಷ್ಟು ವಾರ್ಡ್ ಬಡಾವಣೆ ಹಾಗೂ ಪ್ರಮುಖ ಮಾರ್ಗದ ರಸ್ತೆಗಳು ಹಾಳಾಗಿದ್ದು ಡಾಂಬರು ಮತ್ತು ಸಿಮೆಂಟ್ ರಸ್ತೆ ನಿರ್ಮಾಣ ಆಗಬೇಕು, ಸಿಮೆಂಟ್ ರಸ್ತೆಗಳ ನಿರ್ಮಾಣಕ್ಕೆ ವಿಶೇಷ ಅನುದಾನ ನೀಡುವಂತೆ ಕರ್ನಾಟಕ ಪ್ರದೇಶ್ ಕಾಂಗ್ರೆಸ್ ಸಮಿತಿಯ ಸಂಯೋಜಕ ಬಿ.ವಿ.ರಾಜೀವ್‌ಗೌಡ ಅವರು ಉನ್ನತ ಶಿಕ್ಷಣ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಅವರಲ್ಲಿ ಮನವಿ ಮಾಡಿದರು.

ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿಗೆ ಭೇಟಿ ನೀಡಿದ್ದ ಸಚಿವ ಡಾ.ಎಂ.ಸಿ.ಸುಧಾಕರ್ ಅವರನ್ನು ಭೇಟಿ ಮಾಡಿದ ಕಾಂಗ್ರೆಸ್ ಮುಖಂಡ ರಾಜೀವ್‌ಗೌಡ ಅವರು, ಶಿಡ್ಲಘಟ್ಟ ನಗರದಲ್ಲಿ ಮೂಲ ಸೌಕರ್ಯಗಳನ್ನು ಕಲ್ಪಿಸಲು ವಿಶೇಷ ಅನುದಾನ ನೀಡುವಂತೆ ಮನವಿ ಮಾಡಿದರು.

ಶಿಡ್ಲಘಟ್ಟವು ರೇಷ್ಮೆ ಮತ್ತು ಹೈನುಗಾರಿಕೆಗೆ ಪ್ರಸಿದ್ಧಿಯಾಗಿದ್ದು ಸಾವಿರಾರು ಕುಟುಂಬಗಳು ರೇಷ್ಮೆ ಕೃಷಿ, ನೂಲು ಬಿಚ್ಚಾಣಿಕೆ ಮತ್ತು ಹೈನುಗಾರಿಕೆಯಲ್ಲಿ ತೊಡಗಿಸಿಕೊಂಡಿವೆ. ನೂಲು ಬಿಚ್ಚಾಣಿಕೆ ಮಾಡುವ ಸಾವಿರಾರು ಘಟಕಗಳು ನಗರದಲ್ಲಿದ್ದು ದಿನ ನಿತ್ಯ ಸಾವಿರಾರು ಟನ್‌ಗಟ್ಟಲೆ ಕಸ ಕಡ್ಡಿ ಉತ್ಪತ್ತಿ ಆಗಲಿದೆ, ದಿನ ನಿತ್ಯ ಸರಿಯಾಗಿ ಕಸ ವಿಲೇವಾರಿ ಆಗುತ್ತಿಲ್ಲ, ಕಟ್ಟಡಗಳ ಅವಶೇಷಗಳನ್ನು ವಿಲೇವಾರಿ ಮಾಡಲು ಸೂಕ್ತ ಜಾಗ ಇಲ್ಲದ ಕಾರಣ ನಗರದ ಆಸುಪಾಸಿನ ರಸ್ತೆಗಳ ಅಕ್ಕ ಪಕ್ಕ, ಕೆರೆ ಅಂಗಳದಲ್ಲಿ ರಾತ್ರೋ ರಾತ್ರಿ ಸುರಿಯಲಾಗುತ್ತಿರುವ ಕಾರಣ ಕಸ, ತ್ಯಾಜ್ಯ, ಮಣ್ಣಿನ ಗುಡ್ಡೆಗಳ ನಿರ್ಮಾಣವಾಗಿವೆ ಎಂದು ಬೇಸರ ವ್ಯಕ್ತಪಡಿಸಿದರು.

ಇದಲ್ಲದೆ ಕೋಳಿ ಮತ್ತು ಕುರಿ ಮಾಂಸದ ಅಂಗಡಿಗಳ ತ್ಯಾಜ್ಯವನ್ನು ಸಹ ರಾತ್ರೋ ರಾತ್ರಿ ಎಲ್ಲೆಂದರಲ್ಲಿ ಎಸೆಯುವುದರಿಂದ ಬೀದಿ ನಾಯಿಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ,ನಾಯಿ ಕಡಿತದ ಪ್ರಕರಣಗಳ ಸಂಖ್ಯೆಯೂ ಹೆಚ್ಚುತ್ತಿದ್ದು ಮಕ್ಕಳು ಮರಿ ಒಬ್ಬಂಟಿಯಾಗಿ ಓಡಾಡಲು ಹೆದರುವಂತ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಬಗ್ಗೆ ಕ್ರಮವಹಿಸಿ ನಾಯಿಗಳ ಉಪಟಳವನ್ನು ನಿಯಂತ್ರಿಸಬೇಕಾದ ನಗರಸಭೆಯವರು ಕೂಡ ಈ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯವಹಿಸಿದ್ದಾರೆ,ಹಾಗೆಯೆ ಹಿತ್ತಲಹಳ್ಳಿ ಬಳಿ ಇರುವ ಕಸ ವಿಲೇವಾರಿ ಘಟಕವನ್ನು ಕೂಡ ಸರಿಯಾಗಿ ನಿರ್ವಹಣೆ ಮಾಡುತ್ತಿಲ್ಲ ಎಂದು ದೂರಿದರು.

ಹಸಿ ಮತ್ತು ಒಣ ಕಸವನ್ನು ಪ್ರತ್ಯೇಕಿಸಿ ಕಸದಿಂದ ಗೊಬ್ಬರ ತಯಾರಿಸಿ ರೈತರಿಗೆ ಮಾರಾಟ ಮಾಡಲು ಕ್ರಿಯಾ ಯೋಜನೆ ತಯಾರಿಸಿದ್ದರೂ ಅದನ್ನು ಅನುಷ್ಠಾನ ಮಾಡಲು ನಗರಸಭೆ ಆಡಳಿತ ಮಂಡಳಿ ನಿರ್ಲಕ್ಷಿಸಿದೆ ಎಂದು ಆರೋಪಿಸಿದರು.

ಹಾಗಾಗಿ ನಗರದಲ್ಲಿ ಡಾಂಬರು ಮತ್ತು ಸಿಮೆಂಟ್ ರಸ್ತೆಗಳ ನಿರ್ಮಾಣ ಸೇರಿ ನಗರದ ಅಭಿವೃದ್ದಿಗೆ ವಿಶೇಷ ಅನುದಾನ ನೀಡಬೇಕು, ಕಟ್ಟಡಗಳ ತ್ಯಾಜ್ಯ ಹಾಕಲು ಪ್ರತ್ಯೇಕ ಸ್ಥಳ ಗುರ್ತಿಸಲು ಹಾಗೂ ಬೀದಿ ನಾಯಿಗಳ ಉಪಟಳ ನಿಯಂತ್ರಿಸಲು ನಗರಸಭೆಗೆ ನಿರ್ದೇಶನ ನೀಡಬೇಕೆಂದು ಮನವಿ ಮಾಡಿದರು.

ರಾಜೀವ್‌ಗೌಡರ ಮನವಿ ಆಲಿಸಿದ ಸಚಿವ ಡಾ.ಎಂ.ಸಿ.ಸುಧಾಕರ್ ಅವರು ಫೆಬ್ರವರಿ ತಿಂಗಳಲ್ಲಿ ಹೈಟೆಕ್ ರೇಷ್ಮೆಗೂಡು ಮಾರುಕಟ್ಟೆಗೆ ಭೂಮಿ ಪೂಜೆ ನೆರವೇರಿಸಲಾಗುವುದು ,ಆ ಕಾರ್ಯಕ್ರಮಕ್ಕೆ ಸಿಎಂ ಸಿದ್ದರಾಮಯ್ಯ ಅವರನ್ನು ಆಹ್ವಾನಿಸಲಾಗುವುದು.

ಆ ನಂತರ ಒಂದು ದಿನ ಶಿಡ್ಲಘಟ್ಟ ನಗರ ವೀಕ್ಷಣೆಗೆ ಬರುತ್ತೇನೆ,ಆಗ ನಗರದಲ್ಲಿನ ಎಲ್ಲಾ ಸಮಸ್ಯೆಗಳಿಗೂ ಮುಕ್ತಿ ನೀಡಲು ಮಾಸ್ಟರ್ ಪ್ಲಾನ್ ಮಾಡೋಣ, ಅದಕ್ಕೆ ಅಗತ್ಯವಾದ ಅನುದಾನವನ್ನು ಕೂಡ ಸರಕಾರದಿಂದ ತರುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಭರವಸೆ ನೀಡಿದರು.

ಈಗಾಗಲೆ ನಗರದಲ್ಲಿ 2ನೇ ಹಂತದ ಒಳ ಚರಂಡಿ ನಿರ್ಮಾಣ ಮತ್ತು ಮೊದಲ ಹಂತದ ಒಳ ಚರಂಡಿ ನಿರ್ಮಾಣದಲ್ಲಿನ ಸಮಸ್ಯೆಗಳ ಸರಿಪಡಿಸಲು ಅಗತ್ಯ ಅನುದಾನ ಬಿಡುಗಡೆಯಾಗಿದ್ದು ಶೀಘ್ರದಲ್ಲೆ ಕೆಲಸ ಆರಂಭವಾಗಲಿದೆ, ನಗರಕ್ಕೆ ಕುಡಿಯುವ ನೀರನ್ನು ತರುವ ಕಾಮಗಾರಿಯೂ ಆರಂಭವಾಗಲಿದೆ. ಅದರಿಂದ ನಗರದ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಸಿಕ್ಕಂತಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನಗರಸಭೆ ಸದಸ್ಯ ಅಪ್ಸರ್ ಪಾಷಾ, ತನ್ನು, ಮುಬಾರಕ್, ರಾಜ್ ಕುಮಾರ್, ನಿರಂಜನ್, ಮೌಲಾ ಇನ್ನಿತರರು ಹಾಜರಿದ್ದರು.

# ಅಧ್ಯಕ್ಷ–ಉಪಾಧ್ಯಕ್ಷರ ಅವಿರೋಧ ಆಯ್ಕೆ



**ಶಿಡ್ಲಘಟ್ಟ:** ಮಳಮಾಚನಹಳ್ಳಿ ಗ್ರಾಮ ಪಂಚಾಯಿತಿಗೆ ಅಧ್ಯಕ್ಷ–ಉಪಾಧ್ಯಕ್ಷರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ.

ಒಟ್ಟು 14 ಸದಸ್ಯರ ಬಲ ಹೊಂದಿರುವ ಅಧ್ಯಕ್ಷ ಸ್ಥಾನ ಸಾಮಾನ್ಯ ಮಹಿಳೆ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಪರಿಶಿಷ್ಟ ಪಂಗಡ ಮೀಸಲು ನಿಗದಿಪಡಿಸಲಾಗಿದ್ದು ತಾಲ್ಲೂಕಿನ ಮಳಮಾಚನಹಳ್ಳಿ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾಗಿ ಜಯಲಕ್ಷ್ಮಮ್ಮ ಹಾಗೂ ಉಪಾಧ್ಯಕ್ಷರಾಗಿ ನಾಗವೇಣಮ್ಮ ಅವರನ್ನು ಚುನಾವಣಾ ಅಧಿಕಾರಿ ಚಂದ್ರಪ್ಪ ಘೋಷಿಸಿದ್ದಾರೆ.

ಈ ವೇಳೆ ಚುನಾವಣಾ ಸಹಾಯಕರಾಗಿ ಪಿಡಿಒ ಶೈಲಾ ಅವರು ಕಾರ್ಯ ನಿರ್ವಹಿಸಿದರು.

ಜೆಡಿಎಸ್ ಬೆಂಬಲಿತರಾದ ಅಧ್ಯಕ್ಷ ಹಾಗೂ ಉಪಾಧ್ಯಕ್ಷರು ಕೇವಲ ಒಂದೊಂದು ನಾಮಪತ್ರ ಸಲ್ಲಿಕೆಯಾದ ಹಿನ್ನಲೆಯಲ್ಲಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಜೆಡಿಎಸ್ ಮುಖಂಡರಾದ ಜಗದೀಶ್, ಎಂ.ಕೆ.ರಾಜಶೇಖರ್,ಮುಗಿಲಡಿಪಿ ನಂಜಪ್ಪ, ರಮೇಶ್, ಗಂಗರೆಡ್ಡಿ, ಮುನಿರಾಜು ಗ್ರಾಮ ಪಂಚಾಯತಿ ಸದಸ್ಯರು ಹಾಜರಿದ್ದರು.

# ಗ್ರಾಮಗಳ ಮೂಲಭೂತ ಸೌಕರ್ಯಕ್ಕೆ ಒತ್ತು



**ಚಾಮರಾಜನಗರ:** ಭಾನುವಾರ ತಾಲೂಕಿನ ನಾಗವಳ್ಳಿ, ಹೋಡರಬಾಳುಗ್ರಾಮಗಳಲ್ಲಿ ಸಿಸಿ ರಸ್ತೆ ಚರಂಡಿ. ಅಭಿವೃದ್ಧಿ ಕಾಮಗಾರಿಗೆಎಂಎಸ್‌ಐಎಲ್ ಅಧ್ಯಕ್ಷರು,ಹಾಗೂ ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರು ಭೂಮಿಪೂಜೆ ನೆರವೇರಿಸಿದರು.

ನಂತರ ಮಾತನಾಡಿದ ಅವರು ನಾಗವಳ್ಳಿ ಗ್ರಾಮದ ಪರಿಶಿಷ್ಟ ಜಾತಿ ಬಡಾವಣೆಯಲ್ಲಿ 50ಲಕ್ಷರೂ. ಹಾಗೂ ಹೊಂಡರಬಾಳು ಗ್ರಾಮದ ಪರಿಶಿಷ್ಟ ಜಾತಿ ಬಡಾವಣೆಯಲ್ಲಿ 40ಲಕ್ಷರೂ. ವೆಚ್ಚದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಸಿಮೆಂಟ್ ಕಾಂಕ್ರಿಟ್ ರಸ್ತೆ ಹಾಗೂ ಚರಂಡಿ ನಿರ್ಮಾಣ ಅಭಿವೃದ್ಧಿ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಲಾಗಿದೆ.

ತಮ್ಮ ಕೇತ್ರವ್ಯಾಪ್ತಿಯಲ್ಲಿ ಜನತೆಯ ಆಶಯಕ್ಕೆ ಬದ್ದರಾಗಿ ಗ್ರಾಮಗಳಲ್ಲಿ ರಸ್ತೆ ಚರಂಡಿ, ಸಮುದಾಯ ಭವನ ಆಶ್ರಯಮನೆ ಗಂಗಾ ಕಲ್ಯಾಣ ಯೋಜನೆ ಸೇರಿದಂತೆ ಸರಕಾರ ಮಂಜೂರುಮಾಡುವ ಅನುದಾನ ಹಾಗೂ ಸೌಲಭ್ಯಗಳನ್ನು ಜನರಿಗೆ ಪ್ರಾಮಾಣಿಕವಾಗಿ ತಲುಪಿಸುವ ಕೆಲಸ ಮಾಡಲಾಗುತ್ತಿದೆ, ಕಾಮಗಾರಿ ನಿರ್ವಹಣೆ ಗುತ್ತಿಗೆದಾರರು ಗುಣಮಟ್ಟದ ಕಾಮಗಾರಿಗೆ ಒತ್ತು ನೀಡಬೇಕು ಎಂದು ತಿಳಿಸಿದರು.

ನಾಗವಳ್ಳಿ ಗ್ರಾಪಂ.ಅಧ್ಯಕ್ಷೆ ಗೀತಾ ಶ್ರೀನಿವಾಸ್, ಗ್ರಾ,ಪಂ.ಸದಸ್ಯೆ ಚಂದ್ರಕಲಾ, ತಾ,ಪಂಮಾಜಿ ಅಧ್ಯಕ ಚಿಕ್ಕಮಹದೇವ್, ನಾಗಯ್ಯ ನಾಗವಳಿ, ಲೋಕೇಶ್, ರಮೇಶ್, ಮಹೇಶ್‌ಮೆಡಿಕಲ್, ಸೋಮೇಶ್ವರ್, ನಿರ್ಮಿತಿ ಕೇಂದ್ರದ ಇಂಜಿನಿಯರ್ ಬೀಮ್‌ಸಾಗರ್, ಸೇರಿದಂತೆ ಗ್ರಾಮಸ್ಥರು ಮುಖಂಡರು ಹಾಜರಿದ್ದರು.

# ಲೇಖಕರನ್ನು ಮತ್ತು ಸಾಹಿತ್ಯಾಸಕ್ತರನ್ನು ಪ್ರೋತ್ಸಾಹಿಸುವುದು ನಮ್ಮೆಲ್ಲರ ಜವಾಬ್ದಾರಿ



**ಮುಳಬಾಗಿಲು:** ನಮ್ಮ ಭೂಮಾಪನ ಇಲಾಖೆಯ ಇತಿಹಾಸವು ಕನ್ನಡ ಸಾಹಿತ್ಯದಲ್ಲಿ ಹೆಚ್ಚೆಚ್ಚು ಬರಲೆಂದು ಆಶಿಸುತ್ತ, ಅನಿಲ ಅವರು ಬರೆದ ಕತೆಗಳು ಹಲವು ವಿಶ್ವವಿದ್ಯಾಲಯಗಳಿಗೆ ಪಠ್ಯವಾಗಿವೆ ಹಾಗೂ ಪ್ರತಿಷ್ಠಿತ ಬಹುಮಾನವನ್ನು ಪಡೆದಿರುವ ಅನಿಲ ಗುನ್ನಾಪೂರ ಅವರಂತಹ ಲೇಖಕರನ್ನು ಮತ್ತು ಸಾಹಿತ್ಯಾಸಕ್ತರನ್ನು ಪ್ರೋತ್ಸಾಹಿಸುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಡಾ. ಮೂಡ್ನಾಕೂಡು ಚಿನ್ನಸ್ವಾಮಿ ಹೇಳಿದರು.

ಅನಿಲ್ ಗುನ್ನಾಪೂರ ಅವರು ಬರೆದ 'ಸರ್ವೆ ನಂಬರ್–97' ಎಂಬ ಕಥಾಸಂಕಲನವನ್ನು ಹೊಂಗಿರಣ ಪ್ರಕಾಶನ, ಬುಕ್ ಬ್ರಹ್ಮ ಹಾಗೂ ನ್ಯಾಯ ಸ್ಪಂದನ ಬೆಂಗಳೂರು, ಓದು ಗೆಳೆಯರ ಬಳಗ, ಬಾಗಲಕೋಟೆ ಇವರ ಸಹಯೋಗದಲ್ಲಿ ಭಾನುವಾರ ಕನ್ನಡ ಸಾಹಿತ್ಯ ಪರಿಷತ್ ನ ಶ್ರೀಕೃಷ್ಣರಾಜ ಪರಿಷತ್ತು ಮಂದಿರದಲ್ಲಿ ಪುಸ್ತಕ ಬಿಡುಗಡೆ ಸಮಾರಂಭ ನಡೆಯಿತು.

'ಸರ್ವೆ ನಂಬರ್–97' ಕಥಾಸಂಕಲನವನ್ನು ಹಿರಿಯ ಕವಿ ಹಾಗೂ ಚಿಂತಕ ಡಾ. ಮೂಡ್ನಾಕೂಡು ಚಿನ್ನಸ್ವಾಮಿ, ರಘುನಾಥ ಚ.ಹ ಹಾಗೂ ಬಿಬಿಎಂಪಿ ವಲಯ ಆಯುಕ್ತರು ಮತ್ತು ಯಲಹಂಕ ವಲಯದ ಕರೀಗೌಡ (ಐಎಎಸ್), ಕವಯಿತ್ರಿ ಜ.ನಾ.ವೇಜಶ್ರೀ ಮತ್ತಿತರರು ಗಣ್ಯರು ಬಿಡುಗಡೆಗೊಳಿಸಿದರು.

ಇದೇ ಸಂದರ್ಭದಲ್ಲಿ ರಘುನಾಥ ಚ.ಹ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ ಇಂಡಿ ತಾಲೂಕಿನ ಲೇಖಕರು, ಪ್ರಸ್ತುತ ಬಾಗಲಕೋಟೆಯಲ್ಲಿ ಭೂಮಾಪಕರಾಗಿ ಸೇವೆ ಸಲ್ಲಿಸುತ್ತಿರುವ ಅನಿಲ್ ಗುನ್ನಾಪೂರ ಅವರ ಎರಡನೇ ಪುಸ್ತಕದಲ್ಲಿ ತಮ್ಮ ಅನುಭವಕ್ಕೆ ನಿಲುಕಿದ ಜೊತೆಯ ಜೀವಗಳ ಜೀವನವನ್ನು ಬೇರೆ ಜೀವಗಳಿಗೆ ಮುಟ್ಟಿಸುವಲ್ಲಿ ಯಶಸ್ವಿಯಾಗಿರುವುದು ಇದೊಂದು ವಿಶಿಷ್ಟವಾದದ್ದು, ಹಾಗೆ ಇನ್ನುಳಿದ ಕಥೆಗಳಲ್ಲೂ ಮನುಷ್ಯನ ಬದುಕಿನ ಸಂಕಟಗಳಿಗೆ ಕನ್ನಡಿ ಹಿಡಿದಿರುವರು ವಿಶೇಷವಾಗಿದೆ ಎಂದರು.

ಇದೇ ಕಾರ್ಯಕ್ರಮದಲ್ಲಿ ಶೋಭಾ ಗುನ್ನಾಪುರ, ಹೈಕೋರ್ಟ್ ನ್ಯಾಯವಾದಿ ಸುನಿಲ್ ಗುನ್ನಾಪುರ, ವಿಶ್ವವಿದ್ಯಾಲಯದ ಪ್ರಾಧ್ಯಾಪಕರು, ಸಾಹಿತ್ಯ ಆಸಕ್ತರು, ಮತ್ತಿತರು ಭಾಗವಹಿಸಿದ್ದರು.

# ಅಭಿಮಾನಿಗಳ ಜತೆ ಹುಟ್ಟುಹಬ್ಬ ಆಚರಿಸಿಕೊಂಡ ವಿನಯ್ ಶಾಮ್

**ಚಿಕ್ಕಬಳ್ಳಾಪುರ:** ಜಿ.ಹೆಚ್.ಎನ್ ಫೌಂಡೇಶನ್ ಅಧ್ಯಕ್ಷ ವಿನಯ್ ಶಾಮ್ ರವರಿಗೆ ಹುಟ್ಟು ಹಬ್ಬದ ಸಂಭ್ರಮ, ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಅವರ ಮನೆ ಅಂಗಳದಲ್ಲಿ ಭೋಜನದ ವ್ಯವಸ್ಥೆ ಮಾಡಲಾಗಿತ್ತು, ವಿವಿಧ ರಾಜಕಾರಣಿಗಳು ಉದ್ಯಮಿಗಳು, ಅಪಾರ ಅಭಿಮಾನಿ ಬಳಗ ಸೇರಿದಂತೆ ವಿವಿಧ ಗಣ್ಯರು ವಿನಯ್ ಶ್ಯಾಮ್ ಅವರ ಮನೆಗೆ ಆಗಮಿಸಿ ಹುಟ್ಟು ಹಬ್ಬದ ಶುಭಾಶಯ ಕೋರಿದರು. ಈ ಸಂದರ್ಭದಲ್ಲಿ ಮಾತನಾಡಿದ ವಿನಯ್ ಶ್ಯಾಮ್ ಪ್ರತಿ ವರ್ಷ ಜನವರಿ ಒಂದು ಹಾಗೂ 3ನೇ ತಾರೀಖು ನಮ್ಮ ಮನೆ ಅಂಗಳದಲ್ಲಿ ಬರುವ ಜನಸಾಗರ ನಮ್ಮ ಮನಸ್ಸಿಗೆ ಖುಷಿ ತಂದುಕೊಡುತ್ತೆ ಒಂದು ಊರು ಹಬ್ಬದ ವಾತಾವರಣ ನಿರ್ಮಾಣವಾಗಿರುತ್ತೆ ಒಂದರಂದು ನಮ್ಮ ತಂದೆಯ ಹುಟ್ಟುಹಬ್ಬ ಮೂರನೇ ತಾರೀಖು ನನ್ನ ಹುಟ್ಟು ಹಬ್ಬ ಈ ಎರಡೂ ದಿನಗಳಲ್ಲಿ ಕ್ಷೇತ್ರದ ಸಹಸ್ರಾರು ಅಭಿಮಾನಿಗಳು ಪಕ್ಷಾತೀತವಾಗಿ ಬಂದು ಪ್ರೀತಿ ತೋರಿಸಿ ತಮ್ಮ ಅಭಿಮಾನ ಮೆರೆಯುತ್ತಾರೆ. ನನ್ನ ಹುಟ್ಟುಹಬ್ಬದ ಅಂಗವಾಗಿ ನನಗೆ ಶುಭ ಕೋರಿದ ಎಲ್ಲರಿಗೂ ನಾನು ಅಭಾರಿಯಾಗಿರುತ್ತೇನೆ ಎಂದರು.

ಜನರ ಪ್ರೀತಿ ಗೌರವಕ್ಕೆ ಬೆಲೆ ಕಟ್ಟಲು ಸಾಧ್ಯವಿಲ್ಲ ಅವರ ಪ್ರೀತಿ ಎಂದಿಗೂ ಮರೆಯಲು ಸಾಧ್ಯವಿಲ್ಲ ಜನರ ಅನುಕೂಲಕ್ಕಾಗಿ ಏನೆಲ್ಲಾ ಮಾಡಬಹುದು ಮಾಡುತ್ತ ಬಂದಿದ್ದು ಅವರ ಸಮಸ್ಯೆಗಳನ್ನು ಪರಿಹರಿಸಲು ಹಿಂದಿನಿಂದಲೂ ನಡೆದುಕೊಂಡು ಬಂದಿದ್ದು ಎಲ್ಲಾ ರೀತಿಯ ಸಹಕಾರ ನೀಡಿ ಸ್ಪಂದಿಸಿದ್ದೇನೆ ಎಂದರು.

ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ಎಸ್.ಎಂ. ಮುನಿಯಪ್ಪ,ಅನ್ಸುಯಮ್ಮ,ಬಚ್ಚೇಗೌಡ,ನಂದಿ ಆಂಜಿನಪ್ಪ,ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕೇಶವರೆಡ್ಡಿ,ಜೆಡಿಎಸ್ ಜಿಲ್ಲಾಧ್ಯಕ್ಷ ಮುಕ್ತ ಮುನಿಯಪ್ಪ, ನಗರಸಭೆ ಅಧ್ಯಕ್ಷ ಗಜೇಂದ್ರ ಉಪಾಧ್ಯಕ್ಷ ನಾಗರಾಜ್. ಜೆ, ಸದಸ್ಯರಾದ ಎಸ್.ಎಂ ರಫೀಕ್, ಆನಂದ್ ಬಾಬು ರೆಡ್ಡಿ,ಕಣಿತಹಳ್ಳಿ ವೆಂಕಟೇಶ್,ನರಸಿಂಹಮೂರ್ತಿ, ಅಂಬರೀಶ್, ಮಹಾಕಾಳಿ ಬಾಬು, ಮುನಿರಾಜು, ಮೊಬೈಲ್ ಬಾಬು, ಅಭಿಷೇಕ್, ಮುನೆಗೌಡ, ಮಂಚನಬಲೆ ಗ್ರಾಮ ಪಂಚಾಯತಿ ಅಧ್ಯಕ್ಷ ಮಧು, ಅಂಗರೇಖನಹಳ್ಳಿ ರವಿ,ಮೈಲಪನಹಳ್ಳಿ ಸಮೀ ಉಲ್ಲಾ, ಸುನಿಲ್, ಮೂರು ಪಕ್ಷಗಳ ಮುಖಂಡರು ಅವರ ಅಭಿಮಾನಿಗಳು ಆಗಮಿಸಿ ವಿನಯ್ ಶ್ಯಾಮ್ ರವರಿಗೆ ಹುಟ್ಟುಹಬ್ಬದ ಶುಭಾಶಯಗಳು ಕೋರಿದರು.

# ಸರ್ಕಾರಿ ಪ್ರಥಮದರ್ಜೆ ಕಾಲೇಜಿಗೆ ಭೇಟಿ, ಪರಿಶೀಲನೆ



**ಶಿಡ್ಲಘಟ್ಟ:** ಮುಂದಿನ ಪೀಳಿಗೆಗೆ ಶಿಕ್ಷಣದ ದೃಷ್ಟಿಯಲ್ಲಿಟ್ಟುಕೊಂಡು ಯೋಜನೆಗಳನ್ನು ರೂಪಿಸಿ ತರಗತಿ ಕೊಠಡಿಗಳನ್ನು ದೊಡ್ಡದಾಗಿ ಮಾಡಿ ಮತ್ತಷ್ಟು ಕೋರ್ಸ್‌ಗಳನ್ನು ತರಬೇಕೆಂದು ಯೋಜನೆ ಇದೆ ಎಂದು ಉನ್ನತ ಶಿಕ್ಷಣ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ ಸಿ ಸುಧಾಕರ್ ತಿಳಿಸಿದರು.

ನಗರದ ಸರ್ಕಾರಿ ಪ್ರಥಮದರ್ಜೆ ಕಾಲೇಜಿಗೆ ಸ್ಥಳೀಯ ಶಾಸಕ ಬಿ.ಎನ್. ರವಿಕುಮಾರ್ ಜತೆ ಭೇಟಿ ನೀಡಿ ಪರಿಶೀಲಿಸಿದ ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

ಪ್ರಥಮದರ್ಜೆ ಕಾಲೇಜಿನ ಹೆಚ್ಚುವರಿ ಕೊಠಡಿಗಳ ನಿರ್ಮಾಣಕ್ಕೆ 2023–24ನೇ ಸಾಲಿನಲ್ಲಿ ಸರ್ಕಾರ 3 ಕೋಟಿ ರೂ.ಗಳು ಅನುದಾನವನ್ನು ನೀಡಿದ್ದು ಟೆಂಡರ್ ಪ್ರಕ್ರಿಯೆ ತಡವಾಗಿತ್ತು ಈ ಹಿಂದೆ ಕಟ್ಟಡ ನಿರ್ಮಾಣ ಸಂದರ್ಭದಲ್ಲಿ ಅವೈಜ್ಞಾನಿಕವಾಗಿ ಕಟ್ಟಡಗಳನ್ನು ನಿರ್ಮಿಸಿದ್ದಾರೆ ಆ ರೀತಿ ಆಗಬಾರದು ಎಂದು ವಾಸ್ತು ಸ್ಥಿತಿಯನ್ನು ಪರಿಶೀಲಿಸಿ ಈ ಬಾರಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಮಾಸ್ಟರ್‌ಪ್ಲಾನ್ ನಂತೆ ಹೆಚ್ಚುವರಿ ಕೊಠಡಿ ನಿರ್ಮಿಸುವ ಉದ್ದೇಶ ಹೊಂದಲಾಗಿದೆ ಅದಕ್ಕಾಗಿ ವಿನ್ಯಾಸ ರೂಪಿಸಲಾಗಿದೆ ಎಂದರು.

3 ಮಹಡಿ ನಿರ್ಮಾಣದ ಉದ್ದೇಶ ವಿಟ್ಟುಕೊಂಡು ಕಟ್ಟಡದ ವಿನ್ಯಾಸ ರೂಪಿಸಿದ್ದು, ಅದರಂತೆ ಎರಡೂ ಜಿಲ್ಲೆಗಳಲ್ಲಿ ಹೆಚ್ಚುವರಿ ಕೊಠಡಿ ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು ಬಹುತೇಕ ಎಲ್ಲಾ ಕೊಠಡಿಗಳಲ್ಲೂ 40 ವಿದ್ಯಾರ್ಥಿಗಳು ಕೂರುವಷ್ಟು ಸ್ಥಳಾವಕಾಶವಿದ್ದು, ಮುಂದೆ ನಿರ್ಮಿಸುವ ಎಲ್ಲಾ ಕೊಠಡಿಗಳಲ್ಲೂ ಕನಿಷ್ಠ 60 ವಿದ್ಯಾರ್ಥಿಗಳಿಗೆ ಕೂರಲು ಸ್ಥಳಾವಕಾಶ ಆಗುವಂತೆ ಕೊಠಡಿಗಳ ವಿನ್ಯಾಸ ರೂಪಿಸ ಲಾಗುವುದು, ಈ ಹಿನ್ನೆಲೆಯಲ್ಲಿ ಸ್ಥಳೀಯ ಶಾಸಕರಾದ ಬಿ.ಎನ್.ರವಿಕುಮಾರ್ ಅವ ರೊಂದಿಗೆ ಸ್ಥಳ ಪರಿಶೀಲನೆ ನಡೆಸಿದ್ದೇನೆ ಎಂದು ಸಚಿವ ಡಾ.ಎಂ.ಸಿ.ಸುಧಾಕರ್ ಹೇಳಿದರು.

ಇದೇ ವೇಳೆ ಉನ್ನತ ಶಿಕ್ಷಣ ಸಚಿವರಾದ ಡಾ.ಎಂ.ಸಿ.ಸುಧಾಕರ್ ಹಾಗು ಶಾಸಕರಾದ ಬಿ.ಎನ್.ರವಿ ಕುಮಾರ್ ಅವರು ಹಳೆಯ ಕೊಠಡಿಗಳನ್ನು ವೀಕ್ಷಿಸಿ ಅವುಗಳ ವಸ್ತು ಸ್ಥಿತಿಯನ್ನು ಪರಿಶೀಲಿಸಿದರು.

ಯಾವುದೇ ಪಕ್ಷಭೇದ ಇಲ್ಲದೆ ನಮ್ಮ ಜಿಲ್ಲೆಗೆ ಹೆಚ್ಚಿನ ಅನುದಾನ ನೀಡಿ ಅಭಿವೃದ್ಧಿಗೆ ಸಹಕರಿಸುತ್ತೇನೆ ಈ ಭಾಗದ ರೈತರು ಹಾಗೂ ರೀಲರ್‌ಗಳ ಬಹುವರ್ಷಗಳ ಬೇಡಿಕೆಯಂತೆ ಹೈಟೆಕ್ ರೇಷ್ಮೆ ಗೂಡು ಮಾರುಕಟ್ಟೆ ನಿರ್ಮಾಣಕ್ಕೆ ಸರ್ಕಾರ ಹಣ ಬಿಡುಗಡೆ ಮಾಡಿದೆ, ಈಗ ಟೆಂಡರ್ ಹಂತದಲ್ಲಿದ್ದು, ಮುಂದಿನ ಫೆಬ್ರವರಿಯಲ್ಲಿ ಭೂಮಿಪೂಜೆ ನೆರವೇರಿಸಲು ಸಿಎಂ ಅವರನ್ನು ಆಹ್ವಾನಿಸಲಾಗುವುದು, ಜತೆಗೆ ತಾಲ್ಲೂಕಿನಲ್ಲಿ ಹಲವು ಇಲಾಖೆಗಳ ಕಟ್ಟಡಗಳ ಉದ್ಘಾಟನೆ ಮಾಡಲು ಮುಂದಿನ ದಿನಗಳಲ್ಲಿ ದಿನಾಂಕ ನಿಗಧಿ ಮಾಡಿ ಅಂದೇ ಕಾಲೇಜು ಕಟ್ಟಡಗಳ ಶಂಕು ಸ್ಥಾಪನೆ ಮಾಡಲಿದ್ದೇವೆ ಎಂದರು.

ಶಿಡ್ಲಘಟ್ಟ: ಬಹು ನಿರೀಕ್ಷಿತ ಹೈಟೆಕ್ ರೇಷ್ಮೆಗೂಡು ಮಾರುಕಟ್ಟೆ ನಿರ್ಮಾಣಕ್ಕೆ ಫೆಬ್ರವರಿ ತಿಂಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಭೂಮಿಪೂಜೆ ನೆರವೇರಿಸಲಾಗುವುದು ಹಾಗು ತಾಲ್ಲೂಕಿನ ಜಂಗಮಕೋಟೆ ಬಳಿ ಬೆಂಗಳೂರು ಉತ್ತರ ವಿಶ್ವವಿದ್ಯಾಲಯವು ವೇಗವಾಗಿ 88 ಕೋಟಿ ರೂ.ಗಳ ಅನುದಾನದಿಂದ ಕಾಮಗಾರಿ ನಡೆಯುತ್ತಿದ್ದು, ಎರಡನೇ ಹಂತದ 110 ಕೋಟಿ ರೂ.ಗಳ ಅನುದಾನವನ್ನು ಸಂಪುಟ ಗಮನಕ್ಕೆ ತಂದು ಆಡಳಿತಾತ್ಮಕವಾಗಿ ಅನುಮೋದನೆ ಪಡೆದುಕೊಂಡು ಮೂರು–ನಾಲ್ಕು ತಿಂಗಳಲ್ಲಿ ಕಾಮಗಾರಿ ಪ್ರಾರಂಭ ಮಾಡಲಿದ್ದೇವೆ ಎಂದ ಅವರು ಶಿಡ್ಲಘಟ್ಟ ಮಾರ್ಗವಾಗಿ ಚಿಕ್ಕಬಳ್ಳಾಪುರದಿಂದ ಕೋಲಾರದವರೆಗಿನ ರಾಷ್ಟ್ರೀಯ ಹೆದ್ದಾರಿ–234ರ ಮಾರ್ಗವನ್ನು ಚತುಷ್ಪಥ ಮಾರ್ಗವಾಗಿ ಮೇಲ್ದರ್ಜೆಗೇರಿಸಲು ನಾನು ಹಾಗು ಶಾಸಕ ರವಿಕುಮಾರ್ , ಮಾಡಿದ್ದ ಮನವಿಗೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಸ್ಪಂದಿಸಿದೆ, ಶಿಡ್ಲಘಟ್ಟ ಮತ್ತು ಚಿಕ್ಕಬಳ್ಳಾಪುರ ನಗರಕ್ಕೆ ಬೈಪಾಸ್ ಮಾಡಲಾಗುವುದು ಎಂದು ಹೇಳಿದರು. ದೇವನಹಳ್ಳಿಯಿಂದ ಜಂಗಮಕೋಟೆ ಮಾರ್ಗವಾಗಿ ಎಚ್. ಕ್ರಾಸ್ ಮೂಲಕ ಕೋಲಾರಕ್ಕೆ, ಮತ್ತೊಂದು ಮಾರ್ಗ ಮಾಲೂರು ಮತ್ತು ಮಗದೊಂದು ಮಾರ್ಗ ಹೊಸಕೋಟೆ ನಡುವೆ ಚತುಷ್ಪಥ ರಸ್ತೆ ನಿರ್ಮಾಣ ಆಗಲಿದೆ. ಜಂಗಮಕೋಟೆ ಮತ್ತು ಎಚ್.ಕ್ರಾಸ್‌ನಲ್ಲಿ ಮೇಲ್ಸೇತುವೆ ನಿರ್ಮಾಣ ಆಗಲಿದೆ ,ಭೂಮಿ ಸೇರಿ ಒಟ್ಟು ಯೋಜನೆಯ ವೆಚ್ಚ 4 ಸಾವಿರ ಕೋಟಿ ರೂ.ಗಳಾಗಿದ್ದು, ಇದಕ್ಕೆ ಈ ಹಿಂದೆ ಸಿಎಂ ಆಗಿದ್ದಾಗಲೇ ಸಿದ್ದರಾಮಯ್ಯ ಅವರು ಹಣ ಬಿಡುಗಡೆ ಮಾಡಿದ್ದರು ಎಂದರು.

ಈ ಸಂದರ್ಭದಲ್ಲಿ ಶಾಸಕರಾದ ಬಿ.ಎನ್.ರವಿಕುಮಾರ್, ನಗರಸಭೆ ಅಧ್ಯಕ್ಷ ಎಂ.ವಿ.ವೆಂಕಟಸ್ವಾಮಿ, ಮುಖಂಡರಾದ ಬಂಕ್ ಮುನಿಯಪ್ಪ,ಕೆಪಿಸಿಸಿ ಸಂಯೋಜಕರಾದ ರಾಜೀವ್ ಗೌಡ.ತಾದೂರು ರಘು ,ತಾಲ್ಲೂಕು ಪಂಚಾಯತಿ ಇಒ ಆರ್. ಹೇಮಾವತಿ, ಪೌರಾಯುಕ್ತ ಮಂಜುನಾಥ್, ಸರ್ಕಲ್ ಇನ್ಸ್‌ಪೆಕ್ಟರ್ ಶ್ರೀನಿವಾಸ್, ನಗರ ಠಾಣೆ ಪಿಎಸ್‌ಐ ವೇಣುಗೋಪಾಲ್, ಪ್ರಾಧ್ಯಾಪಕ ಡಾ.ಜಿ.ಮುರಳಿ ಆನಂದ್, ಡಾ.ವೆಂಕಟೇಶ್, ಡಾ.ಶಫೀ, ಸ್ಥಳಿಯ ಮುಖಂಡರಾದ ಎಸ್.ಎಂ.ರಮೇಶ್, ನವೀನ್, ರಾಮಚಂದ್ರ ಮುಂತಾದವರು ಹಾಜರಿದ್ದರು.

# ಬೆಂಗಳೂರಿನಲ್ಲಿ ಬೃಹತ್ ಕ್ಯಾಲಿಪರ್ಸ್ ಜೋಡಣಾ ಶಿಬಿರ




**ಚಾಮರಾಜನಗರ:** ಪೋಲಿಯೋ ಪೀಡಿತರಿಗೆ ಉಚಿತ ಕೃತಕ ಕಾಲು ಮತ್ತು ಮುಂಗೈ ಜೋಡಣಾ ಶಿಬಿರಕ್ಕೆ ತೆರಳುತ್ತಿರುವ ಜಿಲ್ಲೆಯ ಫಲಾನುಭವಿಗಳ ವಾಹನಕ್ಕೆ ಎಂ.ಎಸ್.ಐ.ಎಲ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಚಾಲನೆ ನೀಡಿದರು.

ಪೋಲಿಯೋ ಪೀಡಿತರಿಗಾಗಿ ಕೃತಕ ಕಾಲು ಮತ್ತು ಮುಂಗೈಗಳನ್ನು ಉಚಿತವಾಗಿ ನೀಡಲಾಗುತ್ತಿದ್ದು, ಇದಕ್ಕಾಗಿ ಜೈಪುರದ ಶ್ರೀ ಭಗವಾನ್ ಮಹಾವೀರ ವಿಕಲಾಂಗ ಸಹಾಯ ಸಮಿತಿ ಹಾಗೂ ಬೆಂಗಳೂರು ರೋಟರಿ ಸಂಸ್ಥೆಯು ವತಿಯಿಂದ ಬೆಂಗಳೂರಿನ ಶಿವಾಜಿನಗರದ ಇನ್‌ಫೆಂಟ್ರಿ ರಸ್ತೆಯಲ್ಲಿ ಆಯೋಜಿಸಲಾಗಿರುವ ಬೃಹತ್ ಜೋಡಣಾ ಶಿಬಿರಕ್ಕೆ ಕ್ಯಾಲಿಪರ್ಸ್ ಅಗತ್ಯವಿರುವ ಜಿಲ್ಲೆಯ ವಿಶೇಷಚೇತನ ಫಲಾನುಭವಿಗಳನ್ನು ಕರೆದೊಯ್ಯಲಾಗುತ್ತಿರುವ ಬಗ್ಗೆ ನಗರದ ರೋಟರಿ ಸಂಸ್ಥೆಯ ಮುಂಭಾಗದಲ್ಲಿಂದು ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಹಸಿರು ನಿಶಾನೆ ತೋರಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ನಗರದ ವಿಕಲಚೇತನರ ಪುನರ್ವಸತಿ ಕೇಂದ್ರ, ಗ್ರೀನ್ ಸಂಸ್ಥೆ ಹಾಗೂ ಚಾಮರಾಜನಗರ ರೋಟರಿ ಸಂಸ್ಥೆಯು ಸಹಯೋಗದಲ್ಲಿ ಬೃಹತ್ ಜೋಡಣಾ ಶಿಬಿರಕ್ಕೆ ಚಾಮರಾಜನಗರ ಜಿಲ್ಲೆಯಿಂದ 55 ಮಂದಿ ವಿಶೇಷಚೇತನ ಫಲಾನುಭವಿಗಳು ಹೊರಡಲು ವ್ಯವಸ್ಥೆ ಮಾಡಲಾಗಿದ್ದ ವಾಹನಕ್ಕೆ ಶಾಸಕರು ಚಾಲನೆ ನೀಡಿ ಶುಭ ಹಾರೈಸಿದರು.

ಇದೇ ವೇಳೆ ಮಾತನಾಡಿದ ಶಾಸಕ ಸಿ. ಪುಟ್ಟರಂಗಶೆಟ್ಟಿ ಪೋಲಿಯೋ, ಅಂಧತ್ವ ನಿರ್ಮೂಲನೆಗಾಗಿ ವಿವಿಧ ಸ್ವಯಂ ಸೇವಾ ಸಂಸ್ಥೆಗಳು ಸಮಾಜಮುಖಿ ಕಾರ್ಯವನ್ನು ನಿರಂತರವಾಗಿ ಹಮ್ಮಿಕೊಳ್ಳುತ್ತಿವೆ. ಈ ನಿಟ್ಟಿನಲ್ಲಿ ರೋಟರಿ ಸಂಸ್ಥೆಯು ಸಮಾಜ ಸೇವಾ ಕಾರ್ಯ ಇತರೆ ಸಂಸ್ಥೆಗಳಿಗೂ ಮಾದರಿಯಾಗಿದೆ. ಕಣ್ಣಿನ ತಪಾಸಣೆ ಶಿಬಿರ, ರಕ್ತದಾನ ಶಿಬಿರ, ಉಚಿತ ಡಯಾಲಿಸಿಸ್, ಆರೋಗ್ಯ, ಶಿಕ್ಷಣ, ಪರಿಸರ ಸಂರಕ್ಷಣೆ ಸೇರಿದಂತೆ ಹಲವು ಏರ್ಪಡಿಸುತ್ತಿರುವ ರೋಟರಿ ಸಂಸ್ಥೆಯ ಕಾರ್ಯ ಶ್ಲಾಘನೀಯವಾಗಿದೆ ಎಂದರು.

ಜಿಲ್ಲಾ ಅಂಗವಿಕಲ ಕ್ಷೇಮಾಭಿವೃದ್ಧಿ ಸಮಿತಿ ಅಧ್ಯಕ್ಷರಾದ ಎಂ. ರಮೇಶ್, ಡಿಡಿಆಸಿ ನೋಡಲ್ ಅಧಿಕಾರಿ ವೆಂಕಟೇಶ್, ರೋಟರಿ ಅಧ್ಯಕ್ಷರಾದ ರಾಮಸಮುದ್ರ ನಾಗರಾಜು, ಕಾರ್ಯದರ್ಶಿ ಹೆಚ್.ಎಂ. ಗುರುಸ್ವಾಮಿ, ಕಾಗಲವಾಡಿ ಚಂದ್ರು, ಕೆಂಪನಪುರ ಸಿದ್ದರಾಜು, ಕೆ.ಎಂ.ಮಹದೇವಸ್ವಾಮಿ, ಅಬ್ದುಲ್ ಅಜೀಜ್ ದೀನಾ, ಗ್ರೀನ್ ಸಂಸ್ಥೆ ಕಾರ್ಯದರ್ಶಿ ಮಹದೇವಸ್ವಾಮಿ, ಇತರರು ಇದೇ ಸಂದರ್ಭದಲ್ಲಿ ಇದ್ದರು

# ಕೋಲ್ಕತ್ತಾದಲ್ಲಿ 60 ವಿಮಾನಗಳ ಹಾರಾಟ ವ್ಯತ್ಯಯ

**ಕೋಲ್ಕತ್ತಾ/ದೆಹಲಿ:** ದಟ್ಟ ಮಂಜು ಕವಿದ ಕಾರಣ ವೀಕ್ಷಣಾ ಸಾಮರ್ಥ್ಯ ಕ್ಷೀಣಿಸಿ ಪಶ್ಚಿಮ ಬಂಗಾಳದ ರಾಜಧಾನಿ ಕೋಲ್ಕತ್ತಾದ ವಿಮಾನ ನಿಲ್ದಾಣದಲ್ಲಿ 60 ವಿಮಾನಗಳ ಹಾರಾಟ ವಿಳಂಬವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಬೆಳಗ್ಗೆ 7.10ರಿಂದ 9ರವರೆಗೆ ನೇತಾಜಿ ಸುಭಾಸ್ ಚಂದ್ರ ಬೋಸ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಯಾವುದೇ ವಿಮಾನ ದಟ್ಟನೆ ಕಂಡುಬರಲಿಲ್ಲ. ನಿಲ್ದಾಣಕ್ಕೆ ಆಗಮಿಸಬೇಕಿದ್ದ ಸುಮಾರು 30 ವಿಮಾನಗಳು ಹಾಗೂ ಹೊರಡಬೇಕಿದ್ದ 30 ವಿಮಾನಗಳು ವಿಳಂಬಗೊಂಡಿವೆ ಎಂದು ನಿಲ್ದಾಣದ ನಿರ್ದೇಶಕರು ಹೇಳಿದರು. ಇದೇ ವೇಳೆ ಕೋಲ್ಕತ್ತಾಗೆ ಆಗಮಿಸಬೇಕಿದ್ದ 5 ವಿಮಾನಗಳ ಮಾರ್ಗ ಬದಲಾಯಿಸಲಾಗಿದೆ.

ವಿಮಾನಗಳ ಹಾರಾಟದಲ್ಲಿ ವ್ಯತ್ಯಯ ಉಂಟಾದ ಹಿನ್ನೆಲೆಯಲ್ಲಿ ಪ್ರಯಾಣಿಕರಿಗೆ ಸಮಸ್ಯೆಯಾಗದಂತೆ ನಿಲ್ದಾಣದ ಟರ್ಮಿನಲ್‌ನಲ್ಲಿ ಎಲ್ಲಾ ವ್ಯವಸ್ಥೆ ಮಾಡಲಾಗಿದೆ. ಬೆಳಗ್ಗೆ 9 ಗಂಟೆಯ ಬಳಿಕ ವೀಕ್ಷಣಾ ಸಾಮರ್ಥ್ಯ ಸುಧಾರಣೆ ಕಂಡಿದೆ. ದುಬೈನಿಂದ ಎಮಿರೇಟ್ ವಿಮಾನ ಬೆಳಗ್ಗೆ 9ಕ್ಕೆ ನಿಲ್ದಾಣಕ್ಕೆ ಆಗಮಿಸಿತು ಎಂದು ಅವರು ಮಾಹಿತಿ ನೀಡಿದರು.

ಜನವರಿ 6ರಿಂದ 10ರವರೆಗೆ ಕನಿಷ್ಠ 7 ಡಿಗ್ರಿ ಸೆಲ್ಸಿಯಸ್‌ನಿಂದ 18 ಡಿಗ್ರಿ ಸೆಲ್ಸಿಯಸ್ ತಾಪಮಾನವಿರಲಿದೆ. ಜನವರಿ 7ರಿಂದ 9ರವರೆಗೆ ಸಾಧಾರಣ ದಟ್ಟ ಮಂಜು ಇರಲಿದ್ದು, ಜನವರಿ 11ರಂದು ಮಳೆ ಬೀಳುವ ಸಾಧ್ಯತೆ ಇದೆ ಎಂದು ಮುನ್ಸೂಚನೆ ನೀಡಿದೆ.



**ದೆಹಲಿಯಲ್ಲಿ ಯೆಲ್ಲೋ ಅಲರ್ಟ್:** ಕಳೆದೊಂದು ವಾರದಿಂದ ಮೈ ಕೊರೆಯುವ ಚಳಿಯಿಂದ ಥರಗುಡುತ್ತಿರುವ ದೆಹಲಿಗೆ ಭಾರತೀಯ ಹವಾಮಾನ ಇಲಾಖೆ ಯೆಲ್ಲೋ ಆಲರ್ಟ್ ನೀಡಿದೆ. ಇಂದು ಮುಂಜಾನೆ ಹಗುರ ಮಳೆ ಬಿದ್ದಿದೆ.

ದಟ್ಟ ಮಂಜು ಕವಿದ ವಾತಾವರಣದ ಹಿನ್ನೆಲೆಯಲ್ಲಿ ಯೆಲ್ಲೋ ಅಲರ್ಟ್ ನೀಡಿದ್ದು, ಮುಂಜಾನೆ ಮತ್ತು ಸಂಜೆಯ ವೇಳೆ ಜನರು ಎಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ.

**ವಾಯು ಗುಣಮಟ್ಟ:** ಇತ್ತೀಚಿನ ದತ್ತಾಂಶದ ಪ್ರಕಾರ, ದೆಹಲಿಯಲ್ಲಿ ಎಕ್ಯೂಐ ಕೊಂಚ ಸುಧಾರಿಸಿದು, ತೀವ್ರ ವರ್ಗದಿಂದ ಕಡಿಮೆ ಕಳಪೆ ವರ್ಗದಲ್ಲಿದೆ. ಇಂದು ಎಕ್ಯೂಐ 317 ದಾಖಲಾಗಿದೆ.

ಮಾಲಿನ್ಯ ಹೆಚ್ಚಿರುವ ಹಾಟ್‌ಸ್ಪಾಟ್‌ಗಳಾದ ಅಲಿಪುರ್, ಆನಂದ್ ವಿಹಾರ್, ಜಹಾಂಗೀರ್ಪುರಿ ಮತ್ತು ನರೇಲಾಗಳಲ್ಲಿ ಎಕ್ಯೂಐ ಮಟ್ಟ 350ಕ್ಕಿಂತ ಹೆಚ್ಚು ದಾಖಲಾಗಿದೆ. ಎನ್‌ಸಿಆರ್ ವಾಯುಗುಣಮಟ್ಟ ಕೊಂಚ ಸುಧಾರಣೆ ಕಂಡಿದ್ದು ನೋಯ್ಡಾ 188, ಗುರುಗ್ರಾಮ್ 164, ಗ್ರೇಟರ್ ನೋಯ್ಡಾ 151, ಮತ್ತು ಗಾಜಿಯಾಬಾದ್ 225 ದಾಖಲಾಗಿದೆ. ಹಗುರ ಮಳೆ ಗಾಳಿಯ ಗುಣಮಟ್ಟವನ್ನು ಮತ್ತಷ್ಟು ಸುಧಾರಿಸುವ ನಿರೀಕ್ಷೆಯಿದೆ. ಆದಾಗ್ಯೂ, ಸಾರ್ವಜನಿಕರು ಮುನ್ನೆಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ.

## ಛತ್ತೀಸ್‌ಗಢ ಪತ್ರಕರ್ತನ ಹತ್ಯೆ ಪ್ರಕರಣ: ಪ್ರಮುಖ ಆರೋಪಿ ಹೈದರಾಬಾದ್‌ನಲ್ಲಿ ಬಂಧನ

**ರಾಯ್‌ಪುರ:** ಛತ್ತೀಸ್‌ಗಢದ ಬಿಜಾಪುರ್ ಎಂಬಲ್ಲಿನ ಪತ್ರಕರ್ತ ಸುರೇಶ್ ಚಂದ್ರಾಕರ್ ಅವರ ಕೊಲೆ ಪ್ರಕರಣದ ಪ್ರಮುಖ ಆರೋಪಿಯನ್ನು ಹೈದರಾಬಾದ್‌ನಲ್ಲಿ ವಿಶೇಷ ತನಿಖಾ ತಂಡ ಬಂಧಿಸಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ಆರೋಪಿ ವೃತ್ತಿಯಲ್ಲಿ ಕಂಟ್ರಾಕ್ಟರ್ ಆಗಿದ್ದು, ಜನವರಿ 3ರಂದು ಕೊಲೆ ಘಟನೆ ಬೆಳಕಿಗೆ ಬರುತ್ತಿದ್ದಂತೆ ತಲೆಮರೆಸಿಕೊಂಡಿದ್ದ. ಈ ಕುರಿತು ತನಿಖೆ ಕೈಗೆತ್ತಿಕೊಂಡ ಎಸ್‌ಐಟಿ ಭಾನುವಾರ ತಡರಾತ್ರಿವರೆಗೆ ಹೈದರಾಬಾದ್‌ನಲ್ಲಿ ಶೋಧ ಕೈಗೊಂಡಿತ್ತು.

ಈಗಾಗಲೇ ಮೃತನ ಸಹೋದರರಾದ ರಿತೇಶ್ ಚಂದ್ರಾಕರ್, ದಿನೇಶ್ ಚಂದ್ರಾಕರ್ ಮತ್ತು ಸೂಪರ್‌ವೈಸರ್ ಮಹೇಂದ್ರ ರಾಮ್ಟೆಕೆಯನ್ನು ಪೊಲೀಸರು ಅರೆಸ್ಟ್ ಮಾಡಿದ್ದಾರೆ.

33 ವರ್ಷದ ಮುಖೇಶ್ ಚಂದ್ರಾಕರ್ ಸ್ವತಂತ್ರ ಪತ್ರಕರ್ತರಾಗಿದ್ದು, ಜನವರಿ 1ರಿಂದ ಕಾಣೆಯಾಗಿದ್ದರು. ಜನವರಿ 3ರಂದು ಬಿಜಾಪುರ್ ನಗರದಲ್ಲಿನ ಛತ್ತಂಪರ ಬಸ್ತಿಯ ಅವರ ಮಾಲೀಕತ್ವದ ಮನೆಯ ಸೆಪ್ಟಿಕ್ ಟ್ಯಾಂಕ್‌ನಲ್ಲಿ ಮೃತದೇಹ ಪತ್ತೆಯಾಗಿತ್ತು.

ರಸ್ತೆ ನಿರ್ಮಾಣದಲ್ಲಿ ಭ್ರಷ್ಟಾಚಾರದ ಕುರಿತು ಚಂದ್ರಾಕರ್ ವರದಿ: ಬಿಜಾಪುರ್‌ನಲ್ಲಿ ರಸ್ತೆ ನಿರ್ಮಾಣ ಕಾಮಗಾರಿಯಲ್ಲಿ ನಡೆದ ಭ್ರಷ್ಟಾಚಾರ ಕುರಿತು ಚಂದ್ರಾಕರ್ ವರದಿ ಮಾಡಿದ್ದರು. ಈ ವರದಿಯನ್ನು ಡಿಸೆಂಬರ್ 25ರಂದು ರಾಷ್ಟ್ರೀಯ ಮಾಧ್ಯಮ ಕೂಡಾ ಪ್ರಸಾರ ಮಾಡಿತ್ತು. ಇದೇ ವರದಿ ಮುಖೇಶ್ ಚಂದ್ರಾಕರ್ ಕೊಲೆಗೆ ಪ್ರಮುಖ ಕಾರಣ ಎಂದು ಸಾರ್ವಜನಿಕ ವಲಯದಲ್ಲಿ ಅನುಮಾನ ವ್ಯಕ್ತವಾಗಿದೆ. ಅಲ್ಲದೇ ಈ ಕಾಮಗಾರಿ ಕಂಟ್ರಾಕ್ಟರ್ ಸುರೇಶ್ ಚಂದ್ರಾಕರ್‌ಗೆ ಸಂಬಂಧಿಸಿತ್ತು.

ರಾಜಕೀಯ ಕೆಸರೆರಚಾಟ: ಛತ್ತೀಸ್‌ಗಢದ ಉಪಮುಖ್ಯಮಂತ್ರಿ ವಿಜಯ್ ಶರ್ಮಾ ಅವರು ಸುರೇಶ್ ಚಂದ್ರಾಕರ್ ಕಾಂಗ್ರೆಸ್ ನಾಯಕ ಎಂದಿದ್ದು, ಆರೋಪಿಗಳು ಇತ್ತೀಚೆಗೆ ಆಡಳಿತಾರೂಢ ಬಿಜೆಪಿ ಸೇರಿದ್ದರು ಎಂದು ವಿರೋಧ ಪಕ್ಷ ಹೇಳಿದೆ.

## ಫಾರ್ಮುಲಾ–ಇ ರೇಸ್ ಪ್ರಕರಣ: ಎಸಿಬಿ ಕಚೇರಿಯಲ್ಲಿ ವಿಚಾರಣೆಗೆ ಹಾಜರಾದ ಕೆಟಿಆರ್



**ಹೈದರಾಬಾದ್:** ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಭಾರತ ರಾಷ್ಟ್ರ ಸಮಿತಿ ಕಾರ್ಯಕಾರಿ ಅಧ್ಯಕ್ಷ, ಶಾಸಕ ಮತ್ತು ಮಾಜಿ ಸಚಿವ ಕೆ.ಟಿ.ರಾಮರಾವ್ ಸೋಮವಾರ ಹೈದರಾಬಾದಿನ ಭ್ರಷ್ಟಾಚಾರ ನಿಗ್ರಹ ದಳ ಕಚೇರಿಯಲ್ಲಿ ವಿಚಾರಣೆಗೆ ಹಾಜರಾದರು. 2023ರ ಫೆಬ್ರವರಿಯಲ್ಲಿ ಹೈದರಾಬಾದಿ?ನಲ್ಲಿ ನಡೆದ ಫಾರ್ಮುಲಾ–ಇ ರೇಸ್‌ಗೆ ಸಂಬಂಧಿಸಿದಂತೆ ಕೆಟಿಆರ್ ವಿರುದ್ಧ ಪ್ರಕರಣ ದಾಖಲಾಗಿದೆ.

ಎಎನ್‌ಐ ಜೊತೆ ಮಾತನಾಡಿದ ಕೆ.ಟಿ.ರಾಮರಾವ್, "ವಿಚಾರಣೆಯ ಸಮಯದಲ್ಲಿ ತನ್ನೊಂದಿಗೆ ವಕೀಲರನ್ನು ಜೊತೆಯಾಗಿ ಇರಿಸಿಕೊಳ್ಳಲು ಎಸಿಬಿ ಅವಕಾಶ ನೀಡುತ್ತಿಲ್ಲ" ಎಂದು ಆರೋಪಿಸಿದರು.

"ಕಾನೂನು ಪಾಲಿಸುವ ನಾಗರಿಕನಾಗಿರುವ ನಾನು ಹೈಕೋರ್ಟ್ ಅನ್ನು ಗೌರವಿಸುತ್ತೇನೆ. ತನ್ನ ಮುಂದೆ ಹಾಜರಾಗುವಂತೆ ಸೂಚಿಸಿದ ಭ್ರಷ್ಟಾಚಾರ ನಿಗ್ರಹ ದಳದ ಆದೇಶವನ್ನೂ ಗೌರವಿಸುತ್ತೇನೆ. ಆದರೆ ಅವರು ವಕೀಲರು ನನ್ನ ಜೊತೆಗಿರಲು ಅವಕಾಶ ನೀಡುತ್ತಿಲ್ಲ. ನನ್ನ ಹಕ್ಕುಗಳನ್ನು ಪಡೆಯಲು ನನಗೆ ಅವಕಾಶ ನೀಡುತ್ತಿಲ್ಲ. ಭ್ರಷ್ಟಾಚಾರ ನಿಗ್ರಹ ದಳ ಹೈಕೋರ್ಟ್ ತೀರ್ಪನ್ನು ಗೌರವಿಸಬೇಕು. ವಾಸ್ತವವಾಗಿ ಹೈಕೋರ್ಟ್ ತನ್ನ ತೀರ್ಪನ್ನು ಕಾಯ್ದಿರಿಸಿದೆ. ಒಬ್ಬ ವ್ಯಕ್ತಿಯಾಗಿ ಮತ್ತು ನಾಗರಿಕನಾಗಿ ನನ್ನ ಹಕ್ಕುಗಳನ್ನು ರಕ್ಷಿಸಲಾಗಿದೆ ಎಂಬುದನ್ನು ಖಚಿತಪಡಿಸಿಕೊಳ್ಳುವಂತೆ ನಾನು ಎಸಿಬಿಗೆ ಮನವಿ ಮಾಡುತ್ತಿದ್ದೇನೆ. ನನ್ನ ವಕೀಲರನ್ನು ಜೊತೆಗಿರಿಸಿಕೊಳ್ಳುವ ಹಕ್ಕು ನನಗಿದೆ. ಆದರೆ ದುರದೃಷ್ಟವಶಾತ್ ಅವರ ನಿಲುವು ಬೇರೆಯಾಗಿದೆ. ನಾನು ಕಾನೂನನ್ನು ಪಾಲಿಸುವ ನಾಗರಿಕ. ಹೀಗಾಗಿಯೇ ಇಲ್ಲಿಗೆ ಬಂದಿದ್ದೇನೆ. ಆದರೆ ಅವರು ನನ್ನ ಹಕ್ಕುಗಳ ರಕ್ಷಣೆ ಮಾಡದಿದ್ದರೆ ವಿಚಾರಣೆಯಿಂದ ಹಿಂದೆ ಸರಿಯುವ ಹಕ್ಕು ನನಗಿದೆ" ಎಂದು ಕೆ.ಟಿ.ರಾಮರಾವ್ ಹೇಳಿದರು.

ಏನಿದು ಪ್ರಕರಣ: ಹಿಂದಿನ ಆಡಳಿತದ ಅವಧಿಯಲ್ಲಿ ಹೈದರಾಬಾದ್‌ನಲ್ಲಿ ಫಾರ್ಮುಲಾ–ಇ ರೇಸ್ ನಡೆಸಲು ಅನುಮತಿಯಿಲ್ಲದೆ ವಿದೇಶಿ ಕರೆನ್ಸಿಯಲ್ಲಿ ಹಣ ಪಾವತಿಸಿದ ಆರೋಪದ ಮೇಲೆ ತೆಲಂಗಾಣ ಎಸಿಬಿ ಡಿಸೆಂಬರ್ 19ರಂದು ಬಿಆರ್‌ಎಸ್ ಕಾರ್ಯಕಾರಿ ಅಧ್ಯಕ್ಷ ಮತ್ತು ಶಾಸಕ ರಾಮರಾವ್ ವಿರುದ್ಧ ಪ್ರಕರಣ ದಾಖಲಿಸಿತ್ತು. ಈ ಪ್ರಕರಣದಲ್ಲಿ ಇಡಿ ಕೂಡ ಕೆಟಿಆರ್ ಮತ್ತು ಇತರರ ವಿರುದ್ಧ ಮನಿ ಲಾಂಡರಿಂಗ್ ತಡೆ ಕಾಯ್ದೆ (ಪಿಎಂಎಲ್‌ಎ) ಅಡಿಯಲ್ಲಿ ಜಾರಿ ಪ್ರಕರಣ ಮಾಹಿತಿ ವರದಿ (ಇಸಿಐಆರ್) ದಾಖಲಿಸಿದೆ.

ಫಾರ್ಮುಲಾ–ಇ ಫಂಡಿಂಗ್ ಪ್ರಕರಣದಲ್ಲಿ ಎಸಿಬಿ ಕೆಟಿಆರ್ ಮತ್ತು ಇತರರ ವಿರುದ್ಧ ಎಫ್‌ಐಆರ್ ದಾಖಲಿಸಿದ ನಂತರ ಜಾರಿ ನಿರ್ದೇಶನಾಲಯ ಜಾರಿ ಪ್ರಕರಣ ಮಾಹಿತಿ ವರದಿ (ಇಸಿಐಆರ್) ದಾಖಲಿಸಿದೆ. ಎಫ್‌ಐಆರ್‌ನಲ್ಲಿ ಕೆಟಿಆರ್ ಅವರನ್ನು ಪ್ರಾಥಮಿಕ ಆರೋಪಿಯಾಗಿ, ಹಿರಿಯ ಐಎಎಸ್ ಅಧಿಕಾರಿ ಅರವಿಂದ್ ಕುಮಾರ್ ಮತ್ತು ನಿವೃತ್ತ ಅಧಿಕಾರಿ ಬಿ.ಎಲ್.ಎನ್.ರೆಡ್ಡಿ ಅವರನ್ನು ಕ್ರಮವಾಗಿ ಎರಡು ಮತ್ತು ಮೂರನೇ ಆರೋಪಿ ಎಂದು ಹೆಸರಿಸಲಾಗಿದೆ.

## ಕಾಶ್ಮೀರದಲ್ಲಿ ಕೊರೆಯುವ ಚಳಿ: ಉಸಿರುಗಟ್ಟಿ ದಂಪತಿ, ಮೂವರು ಮಕ್ಕಳ ಸಾವು



**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರದ ಬೇಸಿಗೆ ರಾಜಧಾನಿ ಶ್ರೀನಗರದಲ್ಲಿ ಭಾನುವಾರ ದುರಂತ ಘಟನೆ ಸಂಭವಿಸಿದ್ದು, ಒಂದೇ ಕುಟುಂಬದ ಐವರು ತಮ್ಮ ಬಾಡಿಗೆ ನಿವಾಸದಲ್ಲಿ ಉಸಿರುಗಟ್ಟಿ ಸಾವನ್ನಪ್ಪಿದ್ದಾರೆ.

ಮೃತರಲ್ಲಿ ಪೋಷಕರು ಮತ್ತು ಅವರ ಇಬ್ಬರು ಅಪ್ರಾಪ್ತ ಮಕ್ಕಳು ಮತ್ತು 28 ದಿನಗಳ ಹಿಂದೆ ಜನಿಸಿದ ಶಿಶು ಸೇರಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮೂಲತಃ ಬಾರಾಮುಲ್ಲಾ ಜಿಲ್ಲೆಯ ಉರಿಯವರಾದ ಅಜಾಜ್ ಅಹ್ಮದ್ ಭಟ್ ಹಾಗೂ ಕುಟುಂಬಸ್ಥರು ಸಾವನ್ನಪ್ಪಿದ್ದಾರೆ ಎಂದು ಗುರುತಿಸಲಾಗಿದೆ. ಇವರು ಕಳೆದ ಎರಡು ತಿಂಗಳಿನಿಂದ ಇಲ್ಲಿ ಬಾಡಿಗೆ ವಸತಿಗೃಹದಲ್ಲಿ ವಾಸಿಸುತ್ತಿದ್ದರು. ಭಟ್ ಅವರು ಲಲಿತ್ ಗ್ರ್ಯಾಂಡ್ ಪ್ಯಾಲೇಸ್‌ನ ಖಾಸಗಿ ಹೋಟೆಲ್‌ನಲ್ಲಿ ಬಾಣಸಿಗರಾಗಿದ್ದರು.

ತನ್ನ ಮಗನನ್ನು ಸಂಪರ್ಕಿಸಲು ಸಾಧ್ಯವಾಗದ ಭಟ್ ಅವರ ತಾಯಿಯು ಮನೆ ಮಾಲೀಕ ಮುಖ್ತಾರ್ ಅಹ್ಮದ್ ಅವರನ್ನು ವಿಚಾರಿಸಿದಾಗ ಘಟನೆ ಬೆಳಕಿಗೆ ಬಂದಿದೆ. "ಅಜಾಜ್ ಅಹ್ಮದ್ ಭಟ್ ತಾಯಿಯು ನನಗೆ ಕರೆ ಮಾಡಿ, ಸಂಜೆ 4 ಗಂಟೆಯಿಂದ ಅಜಾಜ್ ತನ್ನ ಕರೆಗಳಿಗೆ ಪ್ರತಿಕ್ರಿಯಿಸುತ್ತಿಲ್ಲ ಎಂದು ಹೇಳಿದರು. ಆಗ ನಾನು ಪರಿಶೀಲಿಸಲು ಇನ್ನೊಬ್ಬ ಬಾಡಿಗೆದಾರನನ್ನು ಕಳುಹಿಸಿದೆ" ಎಂದು ಮುಖ್ತಾರ್ ಹೇಳಿದರು.


"ಬಾಡಿಗೆದಾರನು ಬಾಗಿಲು ಬಡಿದಾಗ ಯಾವುದೇ ಪ್ರತಿಕ್ರಿಯೆ ಬರಲಿಲ್ಲ. ಹಾಗಾಗಿ, ನಾವು ಬಾಗಿಲು ಒಡೆದು ತೆರೆದಾಗ ಅಜಾಜ್, ಅವರ ಪತ್ನಿ ಮತ್ತು ಅವರ ಮೂವರು ಮಕ್ಕಳು ಮೃತಪಟ್ಟಿರುವುದು ಕಂಡುಬಂದಿದೆ" ಎಂದು ಮುಖ್ತಾರ್ ತಿಳಿಸಿದರು.

ಹೀಟಿಂಗ್ ಉಪಕರಣ ದಿಂದ ಉಸಿರುಗಟ್ಟುವಿಕೆ ಉಂಟಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ಶ್ರೀನಗರದ ಸರ್ಕಾರಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗೆ ರವಾನಿಸಲಾಗಿದ್ದು, ತನಿಖೆ ನಡೆಯುತ್ತಿದೆ.

ಕಣಿವೆ ನಾಡಿನಲ್ಲಿ ಮೈಕೊರೆಯುವ ಚಳಿ ತೀವ್ರಗೊಂಡಿದ್ದು, ರಾತ್ರಿ ವೇಳೆ ಮತ್ತಷ್ಟು ತಾಪಮಾನ ಇಳಿಕೆಯಾಗುವುದರಿಂದ ಜನರು ಸುರಕ್ಷಾ ಸಾಧನಗಳ ಮೊರೆ ಹೋಗುತ್ತಿದ್ದಾರೆ. ಹೀಟಿಂಗ್ ಉಪಕರಣಗಳ ಅನಿಯಂತ್ರಿತ ಬಳಕೆಯಿಂದ ಕಾರ್ಬನ್ ಮಾನಾಕ್ಸೈಡ್ ಮಟ್ಟ ಏರಿಕೆಯಾಗುತ್ತದೆ. ಇದರಿಂದ ಕೊಠಡಿಗಳಲ್ಲಿ ಆಮ್ಲಜನಕದ ಪ್ರಮಾಣ ಇಳಿಕೆಯಾಗುತ್ತದೆ. ಇದು ಉಸಿರುಗಟ್ಟುವಿಕೆಗೆ ಕಾರಣವಾಗುತ್ತದೆ ಎಂದು ಅಧಿಕಾರಿಗಳು ಎಚ್ಚರಿಸಿದ್ದಾರೆ.

ಇತ್ತೀಚೆಗೆ ಕಾಶ್ಮೀರದಲ್ಲಿ ಸಂಭವಿಸಿದ ಎರಡನೇ ದುರಂತ ಘಟನೆ ಇದಾಗಿದೆ. ಈ ಹಿಂದೆ, ಬಾರಾಮುಲ್ಲಾದ ತಂಗ್‌ಮಾರ್ಗ್‌ನಲ್ಲಿ ಟಿನ್ ಶೆಡ್ ನಿವಾಸಕ್ಕೆ ಬೆಂಕಿ ಹೊತ್ತಿಕೊಂಡು ಇಬ್ಬರು ಅಪ್ರಾಪ್ತರು ಪ್ರಾಣ ಕಳೆದುಕೊಂಡಿದ್ದರು.

## ಚಾರ್ಜಿಂಗ್ ವೇಳೆ ಎಲೆಕ್ಟ್ರಿಕ್ ಸ್ಕೂಟರ್ ಸ್ಫೋಟ: ಬಾಲಕಿ ಸಾವು



**ಮಧ್ಯಪ್ರದೇಶ:** ಚಾರ್ಜಿಂಗ್ ವೇಳೆ ಎಲೆಕ್ಟ್ರಿಕ್ ಸ್ಕೂಟಿ ಸ್ಫೋಟಗೊಂಡ ಪರಿಣಾಮ 11 ವರ್ಷದ ಬಾಲಕಿ ಸಾವನ್ನಪ್ಪಿ, ಇಬ್ಬರು ಗಾಯಗೊಂಡ ಘಟನೆ ಮಧ್ಯಪ್ರದೇಶದ ರತ್ಲಾಮ್‌ನಲ್ಲಿ ಶನಿವಾರ ರಾತ್ರಿ ನಡೆದಿದೆ.

ಮನೆಯಲ್ಲಿ ಇ ಸ್ಕೂಟಿ ಚಾರ್ಜ್ ಹಾಕಿದ್ದ ವೇಳೆ ರಾತ್ರಿ 2.30ರ ಸುಮಾರಿಗೆ ಸ್ಫೋಟಗೊಂಡು ಮನೆಗೆ ಬೆಂಕಿ ಹೊತ್ತುಕೊಂಡಿತ್ತು. ಸ್ಫೋಟದ ಶಬ್ಧ ಕೇಳಿ ಬಂದ ನೆರೆಯವರು ತಕ್ಷಣವೇ ರಕ್ಷಣಾ ಕಾರ್ಯ ಕೈಗೊಂಡು ಬೆಂಕಿ ನಂದಿಸಿದ್ದರು. ಆದರೆ 11 ವರ್ಷದ ಬಾಲಕಿ ಹೊಗೆಯಿಂದ ಉಸಿರುಗಟ್ಟಿ ಸಾವನ್ನಪ್ಪಿದ್ದಾಳೆ. ಜೊತೆಗೆ ಇಬ್ಬರಿಗೆ ತೀವ್ರವಾದ ಸುಟ್ಟ ಗಾಯಗಳಾಗಿದ್ದು, ಪರಿಸ್ಥಿತಿ ಗಂಭೀರವಾಗಿದೆ. ಹತ್ತಿರದ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಮೂಲಗಳು ತಿಳಿಸಿವೆ. ಮೃತ ಬಾಲಕಿಯನ್ನು ಅಂತಾರಾ ಚೌಧರಿ ಎಂದು ಗುರುತಿಸಲಾಗಿದೆ. ಬಾಲಕಿ ಶವವನ್ನ ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದೆ.

ಬರೋಡಾದಿಂದ ಬಾಲಕಿ ತನ್ನ ಅಜ್ಜಿ ಮನೆಗೆ ಬಂದಿದ್ದಳು. ಭಾನುವಾರ ಮರಳಿ ಬರೋಡಾಗೆ ಬಾಲಕಿ ಹೋಗುತ್ತಿದ್ದಳು. ಆದರೆ ರಾತ್ರಿ ನಡೆದ ಇ ಸ್ಕೂಟಿ ಸ್ಫೋಟದಲ್ಲಿ ಬಾಲಕಿ ಮೃತಪಟ್ಟಿದ್ದಾಳೆ. ಬಾಲಕಿಯ ಅಜ್ಜಿ ಭಗವತಿ ಮೋರೆ ಮತ್ತು 12 ವರ್ಷದ ಬಾಲಕಿ ಲಾವಣ್ಯ ತೀವ್ರವಾಗಿ ಗಾಯಗೊಂಡಿದ್ದಾರೆ. ಇ ಸ್ಕೂಟರ್ ಸ್ಫೋಟಗೊಂಡ ಕುರಿತು ಮಾಹಿತಿ ಬಂದ ಬಳಿಕ ಸ್ಥಳಕ್ಕೆ ತೆರಳಿ ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಿದ್ದೇವೆ. ಆದರೆ 11 ವರ್ಷದ ಬಾಲಕಿ ಮೃತಪಟ್ಟಿದ್ದಾಳೆ. ಇಂಡಸ್ಟ್ರೀಯಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಈ ಕುರಿತು ತನಿಖೆ ಪ್ರಗತಿಯಲ್ಲಿದೆ ಎಂದು ಪೊಲೀಸ್ ಅಧಿಕಾರಿ ಮಾಹಿತಿ ನೀಡಿದ್ದಾರೆ. ಅಹಮದಾಬಾದ್‌ನಲ್ಲೂ ಕಳೆದ ವರ್ಷ ಇದೇ ರೀತಿಯ ಘಟನೆಯೊಂದು ನಡೆದಿತ್ತು. ಚಾರ್ಜಿಂಗ್ ಮಾಡುವಾಗ ಇ ಸ್ಕೂಟರ್ ಬ್ಯಾಟರಿಯಲ್ಲಿ ಸ್ಫೋಟ ಸಂಭವಿಸಿದ ಪರಿಣಾಮ ಇಡೀ ಮನೆ ಹೊತ್ತು ಉರಿದಿತ್ತು.

## ಬಿಪಿಎಸ್‌ಸಿ ಪರೀಕ್ಷೆ ಅವ್ಯವಹಾರ: ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ಕೈಗೊಂಡ ಪ್ರಶಾಂತ್ ಕಿಶೋರ್ ಬಂಧನ



**ಪಾಟ್ನಾ:** ಬಿಹಾರದ ರಾಜಧಾನಿಯ ಗಾಂಧಿ ಮೈದಾನದಲ್ಲಿ ವಿದ್ಯಾರ್ಥಿ ಪ್ರತಿಭಟನೆಯನ್ನು ಬೆಂಬಲಿಸಿ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ಕೈಗೊಂಡಿದ್ದ ಜನ ಸುರಾಜ್ ಪಾರ್ಟಿಯ ಸಂಸ್ಥಾಪಕ ಪ್ರಶಾಂತ್ ಕಿಶೋರ್ ಅವರನ್ನು ಸೋಮವಾರ ಮುಂಜಾನೆ ಬಿಹಾರ ಪೊಲೀಸರು ಬಂಧಿಸಿದರು.

ಪ್ರಶಾಂತ್ ಕಿಶೋರ್ ಅವರನ್ನು ಪಾಟ್ನಾ ಪೊಲೀಸರು ಗಾಂಧಿ ಮೈದಾನದಿಂದ ಬಲವಂತವಾಗಿ ಬಂಧಿಸಿ ಕರೆದೊಯ್ದಿದ್ದಾರೆ. ಬಿಹಾರ ಲೋಕಸೇವಾ ಆಯೋಗ ನಡೆಸಿದ್ದ 70ನೇ ಸಂಯುಕ್ತ (ಪ್ರಿಲಿಮಿನರಿ) ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಪ್ರಶ್ನೆಪತ್ರಿಕೆ ಸೋರಿಕೆಯಾಗಿದ್ದು, ಪರೀಕ್ಷೆ ರದ್ದುಪಡಿಸಬೇಕು ಎಂದು ಆಗ್ರಹಿಸಿ ವಿದ್ಯಾರ್ಥಿಗಳು ನಡೆಸುತ್ತಿರುವ ಪ್ರತಿಭಟನೆಯನ್ನು ಪ್ರಶಾಂತ್ ಕಿಶೋರ್ ಬೆಂಬಲಿಸಿ, ಜನವರಿ 2ರಿಂದ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ಕೈಗೊಂಡಿದ್ದರು.

ಸೋಮವಾರ ಬೆಳಗ್ಗೆ 4 ಗಂಟೆಯ ಸುಮಾರಿಗೆ 10 ಪೊಲೀಸ್ ಸಿಬ್ಬಂದಿಯೊಂದಿಗೆ ಪೊಲೀಸ್? ಅಧಿಕಾರಿಗಳು ಆಗಮಿಸಿ ಬಿಪಿಎಸ್‌ಸಿ ಅಭ್ಯರ್ಥಿಗಳೊಂದಿಗೆ ಪ್ರತಿಭಟನೆ ನಡೆಸುತ್ತಿದ್ದ ಕಿಶೋರ್ ಅವರನ್ನು, ಬೆಂಬಲಿಗರ ಪ್ರತಿರೋಧದ ನಡುವೆಯೂ ಆಂಬುಲೆನ್ಸ್‌ನಲ್ಲಿ ಕರೆದೊಯ್ದರು.

ಬಿಪಿಎಸ್‌ಸಿ ಪ್ರತಿಭಟನೆ ತೀವ್ರ: ಪಾಟ್ನಾದಲ್ಲಿ ಮುಷ್ಕರದ ವೇಳೆ ಪ್ರಶಾಂತ್ ಕಿಶೋರ್ ಅವರನ್ನು ವಶಕ್ಕೆ ಪಡೆದಿರುವ ಪೊಲೀಸರು ಕಪಾಳಮೋಕ್ಷ ಮಾಡಿದ್ದಾರೆ ಎಂದು ಬೆಂಬಲಿಗರು ಆರೋಪಿಸಿದ್ದಾರೆ. "ಕಳೆದ 5 ದಿನಗಳಿಂದ ರಾಜ್ಯದ ಕೆಟ್ಟ ಶಿಕ್ಷಣ ವ್ಯವಸ್ಥೆ ಮತ್ತು ಪರೀಕ್ಷಾ ಅಕ್ರಮಗಳ ವಿರುದ್ಧ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದ ಪ್ರಶಾಂತ್ ಕಿಶೋರ್ ಅವರನ್ನು ಪೊಲೀಸರು ಬೆಳಗ್ಗೆ 4 ಗಂಟೆಗೆ ಬಲವಂತವಾಗಿ ವಶಕ್ಕೆ ಪಡೆದರು. ಅವರೊಂದಿಗೆ ಕುಳಿತಿದ್ದ ಸಾವಿರಾರು ಯುವಕರನ್ನು ಅಜ್ಞಾತ ಸ್ಥಳಕ್ಕೆ ಕರೆದೊಯ್ಯಲಾಗಿದೆ" ಎಂದು ಜನ ಸುರಾಜ್ ಪಕ್ಷ ತನ್ನ ಅಧಿಕೃತ ಎಕ್ಸ್ ಹ್ಯಾಂಡಲ್‌ನಲ್ಲಿ ಆರೋಪಿಸಿದೆ.

"ಪ್ರಶಾಂತ್ ಕಿಶೋರ್ ಅವರು ವಿದ್ಯಾರ್ಥಿಗಳ ಪರವಾಗಿ ಧ್ವನಿ ಎತ್ತುತ್ತಿದ್ದರು. ಅವರ ಬಂಧನ ಸ್ವೀಕಾರಾರ್ಹವಲ್ಲ" ಎಂದು ಪ್ರತಿಭಟನಾಕಾರರೊಬ್ಬರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪಾಟ್ನಾ ಜಿಲ್ಲಾ ಮ್ಯಾಜಿಸ್ಟ್ರೇಟ್ (ಡಿಎಂ) ಚಂದ್ರಶೇಖರ್ ಸಿಂಗ್, "ಹೌದು, ಗಾಂಧಿ ಮೈದಾನದಲ್ಲಿ ಧರಣಿ ಕುಳಿತಿದ್ದ ಕಿಶೋರ್ ಮತ್ತು ಅವರ ಬೆಂಬಲಿಗರನ್ನು ಸೋಮವಾರ ಬೆಳಗ್ಗೆ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಈಗ ಅವರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಗುವುದು. ಅವರ ಧರಣಿ ಕಾನೂನುಬಾಹಿರ. ನಿರ್ಬಂಧಿತ ಜಾಗದ ಬಳಿ ಧರಣಿ ನಡೆಸುತ್ತಿದ್ದಾರೆ" ಎಂದು ತಿಳಿಸಿದರು.

ಮಹಾತ್ಮ ಗಾಂಧಿ ಶಾಸನದ ಸಮೀಪವಿರುವ ನಿರ್ಬಂಧಿತ ತಾಣವಾದ ಗಾಂಧಿ ಮೈದಾನದಲ್ಲಿ ಆಮರಣಾಂತ ಉಪವಾಸ ನಡೆಸಿದ್ದಕ್ಕಾಗಿ ಕಿಶೋರ್ ವಿರುದ್ಧ ಪಾಟ್ನಾ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ ಎಂದು ಮತ್ತೊಬ್ಬ ಅಧಿಕಾರಿ ಹೇಳಿದರು.

ಮೂಲಗಳ ಪ್ರಕಾರ, ಕಿಶೋರ್ ಅವರನ್ನು ಪಾಟ್ನಾ ಏಮ್ಸ್‌ಗೆ ಕರೆದೊಯ್ಯಲಾಗಿದೆ. ಆದರೆ ವೈದ್ಯಕೀಯ ಚಿಕಿತ್ಸೆಗೆ ಅವರು ನಿರಾಕರಿಸಿದ್ದಾರೆ. ಬಿಪಿಎಸ್‌ಸಿ ಪರೀಕ್ಷೆಯನ್ನು ರದ್ದುಗೊಳಿಸಲು ಬಿಹಾರ ಸರ್ಕಾರ ಒಪ್ಪುವವರೆಗೂ ನಾನು ಉಪವಾಸ ಮುರಿಯುವುದಿಲ್ಲ ಎಂದು ಕಿಶೋರ್ ಪ್ರತಿಪಾದಿಸಿದ್ದಾರೆ.

ಜನ ಸುರಾಜ್ ಪಕ್ಷ ಪೊಲೀಸರ ಕ್ರಮವನ್ನು ಖಂಡಿಸಿದ್ದು, ಇದು ಸರ್ಕಾರದ 'ಹೇಡಿತನ'ದ ಸಂಕೇತ ಎಂದು ಕಿಡಿಕಾರಿದೆ.

ಡಿಸೆಂಬರ್ 13ರಂದು ನಡೆದ ಬಿಪಿಎಸ್‌ಸಿ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಸೋರಿಕೆ ಸೇರಿದಂತೆ ವಿವಿಧ ಅವ್ಯವಹಾರ ಆರೋಪಗಳ ಕುರಿತು ವ್ಯಾಪಕ ಟೀಕೆಗಳು ವ್ಯಕ್ತವಾಗಿದ್ದವು.

## ನಡುರಸ್ತೆಯಲ್ಲೇ ಯುವತಿಯ ಹತ್ಯೆಗೆ ಯತ್ನಿಸಿದ ಯುವಕ

**ಅಮ್ರೋಹಾ:** ಯುವಕನೊಬ್ಬ ನಡುರಸ್ತೆಯಲ್ಲೇ ಯುವತಿಯ ಕತ್ತನ್ನು ಸ್ಕಾರ್ಫ್‌ನಿಂದ ಬಿಗಿದು ಹತ್ಯೆಗೆ ಯತ್ನಿಸಿರುವ ಆಘಾತಕಾರಿ ಘಟನೆ ಅಮ್ರೋಹಾ ಜಿಲ್ಲೆಯ ಗಜ್ರೌಲಾ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಯುವತಿಯ ಕಿರುಚಾಟ ಕೇಳಿದ ದಾರಿಹೋಕರು ಯುವಕನ ಹಿಡಿತದಿಂದ ಆಕೆಯನ್ನು ಬಿಡಿಸಿದ್ದಾರೆ. ನಂತರ ಯುವಕ ನೆರೆದಿದ್ದ ಜನರನ್ನು ನೋಡಿ ಸ್ಥಳದಿಂದ ಪರಾರಿಯಾಗಿದ್ದಾರೆ. ಪ್ರಜ್ಞಾಹೀನ ಸ್ಥಿತಿಯಲ್ಲಿದ್ದ ಯುವತಿಯನ್ನು ಸಾರ್ವಜನಿಕರು ಆಸ್ಪತ್ರೆಗೆ ದಾಖಲಿಸಿದ್ದಾರೆ. ಘಟನೆಯ ಆಘಾತಕಾರಿ ವಿಡಿಯೋ ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡುತ್ತಿದೆ.

ವಿಡಿಯೋದಲ್ಲಿ ಕಾಣುವಂತೆ ನಡುರಸ್ತೆಯಲ್ಲೇ ಯುವಕ, ಯುವತಿಯ ಕತ್ತನ್ನು ಸ್ಕಾರ್ಫ್‌ನಿಂದ ಬಿಗಿದು ಹತ್ಯೆಗೆ ಯತ್ನಿಸುತ್ತಿದ್ದು, ಯುವತಿ ಆತನ ಹಿಡಿತದಿಂದ ಬಿಡಿಸಿಕೊಳ್ಳಲು ಹರಸಾಹಸ ಪಡುತ್ತಿದ್ದು, ಬಳಿಕ ದಾರಿಹೋಕರು ಆಗಮಿಸಿ ಯುವಕನಿಂದ ಯುವತಿಯನ್ನು ರಕ್ಷಿಸಿದ್ದಾರೆ. ಘಟನೆ ಸಂಬಂಧ ಯುವತಿಯ ಕುಟುಂಬಸ್ಥರು ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಾಗಿದೆ. ಆರೋಪಿ ಪತ್ತೆಗಾಗಿ ಶೋಧಕಾರ್ಯ ನಡೆಯುತ್ತಿದೆ.


## ಹಿಜ್ಬುಲ್ಲಾ ಪಡೆ ಹಿಂಪಡೆಯದಿದ್ದರೆ ಕದನ ವಿರಾಮ ಒಪ್ಪಂದ ಅಂತ್ಯ: ಇಸ್ರೇಲ್ ಎಚ್ಚರಿಕೆ

**ಜೆರುಸಲೇಂ:** ಲಿಟಾನಿ ನದಿಯ ಉತ್ತರ ದಿಕ್ಕಿನಲ್ಲಿ ನಿಯೋಜಿಸಲಾಗಿರುವ ಪಡೆಗಳನ್ನು ಹಿಂತೆಗೆದುಕೊಳ್ಳದಿದ್ದರೆ ಇಸ್ರೇಲ್ ಕದನ ವಿರಾಮ ಒಪ್ಪಂದವನ್ನು ಮುರಿಯಲಿದೆ ಎಂದು ಇಸ್ರೇಲ್ ರಕ್ಷಣಾ ಸಚಿವ ಇಸ್ರೇಲ್ ಕಾಟ್ಜ್ ಹಿಜ್ಬುಲ್ಲಾಗೆ ಕಠಿಣ ಎಚ್ಚರಿಕೆ ನೀಡಿದ್ದಾರೆ.

ಕದನ ವಿರಾಮದ ನಿಯಮಗಳ ಪ್ರಕಾರ, ಲಿಟಾನಿ ನದಿಯ ಉತ್ತರ ದಿಕ್ಕಿನಲ್ಲಿ ನಿಯೋಜಿಸಲಾಗಿರುವ ಹೋರಾಟಗಾರರು ಮತ್ತು ಶಸ್ತ್ರಾಸ್ತ್ರಗಳನ್ನು ಜನವರಿ 26ರೊಳಗೆ ಹಿಜ್ಬುಲ್ಲಾ ಹಿಂತೆಗೆದುಕೊಳ್ಳಬೇಕಿದೆ. ಅದೇ ದಿನಾಂಕದೊಳಗೆ, ವಿಶ್ವಸಂಸ್ಥೆ ಗುರುತಿಸಿರುವ ಲೆಬನಾನ್ ಮತ್ತು ಇಸ್ರೇಲ್ ನಡುವಿನ ಗಡಿಯಾಗಿರುವ ಬ್ಲೂ ಲೈನ್‌ನ ದಕ್ಷಿಣ ದಿಕ್ಕಿನಿಂದ ಇಸ್ರೇಲ್ ಕೂಡ ತನ್ನ ಪಡೆಗಳನ್ನು ಸಂಪೂರ್ಣವಾಗಿ ಹಿಂತೆಗೆದುಕೊಳ್ಳಬೇಕಿದೆ. ನಂತರ ಈ ಪ್ರದೇಶದಲ್ಲಿ ಲೆಬನಾನ್ ಸೇನೆ ತನ್ನ ಪಡೆಗಳನ್ನು ನಿಯೋಜಿಸಲಿದೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಇಸ್ರೇಲ್‌ನ ಉತ್ತರ ಕಮಾಂಡ್‌ಗೆ ಭೇಟಿ ನೀಡಿದ ಸಂದರ್ಭದಲ್ಲಿ ಭಾನುವಾರ ಮಾತನಾಡಿದ ಕಾಟ್ಜ್, ಇಸ್ರೇಲ್ ಲೆಬನಾನ್ ಒಪ್ಪಂದವನ್ನು ಎತ್ತಿಹಿಡಿಯಲು ಬಯಸುತ್ತದೆ ಎಂದು ಹೇಳಿದರು. ಆದರೆ ಈಗಲೂ ಹಿಜ್ಬುಲ್ಲಾ ತನ್ನ ಪಡೆಗಳನ್ನು ವಾಪಸು ಕರೆಸಿಕೊಂಡಿಲ್ಲ, ಹಿಜ್ಬುಲ್ಲಾ ಷರತ್ತು ಪಾಲಿಸದಿದ್ದರೆ ಶಾಂತಿ ಒಪ್ಪಂದ ಜಾರಿಯಲ್ಲಿರುವುದಿಲ್ಲ ಎಂದು ಅವರು ತಿಳಿಸಿದರು.

2023ರ ಅಕ್ಟೋಬರ್‌ನಲ್ಲಿ ಇಸ್ರೇಲ್ ಮತ್ತು ಹಿಜ್ಬುಲ್ಲಾ ನಡುವೆ ಕದನ ಆರಂಭವಾಗಿತ್ತು. ಶಾಂತಿ ಒಪ್ಪಂದದ ನಂತರ ಯುದ್ಧ ನಿಂತಿದೆಯಾದರೂ, ಇಸ್ರೇಲ್ ಈಗಲೂ ಲೆಬನಾನ್ ಮೇಲೆ ಸೀಮಿತ ದಾಳಿಗಳನ್ನು ಮುಂದುವರೆಸಿದೆ. ಕದನ ವಿರಾಮ ಉಲ್ಲಂಘಿಸುತ್ತಿರುವ ಹಿಜ್ಬುಲ್ಲಾ ನೆಲೆಗಳ ಮೇಲೆ ಮಾತ್ರ ಸೀಮಿತ ದಾಳಿ ನಡೆಸುತ್ತಿರುವುದಾಗಿ ಇಸ್ರೇಲ್ ಹೇಳಿಕೊಂಡಿದೆ. ಆದರೆ ಇಸ್ರೇಲ್ ಹಲವಾರು ಬಾರಿ ಕದನ ವಿರಾಮ ಉಲ್ಲಂಘಿಸಿದೆ ಎಂದು ಲೆಬನಾನ್ ಮತ್ತು ಫ್ರಾನ್ಸ್ ಆರೋಪಿಸಿವೆ.



ಲೆಬನಾನ್‌ನಲ್ಲಿ ಕದನ ವಿರಾಮ ಒಪ್ಪಂದವನ್ನು ಮುರಿಯುವಂಥ ಎಲ್ಲಾ ಕ್ರಮಗಳನ್ನು ನಿಲ್ಲಿಸಬೇಕೆಂದು ಲೆಬನಾನ್‌ನಲ್ಲಿನ ವಿಶ್ವಸಂಸ್ಥೆಯ ಮಧ್ಯಂತರ ಪಡೆ ಕರೆ ನೀಡಿದೆ. "ಇಸ್ರೇಲ್ ಮತ್ತು ಲೆಬನಾನ್ ಎರಡೂ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ನಿರ್ಣಯ 1701 ರ ಸಂಪೂರ್ಣ ಅನುಷ್ಠಾನಕ್ಕೆ ಮತ್ತು ಬಾಕಿ ಇರುವ ಸಮಸ್ಯೆಗಳನ್ನು ಪರಿಹರಿಸಿಕೊಳ್ಳುವ ಬದ್ಧತೆಯನ್ನು ದೃಢಪಡಿಸಿವೆ. ಒಪ್ಪಂದದಲ್ಲಿ ಒಪ್ಪಿಕೊಂಡಂತೆ ಹೊಸದಾಗಿ ಸ್ಥಾಪಿಸಲಾದ ಕಾರ್ಯವಿಧಾನವನ್ನು ಅಳವಡಿಸಿಕೊಳ್ಳಲು ಎರಡೂ ಪಕ್ಷಗಳಿಗೆ ಕರೆ ನೀಡಲಾಗಿದೆ" ಎಂದು ಯುನಿಫಿಲ್ ಹೇಳಿಕೆಯಲ್ಲಿ ತಿಳಿಸಿದೆ.

ಇಸ್ರೇಲ್ ಮತ್ತು ಲೆಬನಾನ್ ನಡುವಿನ ಕದನ ವಿರಾಮ ಒಪ್ಪಂದದ ಪ್ರಕಾರ ಇಸ್ರೇಲ್ ತನ್ನ ಸೈನ್ಯವನ್ನು ಸಮಯಕ್ಕೆ ಸರಿಯಾಗಿ ಹಿಂತೆಗೆದುಕೊಳ್ಳುವಂತೆ ಮತ್ತು ಲೆಬನಾನ್ ತನ್ನ ಸಶಸ್ತ್ರ ಪಡೆಗಳನ್ನು ದಕ್ಷಿಣ ಲೆಬನಾನ್‌ನಲ್ಲಿ ನಿಯೋಜಿಸುವಂತೆ ಯುನಿಫಿಲ್ ಒತ್ತಾಯಿಸಿದೆ.

# ಐಶ್ವರ್ಯಾ–ಆರಾಧ್ಯಾಗೆ ಅಭಿಷೇಕ್ ಭದ್ರತೆ




ಐಶ್ವರ್ಯಾ ರೈ–ಆರಾಧ್ಯಾ ಬೇರೆ ಕಡೆ ವಾಸಿಸುತ್ತಿದ್ದು, ಅಭಿಷೇಕ್ ಅವರಿಂದ ದೂರವೇ ಇದ್ದಾರೆ ಎಂದೆಲ್ಲ ಸಾಕಷ್ಟು ವದಂತಿಗಳು ಹಬ್ಬಿದ್ದವು. ಆದರೆ, ಈ ವದಂತಿಗಳಿಗೆ ಇತ್ತೀಚೆಗೆ ತೆರೆ ಬಿದ್ದಿದೆ. ಐಶ್ವರ್ಯಾ ಹಾಗೂ ಅಭಿಷೇಕ್ ಒಟ್ಟಾಗಿ ಕಾಣಿಸಿಕೊಳ್ಳುತ್ತಾ ಇದ್ದಾರೆ.

ಈಗ ಐಶ್ವರ್ಯಾ ಹಾಗೂ ಆರಾಧ್ಯಾ ಒಟ್ಟಾಗಿ ಬರುವಾಗ ಅಭಿಷೇಕ್ ಭದ್ರತೆ ನೀಡಿದ್ದಾರೆ. ಈ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ಈ ವಿಡಿಯೋ ನೋಡಿ ಐಶ್ವರ್ಯಾ ಹಾಗೂ ಅಭಿಷೇಕ್ ಅಭಿಮಾನಿಗಳು ಖುಷಿಪಟ್ಟಿದ್ದಾರೆ. ದೊಡ್ಡ ಸೆಲೆಬ್ರಿಟಿಗಳು ಎಲ್ಲಾ ವದಂತಿಗಳಿಗೆ ಸ್ಪಷ್ಟನೆ ನೀಡುವ ಕೆಲಸ ಮಾಡುವುದಿಲ್ಲ. ಆದಾಗ್ಯೂ ಅಭಿಷೇಕ್ ಹಾಗೂ ಅಮಿತಾಭ್ ಅವರು ಡಿವೋರ್ಸ್ ವದಂತಿ ಬಗ್ಗೆ ಸ್ಪಷ್ಟನೆ ನೀಡುವ ಪ್ರಯತ್ನ ಮಾಡಿದ್ದರು. ಎಲ್ಲವೂ ಸರಿ ಇದೆ ಎಂದು ಹೇಳಿದ್ದರು. ಈಗ ಇವರು ಒಟ್ಟಿಗೆ ಕಾಣಿಸಿಕೊಳ್ಳುವ ಮೂಲಕ ಎಲ್ಲಾ ವದಂತಿಗಳಿಗೆ ತೆರೆ ಎಳೆದಿದ್ದಾರೆ. ಈ ವಿಚಾರ ಫ್ಯಾನ್ಸ್‌ಗಳಿಗೆ ಖುಷಿ ನೀಡಿದೆ. ಈಗ ಅವರ ಹೊಸ ವಿಡಿಯೋ ವೈರಲ್ ಆಗಿದೆ.

ಐಶ್ವರ್ಯಾ, ಆರಾಧ್ಯಾ ಹಾಗೂ ಅಭಿಷೇಕ್ ಹೊಸ ವರ್ಷದ ಸಂದರ್ಭದಲ್ಲಿ ಸುತ್ತಾಟ ನಡೆಸಿದ್ದರು ಎನ್ನಲಾಗಿದೆ. ಈಗ ಅವರು ವಿಮಾನ ನಿಲ್ದಾಣದಿಂದ ಹೊರ ಬಂದಿದ್ದಾರೆ. ಅಭಿಷೇಕ್ ಹಾಗೂ ಐಶ್ವರ್ಯಾ ಎದುರು ಅಭಿಷೇಕ್ ನಡೆದು ಬಂದಿದ್ದಾರೆ. ಪತ್ನಿ ಹಾಗೂ ಮಗಳ ಕಾಳಜಿಯ ಜವಾಬ್ದಾರಿಯನ್ನು ಅವರೇ ತೆಗೆದುಕೊಂಡಿದ್ದರು. ಇನ್ನು, ಕಾರ್‌ನ ಡೋರ್ ಕೂಡ ಅವರೇ ತೆಗೆದು ಪತ್ನಿ ಹಾಗೂ ಮಗಳು ಕಾರು ಏರುವವರೆಗೆ ಬಾಗಿಲಲ್ಲಿ ಹಾಗೆಯೇ ನಿಂತಿದ್ದರು. ಐಶ್ವರ್ಯಾ ಹಾಗೂ ಆರಾಧ್ಯಾ ಕಾರು ಏರಿದ ಬಳಿಕ ಅಭಿಷೇಕ್ ಕೂಡ ಅದೇ ಕಾರು ಏರಿ ಸಾಗಿದ್ದಾರೆ ಎನ್ನಲಾಗಿದೆ. ಸದ್ಯ, ಈ ವಿಡಿಯೋನ ಫ್ಯಾನ್ಸ್ ಮೆಚ್ಚಿಕೊಂಡಿದ್ದಾರೆ. 'ಈ ದಂಪತಿ ಮೇಲೆ ಯಾರ ಕಣ್ಣೂ ಬೀಳದಿರಲಿ' ಎಂದು ಕೆಲವರು ಕೋರಿದ್ದಾರೆ. ಇನ್ನೂ ಕೆಲವರು, ಆರಾಧ್ಯಾ ಮುಂದಿನ ವರ್ಷಗಳಲ್ಲಿ ಒಳ್ಳೆಯ ಹೀರೋಯಿನ್ ಆಗುತ್ತಾರೆ ಎಂದು ಅಭಿಪ್ರಾಯಪಟ್ಟಿದ್ದಾರೆ.ಐಶ್ವರ್ಯಾ ಇತ್ತೀಚೆಗೆ ಸಿನಿಮಾಗಳನ್ನು ಮಾಡುತ್ತಿಲ್ಲ. ಅಭಿಷೇಕ್ ಅವರು ಸಿನಿಮಾಗಳ ಆಯ್ಕೆಯಲ್ಲಿ ಹಿಂದೆ ಬಿದ್ದಿದ್ದಾರೆ. ಮಾಡಿದ ಸಿನಿಮಾಗಳು ಯಾವವೂ ಕೈ ಹಿಡಿಯುತ್ತಿಲ್ಲ. ಇದು ಅವರ ಬೇಸರಕ್ಕೆ ಕಾರಣ ಆಗಿದೆ. ಆದಾಗ್ಯೂ ಅವರು ಸಿನಿಮಾ ಕೃಷಿ ನಿಲ್ಲಿಸಿಲ್ಲ.

# ರೀಲ್ಸ್ ಜಗತ್ತಿನಲ್ಲಿ 'ಕೆಡಿ' ಹವಾ!



ವರ್ಷದ ಕೊನೆಯಲ್ಲಿ ಸೂಪರ್ ಸ್ಟಾರ್ಸ್ ಸಿನಿಮಾ ಬಂದು ಗೆದ್ದಾಗಿದೆ. ಈಗ ಕನ್ನಡ ಸಿನಿ ಪ್ರೇಕ್ಷಕರ ಕಣ್ಣು ಬಿದ್ದಿರೋದು ಕೆಡಿ ಮೇಲೆ. ಡೈರೆಕ್ಟರ್ ಪ್ರೇಮ್ ಮತ್ತು ಧ್ರುವ ಸರ್ಜಾ ಅದ್ಯಾವ ಪ್ರಪಂಚ ಸೃಷ್ಟಿಸಿದ್ದಾರೆ ಅಂತ ನೋಡೋ ಕಾತುರ ಹೆಚ್ಚಾಗಿದೆ. ಸಿನಿ ಪ್ರೇಕ್ಷಕರಲ್ಲಿ ಕೆಡಿಯ ಹುಚ್ಚು ಹೆಚ್ಚಾಗಿಸೋದ್ರಲ್ಲಿ ಶಿವ ಶಿವ ಸಾಂಗ್ ಕೊಡುಗೆ ದೊಡ್ಡದಿದೆ. ಈಗ ಎಲ್ಲೆಲ್ಲೂ ಶಿವ ಶಿವ ಹಾಡಿನ ಸೌಂಡೇ ಕೇಳಿಸುತ್ತಿದೆ. ಈ ಶಿವನ ಸಾಂಗ್ ಟ್ರೆಂಡ್ ಹೇಗಿದೆ ಅಂತ ನೋಡೋಣ ಬನ್ನಿ..

ನೂರಾರು ಡಾನ್ಸರ್ಸ್ ಮಧ್ಯೆ ಆಕ್ಷನ್ ಪ್ರಿನ್ಸ್ ಧ್ರುವ ಸರ್ಜಾ ರೀಷ್ಮಾ ನಾಣಯ್ಯ ಮಸ್ತ್ ಡಾನ್ಸ್.. ಮೈ ನರ ನಾಡಿಯಲ್ಲೆಲ್ಲಾ ಕಿಕ್ ಕೊಡೋ ಹಾಗಿರೋ ಅರ್ಜುನ್ ಜನ್ಯ ಸೃಷ್ಟಿಸಿದ ಮ್ಯೂಸಿಕ್ ಬೀಟ್. ಡಾನ್ಸ್‌ನ ಕಿಚ್ಚು ಹೆಚ್ಚಾಗೋ ಹಾಗೆ ಪ್ರೇಮ್ ಸೃಷ್ಟಿಸಿದ ಲಿರಿಕ್ಸ್.. ಇದು ಕೆಡಿಯ ಮೊದಲ ಹಾಡಿನ ಖದರ್..

ಯೆಸ್, ಸಂಗೀತ ಲೋಕದಲ್ಲಿ ಈಗ ಕೆಡಿ ಹಾಡಿನದ್ದೇ ದರ್ಬಾರ್ ನಡೆಯುತ್ತಿದೆ. ಶಿವ ಶಿವಾ ಅಂತ ಧ್ರುವ ಹಾಡಿ ಕುಣಿದಿದ್ದೇ ಕುಣಿದಿದ್ದು. ಈ ಹಾಡು ಈಗ ರೀಲ್ಸ್ ಜಗತ್ತಿನ ಮಹರಾಜ ಆಗಿ ಮೆರೆಯುತ್ತಿದೆ. ಈ ಸಾಂಗ್ ರಿಲೀಸ್ ಆಗಿ ಜಸ್ಟ್ 10 ದಿನ ಆಗಿವೆ. ಆಗ್ಲೆ ಒಂದು ಲಕ್ಷಕ್ಕೂ ಅಧಿಕ ಮಂದಿ ಹಾಡಿನ ರೀಲ್ಸ್ ಮಾಡಿ ಹರಿ ಬಿಟ್ಟಿದ್ದಾರೆ. ಸೋಷಿಯಲ್ ಮಿಡಿಯಾ ತುಂಬಾ ಕೇಡಿ ಹಾಡೇ ರಿಂಗಣಿಸ್ತಾ ಇದೆ. ಡೈರೆಕ್ಟರ್ ಪ್ರೇಮ್ ಸಿನಿಮಾಗಳಲ್ಲಿ ಸಂಗೀತವೇ ಫಸ್ಟ್.. ಪ್ರೇಮ್ ಸಖತ್ ಆಗಿರೋ ಹಾಡುಗಳನ್ನ ಇಟ್ಟಿರ್ತಾರೆ. ಇನ್ನು ಪ್ಯಾನ್ ಇಂಡಿಯಾ ಕಾನ್ಸೆಪ್ಟ್‌ನಲ್ಲಿ ಬರುತ್ತಿರೋ ಕೆಡಿಯಲ್ಲಿ ಹಾಡುಗಳು ಅದ್ದೂರಿ ಹಾಡುಗಳ ಹಬ್ಬ ಇರುತ್ತೆ. ಕನ್ನಡದಲ್ಲಿ ಜೋಗಿ ಪ್ರೇಮ್ ಹಾಗು ಕೈಲಾಶ್ ಕೇರ್ ಗಾಯನಕ್ಕೆ ಧ್ರುವ ಸಖತ್ ಸ್ಟೆಪ್ಸ್ ಹಾಕಿದ್ದಾರೆ. ಈ ಹಾಡು ಈಗ ಎಲ್ಲರ ದಿಲ್ ಕದ್ದು ಮುನ್ನುಗ್ಗುತ್ತಿದೆ






# 'ರೆಟ್ರೋ' ವಿಲನ್ ಖಡಕ್ ಇಲ್ಲ

ಬಹಳ ನಿರೀಕ್ಷೆಯ ನಡುವೆ ಬಿಡುಗಡೆಯಾದ 'ಕಂಗುವಾ' ಚಿತ್ರ ನಿರಾಸೆ ಮೂಡಿಸಿತು. 350 ರಿಂದ 400 ಕೋಟಿ ರೂ. ವೆಚ್ಚದ ಈ ಚಿತ್ರ 2000 ಕೋಟಿ ರೂ. ಗಳಿಸುತ್ತದೆ ಎಂದು ನಿರೀಕ್ಷಿಸಲಾಗಿತ್ತು. ಆದರೆ ಚಿತ್ರದಲ್ಲಿನ ಕೆಲವು ತಪ್ಪುಗಳು ಪ್ರೇಕ್ಷಕರನ್ನು ನಿರಾಶೆಗೊಳಿಸಿದವು.

ಕೆಲವರು 'ಕಂಗುವಾ' ಚಿತ್ರ ಚೆನ್ನಾಗಿದೆ ಎಂದರೂ, ಚಿತ್ರ ಬಿಡುಗಡೆಯಾದ ಕೂಡಲೇ ಎದುರಾದ ಟೀಕೆಗಳೇ ಚಿತ್ರದ ವೈಫಲ್ಯಕ್ಕೆ ಕಾರಣ ಎಂದು ಚಿತ್ರಮಂದಿರ ಮಾಲೀಕರು ಮತ್ತು ಚಿತ್ರತಂಡದವರು ಆರೋಪಿಸಿದರು.

ಚಿತ್ರಮಂದಿರಗಳಿಗಿಂತ ಓಟಿಟಿಯಲ್ಲಿ 'ಕಂಗುವಾ' ಚಿತ್ರಕ್ಕೆ ಒಳ್ಳೆಯ ಪ್ರತಿಕ್ರಿಯೆ ದೊರೆಯಿತು. ಒಟ್ಟು 150 ಕೋಟಿ ರೂ. ಮಾತ್ರ ಗಳಿಕೆ ಕಂಡಿತು. ಈ ಹಿಂದೆ 'ತಂಗಲಾನ್' ಚಿತ್ರದ ವೈಫಲ್ಯದಿಂದ ಕಂಗೆಟ್ಟಿದ್ದ ನಿರ್ಮಾಪಕ ಜ್ಞಾನವೇಲ್ ರಾಜಾಗೆ ಈ ಚಿತ್ರದ ವೈಫಲ್ಯ ಮತ್ತೊಂದು ಹೊಡೆತ ನೀಡಿತು. ಹೀಗಾಗಿ ಸೂರ್ಯ ತಮ್ಮ ನಿರ್ಮಾಪಕ ಜ್ಞಾನವೇಲ್ ರಾಜಾಗೆ ಸಹಾಯ ಮಾಡುವ ಉದ್ದೇಶ ಹೊಂದಿದ್ದಾರೆ ಎಂಬ ವದಂತಿಗಳಿವೆ.

'ಕಂಗುವಾ' ಚಿತ್ರದ ವೈಫಲ್ಯದ ನಂತರ, ಸೂರ್ಯ ವಿಭಿನ್ನ ಮತ್ತು ಪ್ರೇಕ್ಷಕರನ್ನು ಆಕರ್ಷಿಸುವ ಕಥೆಗಳನ್ನು ಆಯ್ದು ನಟಿಸುವತ್ತ ಗಮನ ಹರಿಸುತ್ತಿದ್ದಾರೆ. ಅದರಂತೆ, ಅವರ 44ನೇ ಚಿತ್ರ 'ರೆಟ್ರೋ'. 'ಪೇಟ', 'ಜಿಗರ್‌ತಂಡ' ಮುಂತಾದ ಚಿತ್ರಗಳನ್ನು ನಿರ್ದೇಶಿಸಿದ ಕಾರ್ತಿಕ್ ಸುಬ್ಬರಾಜ್ ಈ ಚಿತ್ರವನ್ನು ನಿರ್ದೇಶಿಸುತ್ತಿದ್ದಾರೆ. ಈ ಚಿತ್ರದಲ್ಲಿ ಸೂರ್ಯಗೆ ಜೋಡಿಯಾಗಿ ಪೂಜಾ ಹೆಗ್ಡೆ ಮಾತನಾಡಲಾರದ ಹುಡುಗಿಯ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಸೂರ್ಯ ಮತ್ತು ಜ್ಯೋತಿಕಾ 2ಡಿ ಎಂಟರ್‌ಟೈನ್‌ಮೆಂಟ್ ಮೂಲಕ ಈ ಚಿತ್ರವನ್ನು ನಿರ್ಮಿಸುತ್ತಿದ್ದಾರೆ. ಚಿತ್ರೀಕರಣ ಭರದಿಂದ ಸಾಗುತ್ತಿದ್ದು, ಕ್ರಿಸ್ಮಸ್ ಹಬ್ಬಕ್ಕೆ ಚಿತ್ರದ ಟೀಸರ್ ಬಿಡುಗಡೆಯಾಗಿ ಉತ್ತಮ ಪ್ರತಿಕ್ರಿಯೆ ಪಡೆದುಕೊಂಡಿದೆ. 'ತಲಪತಿ' ಚಿತ್ರದಲ್ಲಿ ರಜನಿಕಾಂತ್ ಶೋಭನಾಳನ್ನು ಪ್ರೀತಿಸುವಂತೆಯೇ ಒಂದು ದೃಶ್ಯ ಇದರಲ್ಲಿತ್ತು, ಇದು ಚಿತ್ರದ ಮೇಲಿನ ನಿರೀಕ್ಷೆಯನ್ನು ಹೆಚ್ಚಿಸಿದೆ.



ಈ ಚಿತ್ರದಲ್ಲಿ ಸೂರ್ಯ ಗ್ಯಾಂಗ್‌ಸ್ಟರ್ ಪಾತ್ರದಲ್ಲಿ ನಟಿಸಿದ್ದಾರೆ. 70–80ರ ದಶಕದ ಗೆಟಪ್‌ನಲ್ಲಿ ಕಾಣಿಸಿಕೊಂಡಿದ್ದಾರೆ. ಹಿಟ್ ಚಿತ್ರಗಳನ್ನು ನೀಡುತ್ತಿರುವ ಕಾರ್ತಿಕ್ ಸುಬ್ಬರಾಜ್, 'ರೋಲೆಕ್ಸ್' ಪಾತ್ರದಂತೆಯೇ 'ರೆಟ್ರೋ' ಪಾತ್ರವನ್ನೂ ಜನಪ್ರಿಯಗೊಳಿಸುತ್ತಾರೆ ಎಂದು ಅಭಿಮಾನಿಗಳು ನಿರೀಕ್ಷಿಸುತ್ತಿದ್ದಾರೆ. ಚಿತ್ರದ ಕುರಿತು ಕೆಲವು ಆಸಕ್ತಿದಾಯಕ ಮಾಹಿತಿಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ. ಈಗ ಚಿತ್ರದ ಖಳನಾಯಕನ ಬಗ್ಗೆ ಪ್ರಸಿದ್ಧ ನಿರ್ದೇಶಕಿ ಮತ್ತು ಪತ್ರಕರ್ತೆ ಚಿತ್ರಾ ಲಕ್ಷ್ಮಣನ್ ಮಾಹಿತಿ ನೀಡಿದ್ದಾರೆ.

ಈ ಬಗ್ಗೆ ಅವರು ಹೇಳುವಂತೆ, "ಸೂರ್ಯ ಅವರ 45ನೇ ಚಿತ್ರವನ್ನು ನಿರ್ದೇಶಿಸಲಿರುವ ಆರ್‌ಜೆ ಬಾಲಾಜಿ ಈ ಚಿತ್ರದಲ್ಲಿ ಖಳನಾಯಕನಾಗಿ ನಟಿಸುತ್ತಿದ್ದಾರೆ. ಆರ್‌ಜೆ ಬಾಲಾಜಿ ವಕೀಲರ ಪಾತ್ರದಲ್ಲಿ ನಟಿಸುತ್ತಿದ್ದಾರೆ" ಎಂದು ಚಿತ್ರಾ ಲಕ್ಷ್ಮಣನ್ ಹೇಳಿದ್ದಾರೆ. ಆರ್‌ಜೆ ಆಗಿ ಪ್ರಸಿದ್ಧರಾದ ಬಾಲಾಜಿ, ಹಾಸ್ಯನಟ, ನಾಯಕ, ನಿರ್ದೇಶಕ ಎಂಬಂತೆ ಬಹುಮುಖ ಪ್ರತಿಭೆಯನ್ನು ಪ್ರದರ್ಶಿಸುತ್ತಿದ್ದಾರೆ.

ಈಗ ಖಳನಾಯಕನ ಪಾತ್ರವನ್ನೂ ನಿರ್ವಹಿಸಲಿದ್ದಾರೆ. ಇದು ಸೂರ್ಯ 44 ಚಿತ್ರದ ಮೇಲಿನ ಕುತೂಹಲವನ್ನು ಹೆಚ್ಚಿಸಿದೆ. ಸೂರ್ಯ ಅವರ 44ನೇ ಚಿತ್ರದ ಚಿತ್ರೀಕರಣ ಒಂದೆಡೆ ಭರದಿಂದ ಸಾಗುತ್ತಿದ್ದರೆ, ಮತ್ತೊಂದೆಡೆ ಅವರು 45ನೇ ಚಿತ್ರದಲ್ಲೂ ನಟಿಸುತ್ತಿದ್ದಾರೆ. ಸೂರ್ಯ ಅವರ 44ನೇ ಚಿತ್ರ ಮೇ 1 ರಂದು ಬಿಡುಗಡೆಯಾಗಬಹುದು ಎಂಬ ವದಂತಿಗಳಿವೆ.

# ಬಾಲಿವುಡ್‌ನಲ್ಲಿ ಬೈ ಟು ಲವ್!



ಎಲ್ಲೆಲ್ಲೂ ಇವಳದ್ದೇ ಜಪ ತಪ.. ಟ್ರೆಂಡು ಬ್ಯಾಂಡು.. ಇವಳು ಕಾಲು ಇಟ್ಟಲ್ಲೆಲ್ಲಾ ಫೋಟೋ ಬೇಕು ಅಂತ ಫಾಲೋವರ್ಸ್‌ದು ಒಂದೇ ಡಿಮ್ಯಾಂಡು.. ಯೆಸ್, ಬೆಳ್ಳಿತೆರೆ ಮೇಲೆ ಕಿಸ್ ಕಿಸ್ ಕಿಸಕ್ಕ ಎನ್ನುತ್ತಿರೋ ಶ್ರೀಲೀಲಾ ಆಂಧ್ರ, ತೆಲಂಗಾಣದಲ್ಲಿ ಹಾವ ಎಬ್ಬಿಸಿ ಬಿಟ್ಟಿದ್ದಾಳೆ. ಟಾಪ್ ಹೀರೋಗಳನ್ನ ನೋಡೋಕೆ ಮುಗಿ ಬೀಳೋ ಹಾಗೆ ಶ್ರೀಲೀಲಾಗೆ ಹಪಹಪಿಸುವ ಲಕ್ಷಾಂತರ ಗಂಡ್ ಹೈಳ್ಳ ಹಬ್ ಇದೆ.

ಕನ್ನಡತಿ ಶ್ರೀಲೀಲಾ ಟಾಲಿವುಡ್‌ಅನ್ನ ಆವರಿಸಿಕೊಂಡಿದ್ದಾರೆ. ಟಾಲಿವುಡ್‌ಗೆ ಕಾಲಿಟ್ಟು ಎರಡೇ ವರ್ಷದಲ್ಲಿ ಅಂದ ಚಂದದ ಶ್ರೀಲೀಲಾಳ ಲೀಲಾವಳಿ ನೋಡಿ ಸಿನಿ ಮಂದಿ ಅಬ್ಬಬ್ಬಾ ಎನ್ನುತ್ತಿದ್ದಾರೆ. ಇದೇ ಟೈಮ್‌ನಲ್ಲಿ ಈ ಗುಂಟೂರು ಖಾರಂ ಚೆಲುವೆ ಮುಂಬೈನಲ್ಲಿ ಧಮಾಕ ಎಬ್ಬಿಸೋಕೆ ಹೊರಟು ನಿಂತಿದ್ದಾರೆ. ಬಾಲಿವುಡ್ ಹೀರೋ ಜೊತೆ ಶ್ರೀಲೀಲಾ ಬೈಟು ಲವ್ ಸ್ಟೋರಿಯೊಂದು ಸೃಷ್ಟಿಯಾಗಿದೆ..

ಸೌಂದರ್ಯದ ಗಣಿ ಆಗಿರೋ ಶ್ರೀಲೀಲಾ ತೆಲುಗು ಚಿತ್ರರಂಗದ ತುಂಬೆಲ್ಲಾ ತನ್ನ ಅಂದ ಚಂದವನ್ನ ತೆರೆದಿಟ್ಟಿದ್ದಾಯ್ತು. ಪ್ರಿನ್ಸ್ ಮಹೇಶ್ ಬಾಬು, ಪವನ್ ಕಲ್ಯಾಣ್, ಬಾಲಕೃಷ್ಣರಂತಹ ಸ್ಟಾರ್‌ಗಳ ಜೊತೆ ಸ್ಕ್ರೀನ್ ಶೇರ್ ಮಾಡಿರೋ ಈ ಬೇಬಿ 'ಪುಷ್ಪ'–2 ಸ್ಪೆಷಲ್ ಸಾಂಗ್ ನಲ್ಲಿ ಮತ್ತೇರಿಸಿ ಕಿಸಿಕ್ ಅಂದಿದ್ರು. ಈಗ ಶ್ರೀಲೀಲಾ ಹೈದರಾಬಾದ್ ಟು ಮುಂಬೈ ಅಂತ ಫ್ಲೈಟ್ ಹತ್ತಿ ಸುತ್ತುತ್ತಿದ್ದಾರೆ. ಅದಕ್ಕೆ ಕಾರಣ ಬಾಲಿವುಡ್‌ನ ಟಾಪ್ ಪ್ರೊಡ್ಯೂಸರ್ ಕರಣ್ ಜೋಹರ್..

ಕಿಸ್ ಕಿಸ್ ಕಿಸಕ್ಕ ಶ್ರೀಲೀಲಾ ಈಗ ಬಾಲಿವುಡ್‌ನ ಖ್ಯಾತ ನಿರ್ದೇಶಕ, ನಿರ್ಮಾಪಕ ಕರಣ್ ಜೋಹರ್ ಚಿತ್ರದಲ್ಲಿ ನಟಿಸ್ತಾರೆ. ಕರಣ್ ಜೋಹರ್ ಸಿನಿಮಾ ಅಂದ್ರೆ ಪೇಮೆಂಟ್ ಕೊಡದೇ ಇದ್ರೂ ಪರವಾಗಿಲ್ಲ ಚಾನ್ಸ್ ಸಿಕ್ರೆ ಸಾಕು ಅಂತ ಕಾಯೋ ಹೀರೋಯಿನ್ಸ್ ಇದ್ದಾರೆ. ಅಂತವರ ಮಧ್ಯೆ ಈಗ ಶ್ರೀಲೀಲಾ ಕರಣ್ ಜೋಹರ್ ಫಿಲ್ಮ್ ಫ್ಯಾಕ್ಟರಿಗೆ ಎಂಟ್ರಿ ಕೊಟ್ಟಿದ್ದಾರೆ.

ಕರಣ್ ಜೋಹರ್ ಪ್ರೊಡಕ್ಷನ್‌ನಲ್ಲಿ ಪ್ಯೂರ್ ಲವ್ ಸ್ಟೋರಿಯೊಂದು ಸಿದ್ಧವಾಗುತ್ತಿದ್ದು, ಆ ಸಿನಿಮಾದಲ್ಲಿ ಬಿಟೌನ್‌ನ ಸ್ಟಾರ್ ಹೀರೋ ಕಾರ್ತಿಕ್ ಆರ್ಯನ್ ಜೊತೆ ಪ್ರೀತಿಯ ಅಂಬಾರಿ ಹೊತ್ತು ಶ್ರೀಲೀಲಾ ತೆರೆ ಮೇಲೆ ಬರುತ್ತಾರೆ ಅಂತ ಹೇಳಲಾಗ್ತಿದೆ. ಶ್ರೀಲೀಲಾ ಸೊಬಗಿನ ಸೌಂದರ್ಯಕ್ಕೆ ಬಿಟೌನ್ ಮರುಳಾಗಿರೋದಂತು ನಿಜ..

**ಸೌಂದರ್ಯದ ಗಣಿ ಆಗಿರೋ ಶ್ರೀಲೀಲಾ ತೆಲುಗು ಚಿತ್ರರಂಗದ ತುಂಬೆಲ್ಲಾ ತನ್ನ ಅಂದ ಚಂದವನ್ನ ತೆರೆದಿಟ್ಟಿದ್ದಾಯ್ತು.**

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. RNI.KAR/KAN/2009/31934, ದೂರವಾಣಿ: 9448074878
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
RNI.KAR/KAN/2009/31934.VOLUME-16/ISSUE-43 Email-mussanje2010@gmail.com, Phone: 9448074878